ಸಂಪುಟ: 13 Volume | ಸಂಚಿಕೆ: 265 Issue | ಪುಟಗಳು 08 Pages | ಸೋಮವಾರ 08 ಡಿಸೆಂಬರ್ 2025 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಹೃದಯ ಮತ್ತು ಮೆದುಳಿನ ನಡುವಿನ ಸಂಘರ್ಷದಲ್ಲಿ ನಿಮ್ಮ ಹೃದಯವನ್ನು ಅನುಸರಿಸಿ.

–ಸ್ವಾಮಿ ವಿವೇಕಾನಂದ

ಶಾಲೆ ಉಳಿಸಲು ವಿದ್ಯಾರ್ಥಿಗಳ ಪ್ರತಿಭಟನೆ 6

ಫ.ಗು.ಹಳಕಟ್ಟಿ ಪ್ರಶಸ್ತಿ: ಗಡ್ಡೆ ದಂಪತಿಗೆ ಸನ್ಮಾನ 7

ಮಧ್ಯಸ್ಥಿಕೆ ವಿಧಾನ: ಪ್ರಕರಣಗಳ ಇತ್ಯರ್ಥ ಸಾಧ್ಯ 8



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ವಿ.ನಾಗನಹಳ್ಳಿಯಲ್ಲಿ ಗಜಾನನ ಯುವಕರ ಸಂಘ ಆಯೋಜಿಸಿರುವ ಕನಕದಾಸ ಮೂರ್ತಿ ಉತ್ಸವವನ್ನು ಉದ್ಘಾಟಿಸಿದರು. ಸಚಿವರಾದ ಬೈರತಿ ಮತ್ತು ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಿಮಾನ ರದ್ದು, ಖಾಸ್ ಬಸ್ ದರ್ಬಾರ್

**ಬೆಂಗಳೂರು:** ಇಂಡಿಗೋ ವಿಮಾನ ಹಾರಾಟ ರದ್ದಾಗಿರುವ ಪರಿಣಾಮ ಖಾಸಗಿ ಬಸ್‌ಗಳ ಟಿಕೆಟ್ ದರದಲ್ಲಿ ಭಾರೀ ಹೆಚ್ಚಳವಾಗಿದೆ. ಪರಿಸ್ಥಿತಿ ಲಾಭ ಪಡೆಯಲು ಖಾಸಗಿ ಸಂಸ್ಥೆಗಳು ಯತ್ನ ನಡೆಸುತ್ತಿದ್ದು, ಬೆಂಗಳೂರು–ಮುಂಬೈ ಪ್ರಯಾಣಕ್ಕಾಗಿ ಜನರಿಂದ ದುಪ್ಪಟ್ಟು–ಮೂರುಪಟ್ಟು ಹೆಚ್ಚು ಹಣವನ್ನು ವಸೂಲಿ ಮಾಡುತ್ತಿವೆ.ಬೆಂಗಳೂರಿನಿಂದ ಮುಂಬೈ ಮಾರ್ಗದಲ್ಲಿ ಸಾಮಾನ್ಯವಾಗಿ ಎಸಿ ಸ್ಲೀಪರ್ ಬಸ್ಗಳ ಟಿಕೆಟ್ ದರ 1200 ರೂ.ನಿಂದ 1400 ರೂ. ವರೆಗೆ ಇತ್ತು. ಆದರೆ, ಇಂಡಿಗೋ ವಿಮಾನ ಬಿಕ್ಕಟ್ಟು ಎದುರಾದ ಬಳಿಕ ಅದೇ ಮಾರ್ಗದ ಬಸ್‌ಗಳಲ್ಲಿ ಈಗ ಆರಂಭದ ದರವೇ 3200 ರೂ, 3800 ರೂ, 4999 ರೂ, 6500 ರೂ. ಆಗಿದೆ.



ಬೆಳಗಾವಿ: ಬಿಜೆಪಿ ವತಿಯಿಂದ ಡಿಸೆಂಬರ್ 9 ರಂದು ಬೃಹತ್ ಪ್ರತಿಭಟನೆಯ ಮುಖಾಂತರ ಬೆಳಗಾವಿಯ ಸುವರ್ಣ ಸೌಧಕ್ಕೆ ಮುತ್ತಿಗೆ ನಡೆಯುವ ಸ್ಥಳವನ್ನು ಇಂದು ವೀಕ್ಷಿಸಲಾಯಿತು. ಈ ಸಂದರ್ಭದಲ್ಲಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ, ಬೆಳಗಾವಿ ಗ್ರಾಮಾಂತರ ಅಧ್ಯಕ್ಷ ಸುಭಾಷ್ ಪಾಟೀಲ್, ರಾಜ್ಯ ಮಾಧ್ಯಮ ಸಹ ಸಂಚಾಲಕ ಪ್ರಶಾಂತ್ ಕೆಡೆಂಜಿ ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಕ್ರಿಕೆಟ್ ಸಂಸ್ಥೆ ಚುನಾವಣೆ ಜೋರು

**ಬೆಂಗಳೂರು:** ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ನೂತನ ಅಧ್ಯಕ್ಷ ಹಾಗೂ ಪದಾಧಿಕಾರಿಗಳ ಚುನಾವಣೆ ಚುರುಕಿನಿಂದ ನಡೆದಿದೆ.ಡಿಸಿಎಂ ಡಿ.ಕೆ.ಶಿವಕುಮಾರ್, ಅನಿಲ್ಕುಂಬ್ಳೆ, ಜಿ.ಆರ್.ವಿಶ್ವನಾಥ್, ಚಂದ್ರಶೇಖರ್, ರೋಜರ್ ಬಿನ್ನಿ, ನಟ ಜೈಜಗದೀಶ್, ಬ್ರಿಜೇಶ್ ಪಟೇಲ್ ಸೇರಿದಂತೆ ಹಲವು ಪ್ರತಿಷ್ಠಿತ ಗಣ್ಯರು ಕೆಎಸ್ಸಿಎ ಸದಸ್ಯರಾಗಿದ್ದು, ಇಂದು ಬೆಳಗ್ಗೆಯೇ ಮತದಾನದಲ್ಲಿ ಪಾಲ್ಗೊಂಡು ಗಮನ ಸೆಳೆದರು. ಬ್ರಿಜೇಶ್‌ಪಟೇಲ್ ಗುಂಪಿನಿಂದ ಪತ್ರಿಕೋದ್ಯಮಿ ಶಾಂತಕುಮಾರ್ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದರೆ, ಮಾಜಿ ಕ್ರಿಕೆಟಿಗ ವೆಂಕಟೇಶ್ ಪ್ರಸಾದ್ ಅವರ ಪ್ರತಿಸ್ಪರ್ಧಿಯಾಗಿ ಕಣಕ್ಕಿಳಿದಿರುವುದು ಗಮನ ಸೆಳೆದಿದೆ.

## ವೃಕ್ಷಥಾನ್ ಪಾರಂಪರಿಕ ಓಟ



**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಅರಣ್ಯ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ವೃಕ್ಷ ಅಭಿಯಾನ ಪ್ರತಿಷ್ಠಾನ ಇವರ ಸಂಯುಕ್ತಾಶ್ರಯದಲ್ಲಿ ಪರಿಸರ, ಪ್ರಾಚೀನ ಸ್ಮಾರಕಗಳ ಸಂರಕ್ಷಣೆಗೆ ಆಯೋಜಿಸಿದ ವೃಕ್ಷಥಾನ್ ಪಾರಂಪರಿಕ ಓಟ–2025 ಭಾನುವಾರ ಯಶಸ್ವಿಯಾಗಿ ನಡೆಯಿತು. ಇಂದು ನಡೆದ 21 ಕಿ.ಮೀ, 10 ಕಿ.ಮೀ ಹಾಗೂ 5 ಕಿ.ಮೀ ವಿಭಾಗಗಳಲ್ಲಿ ನಡೆದ ವೃಕ್ಷಥಾನ್ ಪಾರಂಪರಿಕ ಓಟ ಕಾರ್ಯಕ್ರಮದಲ್ಲಿ ಹಲವು ಖ್ಯಾತನಾಮರು ಉತ್ಸಾಹದಿಂದ ಪಾಲ್ಗೊಂಡಿದ್ದರು. ಮ್ಯಾರಥಾನ್ಗೆ ಚಾಲನೆ ನೀಡಿದ ಅರಣ್ಯ ಸಚಿವರಾದ ಈಶ್ವರ ಖಂಡ್ರೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು 5 ಕಿ.ಮೀ. ಓಡಿ ಯುವಕರನ್ನು ಹುರಿದುಂಬಿಸಿದ್ದಾರೆ.

## ಸೂಕ್ತ ಪರಿಹಾರಕ್ಕಾಗಿ ಆಗ್ರಹ



**ಹುಮನಾಬಾದ್:** ಜಮೀನು ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ನೀಡುವಂತೆ ಒತ್ತಾಯಿಸಿ, ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣೆ ಸಮಿತಿ ಹಾಗೂ ಬೀದರ್ ಸಮಗ್ರ ಅಭಿವೃದ್ಧಿ ಜಂಟಿ ಕ್ರಿಯಾ ಸಮಿತಿ ವತಿಯಿಂದ ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಬಳಿಕ ಕಾರಂಜಾ ಸಂತ್ರಸ್ತರ ಹಿತರಕ್ಷಣಾ ಸಮಿತಿಯ ಅಧ್ಯಕ್ಷ ಚಂದ್ರಶೇಖರ ಪಾಟೀಲ್ ಹುಚಕನಳ್ಳಿ ಮಾತನಾಡಿ, ಕಾರಂಜಾ ಮುಳುಗಡೆ ಸಂತ್ರಸ್ತ ರೈತರಿಗೆ ವೈಜ್ಞಾನಿಕ ಆಧಾರದಂತೆ ಈಗಾಗಲೇ ನ್ಯಾಯಾಲಯ ನೀಡಿರುವ ತೀರ್ಪಿನಂತೆ ಸಮರ್ಪಕ ಪರಿಹಾರ ಕಾಲ ಮಿತಿಯಲ್ಲಿ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ. ಗಣ್ಯರಾದ ಅರವಿಂದಕುಮಾರ ಅರಳಿ, ಲಕ್ಷ್ಮೀಬಾಯಿ ಸಂಗೋಳಗಿ, ರಾಜಕುಮಾರ ಕಮಲಾಪೂರೆ, ವಿದ್ಯಾವತಿ ಔರಾದ, ಅಹ್ಮದಮಿಯ ಬಗದಲ, ರೇವಣಪ್ಪ ರಂಜೋಳ, ರಾಜಶೇಖರ, ಯೂಸುಫಮಿಯ ರೇಕುಳಗಿ ಇದ್ದರು.

# ದೋಸ್ತಿಯ ದನಿ ಕೈ ಪ್ರತಿಧ್ವನಿ

### ಇಂದಿನಿಂದ ಚಳಿಗಾಲದ ಅಧಿವೇಶನ | ಪ್ರತಿಕ್ಷಗಳ ಬಳಿ ಟೀಕಾಸ್ತ್ರ | ಕಾಂಗ್ರೆಸ್ ಒಗ್ಗಟ್ಟಿನ ಮಂತ್ರ

• ಮಲ್ಲಮ್ಮ ನುಡಿ ಬೆಂಗಳೂರು

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಇಂದಿನಿಂದ(ಡಿ.8) ಚಳಿಗಾಲದ ಅಧಿವೇಶನ ಆರಂಭವಾಗಲಿದೆ. ಆಡಳಿತರೂಢ ಕಾಂಗ್ರೆಸ್ ಕಟ್ಟಿಹಾಕಲು ಬಿಜೆಪಿ, ಜೆಡಿಎಸ್ ತಂತ್ರ ರೂಪಿಸಿದರೆ, ಕಾಂಗ್ರೆಸ್ ಒಮ್ಮತದ ಮಂತ್ರ ಪಠಿಸಿದೆ. ದೆಹಲಿಯಲ್ಲಿ ನಡೆದ ಬಾಂಬ್ ಸ್ಫೋಟ ದೇಶವನ್ನೇ ಬೆಚ್ಚಿ ಬೀಳಿಸಿದ್ದು, ಅದೇ ಮಾದರಿಯಲ್ಲಿ ಬೇರೆಬೇರೆ ರಾಜ್ಯಗಳ ಪ್ರಮುಖ ಕೇಂದ್ರಗಳ ಮೇಲೆ ದಾಳಿ ನಡೆಯುವ ಮುನ್ಸೂಚನೆ ಇದೆ ಎಂದು ಕೇಂದ್ರ ಗುಪ್ತಚರ ಇಲಾಖೆ ಎಚ್ಚರಿಕೆ ಸಂದೇಶ ರವಾನಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ.

**ಪಲೀಸ್ ಬಿಗಿಭದ್ರತೆ:** ಆರು ಸಾವಿರ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಭದ್ರತೆಗೆ ನಿಯೋಜಿಸಲಾಗಿದೆ. ಸುವರ್ಣಸೌಧದ ಸುತ್ತಮುತ್ತ ಮೂರು ಕಿಲೋಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

**ಕಾವಲು ಯಾರ್‍ಯಾರು..?:** ಬೆಳಗಾವಿ ನಗರ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ್ ಬೋರಸೆ ಅವರ ನೇತೃತ್ವದಲ್ಲಿ 6 ಎಸ್‌ಪಿ ದರ್ಜೆಯ ಐಪಿಎಸ್ ಅಧಿಕಾರಿಗಳ ಕಣ್ಗಾವಲಿನಲ್ಲಿ 146 ಹಿರಿಯ ಪೊಲೀಸ್ ಅಧಿಕಾರಿಗಳು, 3820 ಪೊಲೀಸ್ ಸಿಬ್ಬಂದಿಗಳು, 500 ಹೋಮ ಗಾರ್ಡ್, 8 ಕ್ಷಿಪ್ರ ಕಾರ್ಯಾಚರಣೆ ಪಡೆ, 10ಡಿಎ ಆರ್ ತುಕಡಿ, 35ಕೆಎಸ್‌ಆರ್‌ಪಿ ತುಕಡಿ, 1 ಬಾಂಬ್ ಸ್ಕ್ವಾಡ್, 1 ಗರುಡಾ ಪೊಲೀಸ್, 16 ವಿಧ್ವಂಸಕ ಕೃತ್ಯ ತಪಾಸಣೆ ತಂಡವನ್ನು ನಿಯೋಜಿಸಲಾಗಿದೆ.



### ಒಗ್ಗಟ್ಟಿನ ಮಂತ್ರ ಪಠಿಸಿದ ಕಾಂಗ್ರೆಸ್

ಅಧಿಕಾರಹಂಚಿಕೆಯಗೊಂದಲಬದಿಗಿಟ್ಟು,ಒಮ್ಮತದಿಂದ ವಿಧಾನಮಂಡಲದಅಧಿವೇಶನವನ್ನುನಿಭಾಯಿಸುವ ನಿಟ್ಟಿನಲ್ಲಿಕಾಂಗ್ರೆಸ್ ಮುಂದಾಗಿದೆ.ಸಿಎಂಸಿದ್ದರಾಮಯ್ಯ ಅವರಿಂದ ಅಧಿಕಾರ ಕಸಿದುಕೊಳ್ಳುವ ಪ್ರಯತ್ನವನ್ನು ಉಪಮುಖ್ಯಮಂತ್ರಿಡಿ.ಕೆ.ಶಿವಕುಮಾರ್ ನಿರಂತರವಾಗಿ ಮುಂದುವರಿಸಿದ್ದಾರೆ. ಅಧಿಕಾರ ಉಳಿಸಿಕೊಳ್ಳಲು ಸಿದ್ದರಾಮಯ್ಯ ಮತ್ತು ಅವರ ಬಣ ನಾನಾರೀತಿಯ ತಂತ್ರಗಾರಿಕೆಗಳನ್ನು ಅನುಸರಿಸುತ್ತಿದೆ.

### ಅಧಿವೇಶನಕ್ಕೆ ಪ್ರತಿಭಟನೆಗಳ ಬಿಸಿ

ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲೇ ವಿವಿಧ ಬೇಡಿಕೆಗಳ ಈಡೇರಿ–ಕೆಗಾಗಿ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸುವ ಸಾಧ್ಯತೆಯಿದ್ದು, ಮೆಕ್ಕೆಜೋಳ, ಹೆಸರು ಕಾಳು ಬೆಲೆ ಕುಸಿತವಾಗಿರುವುದು ರೈತರನ್ನು ಕಂಗೆಡಿಸಿದೆ. ಕಬ್ಬು ಬೆಳೆಗಾರರ ಪ್ರತಿಭಟನೆ ತಾತ್ಕಾಲಿಕವಾಗಿ ಶಮನವಾಗಿದ್ದರೂ, ಬೇಡಿಕೆ ಪೂರ್ಣವಾಗಿ ಈಡೇರಿಲ್ಲ. ಬಾಗಲಕೋಟೆ, ಇತರ ಜಿಲ್ಲೆಗಳ ಕಬ್ಬು ಬೆಳೆಗಾರರು ಪ್ರತಿಭಟಿಸುವ ಸಾಧ್ಯತೆ ಇದೆ.

### ಪ್ರತ್ಯೇಕ ರಾಜ್ಯದ ಬೇಡಿಕೆ ಮುನ್ನೆಲೆಗೆ

ಉತ್ತರಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯಾಗಿಲ್ಲ ಎಂಬ ಕಾರಣಕ್ಕಾಗಿ ಪ್ರತ್ಯೇಕ ರಾಜ್ಯದ ಬೇಡಿಕೆಯು ಮತ್ತೆ ಮುನ್ನೆಲೆಗೆ ಬಂದಿದೆ. ಒಳ ಮೀಸಲಾತಿಯ ಗೊಂದಲಗಳು ಜೀವಂತವಾಗಿವೆ. ಪರಿಶಿಷ್ಟ ಸಮುದಾಯದ ಸಂಘಟನೆಗಳ ಪ್ರತಿಭಟನೆಯೂ ನಡೆಯುವ ಸಾಧ್ಯತೆ ಇದೆ. ಅಂಗನವಾಡಿ, ಆಶಾ ಕಾರ್ಯಕರ್ತರು. ಗ್ರಾ. ಪಂ. ದಿನಗೂಲಿ ನೌಕರರು ವೇತನ ಪರಿಷ್ಕಾರಣೆ ಸೇರಿ ಸಮಸ್ಯೆ ಬಗ್ಗೆ ಅಧವೇಶನದಲ್ಲಿಚರ್ಚೆಯಾಗಲಿವೆ.

### ಪ್ರತಿ ಪಕ್ಷಗಳ ಬತ್ತಳಿಕೆಯಲ್ಲಿ ಅಸಲಿ ಬಾಣ

ಪಂಚಖಾತ್ರಿ ಯೋಜನೆಗಳಿಂದಾಗಿ ರಾಜ್ಯದ ಜನ ಸುಭಿಕ್ಷವಾಗಿದ್ದಾರೆ ಎಂದು ಆಡಳಿತ ಪಕ್ಷ ಪ್ರತಿಪಾದಿಸುತ್ತಿದೆ. ಪಂಚಖಾತ್ರಿಗಳಿಗೆ ಹೆಚ್ಚು ಹಣ ಖರ್ಚು ಮಾಡಿ ಅಭಿವೃದ್ಧಿ ಕಾರ್ಯಗಳನ್ನು ಕಡೆಗಣಿಸಲಾಗುತ್ತಿದೆ ಎಂದು ಆಡಳಿತ ಪಕ್ಷದ ಶಾಸಕರೇ ಬಹಿರಂಗ ಟೀಕೆಗಳನ್ನು ಮಾಡಿದ್ದಾರೆ. ಎರಡೂವರೆ ವರ್ಷಗಳಲ್ಲಿ ಅಭಿವೃದ್ಧಿಯೇ ಆಗಿಲ್ಲ ಎಂದು ಪ್ರತಿಪಕ್ಷ ಪ್ರತಿ ಬಾರಿ ಟೀಕಿಸುತ್ತಿದ್ದು, ಈ ಚಳಿಗಾಲದ ಅಧಿವೇಶನದಲ್ಲೂ ಮುಂದುವರೆಯಲಿವೆ.

## ಕಾಂಗ್ರೆಸ್ ಕಂಸತತ್ವ ನನ್ನದು ಕೃಷ್ಣತತ್ವ



**ನವದೆಹಲಿ:** ಭಗವದ್ಗೀತೆಯನ್ನು ಶಾಲಾ ಮಕ್ಕಳಿಗೆ ಬೋಧಿಸಬೇಕು ಎಂದು ಪುನರುಚ್ಚರಿಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು; ತಮ್ಮನ್ನು ಮನುವಾದಿ ಎಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸೈದ್ಧಾಂತಿಕ ಅಧಃಪತನ ಎಂದ ಸಚಿವ ಹೆಚ್.ಸಿ. ಮಹದೇವಪ್ಪ ಇಬ್ಬರಿಗೂ ತಿರುಗೇಟು ನೀಡಿದ್ದಾರೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಕೇಂದ್ರ ಸಚಿವರು; ನಾನು ಕೃಷ್ಣತತ್ವ ನಂಬಿದವನೇ ಹೊರತು ಕಂಸ ಹಿಂಸೆಯನ್ನಲ್ಲ. ಕಾಂಗ್ರೆಸ್ ಕಂಸನಲ್ಲಿ ನಂಬಿಕೆ ಇಟ್ಟಿದೆ ಎಂದು ಕಟುವಾಗಿ ಟೀಕಿಸಿದ್ದಾರೆ.

ನನ್ನನ್ನು ಮನುವಾದಿ ಎಂದಿರುವ ಮುಖ್ಯಮಂತ್ರಿ, ಸೈದ್ಧಾಂತಿಕ ಅಧಃಪತನ ಎಂದು ತಾಳ ಹಾಕಿದ ಸಚಿವ ಮಹದೇವಪ್ಪ; ಇವರಿಬ್ಬರೂ ಶಾಲಾ ಮಕ್ಕಳಿಗೇನು ಬೋಧಿಸುತ್ತಾರೆ ಎಂಬುದನ್ನು ಹೇಳಿಲಿ. ಬುದ್ಧಿಗೇಡಿತನಕ್ಕೂ ಮಿತಿ ಬೇಡವೇ? ಎಂದು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ.

## ಎಚ್‌ಡಿಕೆಗೆ ಟೀಕಿಸುವ ನೈತಿಕ ಹಕ್ಕಿಲ್ಲ..!



**ಹಾಸನ:** ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ರಾಜ್ಯಕ್ಕೆ ಸಂಬಂಧಿಸಿದ ವಿಷಯಗಳನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸುವಲ್ಲಿ ವಿಫಲರಾಗಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಮೇಕೆದಾಟು ಮತ್ತು ಭದ್ರಾ ಮೇಲ್ದಂಡೆ ಸೇರಿದಂತೆ ಹಲವಾರು ನೀರಾವರಿ ಯೋಜನೆಗಳ ಬಗ್ಗೆ ಹಾಗೂ ಕೇಂದ್ರ ಸರ್ಕಾರ ಜಿಎಸ್ಟಿ ದರಗಳನ್ನು ಕಡಿಮೆ ಮಾಡಿದ ನಂತರ ರಾಜ್ಯಕ್ಕೆ ಆಗಿರುವ ನಷ್ಟದ ಬಗ್ಗೆ ಎಚ್‌ಡಿಕೆ ಮೌನವಾಗಿದ್ದಾರೆ ಎಂದ್ದಾರೆ.

ನಮ್ಮನ್ನು ಟೀಕಿಸಲು ಕುಮಾರಸ್ವಾಮಿಗೆ ಯಾವ ನೈತಿಕ ಹಕ್ಕಿದೆ? ಮೊದಲು ಅವರು ಕರ್ನಾಟಕ ಮತ್ತು ಅವರ ಕ್ಷೇತ್ರ ಮಂಡ್ಯಕ್ಕೆ ಕೇಂದ್ರ ಸಚಿವರಾಗಿ ನೀಡಿದ ಕೊಡುಗೆಗಳನ್ನು ವಿವರಿಸಲಿ. ಕೇಂದ್ರವು ಮೇಕೆದಾಟು ಯೋಜನೆಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದ್ದರೂ ಕುಮಾರಸ್ವಾಮಿ ಇನ್ನೂ ಮೇಕೆದಾಟು ಬಗ್ಗೆ ಮಾತನಾಡಿಲ್ಲ ಎಂದು ದೂರಿದ್ದಾರೆ.

## ಅದ್ದೂರಿಯ ಮಾಣಿಕಪ್ರಭು ದರ್ಬಾರ್



• ಮಲ್ಲಮ್ಮ ನುಡಿ ಹುಮನಾಬಾದ್

ಅತಿ ವೈಭವ ಮತ್ತು ಭಕ್ತಿ ಭಾವದಿಂದ್ನಡೆದದ ಶ್ರೀ ಮಾಣಿಕಪ್ರಭು ದರ್ಬಾರ್ ಕಾರ್ಯಕ್ರಮ ರಾತ್ರಿ ಅದ್ದೂರಿಯಾಗಿ ಮುಕ್ತಾಯಗೊಂಡಿತು. ಸಾವಿರಾರು ಭಕ್ತರು ಶ್ರೀ ಮಾಣಿಕಪ್ರಭು ದೇವರ ದರ್ಶನ ಪಡೆಯಲು ಮತ್ತು ದರ್ಬಾರ್ ಕಾರ್ಯಕ್ರಮದ ಮಹಿಮೆ ಅನುಭವಿಸಲು ಮಾಣಿಕನಗರಕ್ಕೆ ಹರಿದು ಬಂದರು.

ಕಾರ್ಯಕ್ರಮದ ಅಂಗವಾಗಿ ನಡೆದ ಗುರುಪೂಜೆ, ಮಹಾಮಂಗಳಾರತಿ, ಧರ್ಮೋಪನ್ಯಾಸಗಳು ಹಾಗೂ ಭಜನೆ–ಕೀರ್ತನೆಗಳು ಭಕ್ತರನ್ನು ಆಕರ್ಷಿಸವು. ಪೂಜ್ಯ ಶ್ರೀಮಠದ ಡಾ. ಜ್ಞಾನರಾಜ ಪ್ರಭುಗಳು ದರ್ಬಾರ ಉದ್ದೇಶಿಸಿ ಆಶೀರ್ವಚನ ನೀಡಿ, ಪರಂಪರೆಯ ಪ್ರಕಾರ ನಡೆದ ವಿಧಿ–ವಿಧಾನಗಳು ಭಕ್ತರ ಮನಸ್ಸನ್ನು ಭಾವವೈಭವದಿಂದ ತುಂಬಿಸಿದರು. ದರ್ಬಾರ್ ವೇದಿಕೆಯಲ್ಲಿ ಪ್ರಮುಖ ವಕ್ತಾರರು ಶ್ರೀ ಮಾಣಿಕಪ್ರಭು ಮಹಾರಾಜರ ಜೀವನ, ದತ್ತತತ್ವ, ಹಾಗೂ ಮೌಲ್ಯಾಧಾರಿತ ಬದುಕಿನ ಮಹತ್ವ ಕುರಿತು ಪ್ರೇರಣಾದಾಯಕ ಸಂದೇಶ ನೀಡಿದರು. ರಾತ್ರಿ ನಡೆದ ದೀಪಾಲಂಕಾರ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಸ್ತ ಭಕ್ತರಿಗೆ ವಿಶೇಷ ಆಕರ್ಷಣೆಯಾಗಿತ್ತು. ಭಕ್ತರ ಸುರಕ್ಷತೆ ಮತ್ತು ಸೌಕರ್ಯಕ್ಕಾಗಿ ಸ್ಥಳೀಯ ಆಡಳಿತ, ಪೊಲೀಸ್ ಇಲಾಖೆ ಮತ್ತು ಸೇವಾ ದಳಗಳ ವತಿಯಿಂದ ಭದ್ರ ಮತ್ತು ಸುಗಮ ವ್ಯವಸ್ಥೆ ಕಲ್ಪಿಸಲಾಗಿತ್ತು. ಭಕ್ತರ ಭಕ್ತಿ, ಶಿಸ್ತಿನ ಪಾಲನೆ ಮತ್ತು ಸೇವಾ ದಳಗಳ ನಿಸ್ವಾರ್ಥ ಸೇವೆ ಶ್ಲಘಾನೆಗೆ ಕಾರಣವಾಗಿದೆ.

## ಬಜರಂಗದಳಕ್ಕೆ ಪ್ರಿಯಾಂಕ್ ಪ್ರಶ್ನೆ

• ಮಲ್ಲಮ್ಮ ನುಡಿ ಬೆಂಗಳೂರು

**ಗಣೇಶ್ ಗೌಡ ಕೊಲೆ: ಬಜರಂಗದಳ ಕಾರ್ಯಕರ್ತ ಸೆರೆ**

ಕಾಂಗ್ರೆಸ್ ಕಾರ್ಯಕರ್ತ ಗಣೇಶ್ ಗೌಡ ಕೊಲೆ ಪ್ರಕರಣದಲ್ಲಿ ಬಜರಂಗದಳ ಕಾರ್ಯಕರ್ತನೊಬ್ಬನನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದು, ಇದರ ಬೆನ್ನಲ್ಲೇ ಬಿಜೆಪಿ ವಿರುದ್ಧ ಕಾಂಗ್ರೆಸ್ ಕಿಡಿಕಾರಿದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸಚಿವ ಪ್ರಿಯಾಂಕ್ ಖರ್ಗೆಯವರು, ಹೆಣ ಬಿದ್ದರೆ ರಣ ಹದ್ದುಗಳಂತೆ ಹಾರಿ ಬರುವ ಬಿಜೆಪಿ ನಾಯಕರು ಸಮಾಜದ ಸಾಮರಸ್ಯ ಕದಡುವ ಈ ಕುಕೃತ್ಯದ ಬಗ್ಗೆ ನೀಡುವ ಉತ್ತರವೇನು? ಎಂದು ಪ್ರಶ್ನಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲೂಕಿನ ಸಖರಾಯಪಟ್ಟಣದ ಕಾಂಗ್ರೆಸ್ ಕಾರ್ಯಕರ್ತ ಗಣೇಶ್ ಗೌಡ ಅವರ ಹತ್ಯೆಯನ್ನು ತೀವ್ರವಾಗಿ ಖಂಡಿಸುತ್ತಾ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಅವರ ಕುಟುಂಬ ಸದಸ್ಯರೊಂದಿಗೆ ನಾನೂ ಸಮಾನ ದುಃಖಿತನಾಗಿದ್ದೇನೆಂದು ಹೇಳಿದ್ದಾರೆ. ಸಂಘ ಪಾರಿವಾರದ ಭಯೋತ್ಪಾದಕ ಮುಖಗಳು ಬಯಲಾಗುತ್ತಿವೆ. ನಮ್ಮ ಸರ್ಕಾರವು ಕೊಲೆಗಡುಕರಿಗೆ ಗರಿಷ್ಠ ಶಿಕ್ಷೆಯಾಗುವಂತೆ ನೋಡಿಕೊಳ್ಳುವ ಮೂಲಕ ಗಣೇಶ್ ಅವರ ಸಾವಿಗೆ ನ್ಯಾಯ ದೊರಕಿಸಿಕೊಡಲಿದೆ. ಶಾಖೆಯಲ್ಲಿ ಇಂತಹ ಪಾತಕ ಪಾಠಗಳನ್ನು ಹೇಳಿಕೊಡುವುದೇ ಸಂಘ ಪರಿವಾರದ ಸಂಸ್ಕಾರವೇ ಎಂದು ಪ್ರಶ್ನಿಸಿದ್ದಾರೆ.

## ಬೆಂಕಿ ಜ್ವಾಲೆಗೆ ಜೀವಗಳು ಬಲಿ



**ಪಣಜಿ:** ನೈಟ್‌ಕ್ಲಬ್‌ನಲ್ಲಿ ಬೆಂಕಿ ಕಾಣಿಸಿಕೊಂಡಾಗ ಕನಿಷ್ಠ 100 ಜನರು ನೃತ್ಯ ಮಹಡಿಯಲ್ಲಿದ್ದರು ಮತ್ತು ತಪ್ಪಿಸಿಕೊಳ್ಳುವ ಪ್ರಯತ್ನದಲ್ಲಿ ಅವರಲ್ಲಿ ಕೆಲವರು ಕೆಳಗಡೆಗೆ ಇದ್ದ ಅಡುಗೆಮನೆಗೆ ಓಡಿಹೋಗಿ ಅಲ್ಲಿ ಸಿಬ್ಬಂದಿಯೊಂದಿಗೆ ಸಿಕ್ಕಿಹಾಕಿಕೊಂಡರು ಎಂದು ಪ್ರತ್ಯಕ್ಷದರ್ಶಿಯೊಬ್ಬರು ತಿಳಿಸಿದ್ದಾರೆ. ಪ್ರವಾಸಿಗರು ನೃತ್ಯ ಮಾಡುತ್ತಿದ್ದ ಕ್ಲಬ್‌ನ ಮೊದಲ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ಕೆಲವು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

ಬೆಂಕಿ ಜ್ವಾಲೆ ಕಾಣುತ್ತಿದ್ದಂತೆ ಗದ್ದಲ ಉಂಟಾಯಿತು. ನಾವು ಕ್ಲಬ್‌ನಿಂದ ಹೊರಗೆ ಓಡಿಹೋದಾಗ ಇಡೀ ಕಟ್ಟಡಕ್ಕೆ ಬೆಂಕಿ ಹೊತ್ತಿಕೊಂಡಿರುವುದನ್ನು ನೋಡಿದೆವು ಎಂದು ಹೈದರಾಬಾದ್‌ನ ಪ್ರವಾಸಿ ಫಾತಿಮಾ ಶೇಖ್ ಮಾಧ್ಯಮಕ್ಕೆ ತಿಳಿಸಿದರು. ವಾರಾಂತ್ಯವಾಗಿದ್ದರಿಂದ ನೈಟ್‌ಕ್ಲಬ್ ಕಿಕ್ಕಿರಿದು ತುಂಬಿತ್ತು ಮತ್ತು ಕನಿಷ್ಠ 100 ಜನರು ನೃತ್ಯ ಮಹಡಿಯಲ್ಲಿದ್ದರು ಎಂದು ಅವರು ಹೇಳಿದರು.

ಬೆಂಕಿ ಹೊತ್ತಿಕೊಂಡ ನಂತರ, ಕೆಲವು ಪ್ರವಾಸಿಗರು ಕೆಳಗೆ ಓಡಲು ಪ್ರಾರಂಭಿಸಿದರು ಮತ್ತು ಗಲಿಬಿಲಿಯಲ್ಲಿ, ನೆಲ ಮಹಡಿಯಲ್ಲಿರುವ ಅಡುಗೆಮನೆಗೆ ಹೋದರು ಎಂದು ಶೇಖ್ ಹೇಳಿದರು. ಅವರು (ಪ್ರವಾಸಿಗರು) ಇತರ ಸಿಬ್ಬಂದಿಯೊಂದಿಗೆ ಅಲ್ಲಿ ಸಿಕ್ಕಿಹಾಕಿಕೊಂಡರು. ಅನೇಕರು ಕ್ಲಬ್‌ನಿಂದ ಹೊರಗೆ ಓಡಿಹೋಗುವಲ್ಲಿ ಯಶಸ್ವಿಯಾದರು ಎಂದು ಅವರು ವಿವರಿದರು. ತಾಳೆ ಎಲೆಗಳಿಂದ ಮಾಡಲ್ಪಟ್ಟ ತಾತ್ಕಾಲಿಕ ನಿರ್ಮಾಣವಿತ್ತು, ಅದು ಸುಲಭವಾಗಿ ಬೆಂಕಿ ಹೊತ್ತಿಕೊಲು ಸಾಧ್ಯವಾಗಿದೆ. ನೈಟ್‌ಕ್ಲಬ್ ಅರ್ಪೋರಾ ನದಿಯ ಹಿನ್ನೀರಿನಲ್ಲಿದೆ ಮತ್ತು ಕಿರಿದಾದ ಪ್ರವೇಶ ಮತ್ತು ನಿರ್ಗಮನ ಮಾರ್ಗವನ್ನು ಹೊಂದಿದೆ.

ಕಿರಿದಾದ ಲೇನ್‌ಗಳ ಕಾರಣ ಸುಮಾರು 400 ಮೀಟರ್ ದೂರದಲ್ಲಿ ಅಗ್ನಿಶಾಮಕ ಟ್ಯಾಂಕರ್ ವಾಹನ ನಿಲ್ಲಿಸಬೇಕಾಗಿ ಬಂತು. ಇದರಿಂದ ಬೆಂಕಿಯನ್ನು ನಿಯಂತ್ರಿಸುವುದು ಸವಾಲಿನ ಕೆಲಸವಾಗಿತ್ತು. ನೆಲ ಮಹಡಿಯಲ್ಲಿ ಸಿಲುಕಿಕೊಂಡಿದ್ದರಿಂದ ಹೆಚ್ಚಿನ ಸಾವುಗಳು ಉಸಿರುಗಟ್ಟುವಿಕೆಯಿಂದ ಸಂಭವಿಸಿವೆ ಎಂದು ಅವರು ಹೇಳಿದರು.

# ವರದಿಗಾರಿಕೆ ಅಧಿಕಾರ ಅಲ್ಲ, ಇದೊಂದು ಮಹತ್ವದ ಜವಾಬ್ದಾರಿ: ಈಶ್ವರ ಖಂಡ್ರೆ

**ಮಲ್ಲಮ್ಮ ನುಡಿ ವಾರ್ತೆ ಬೀದರ್:** ವರದಿಗಾರಿಕೆ ಅಧಿಕಾರ ಅಲ್ಲ. ಇದೊಂದು ಮಹತ್ವದ ಜವಾಬ್ದಾರಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಶನಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಅಭಿನಂದನಾ ಸಮಾರಂಭ ಹಾಗೂ ಭೀಮಣ್ಣ ಖಂಡ್ರೆ ಅವರ ಹೆಸರಿನಲ್ಲಿ ಸಚಿವ ಈಶ್ವರ ಖಂಡ್ರೆ ಅವರು ಸ್ಥಾಪಿಸಿತ್ತಿರುವ ದತ್ತಿ ನಿಧಿಯ ಚೆಕ್ ಹಸ್ತಾಂತರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಹಿಂದಿಗಿಂತಲೂ ಪ್ರಸ್ತುತ ಮಾಧ್ಯಮ ಕ್ಷೇತ್ರದ ಜವಾಬ್ದಾರಿ ಹೆಚ್ಚಿದೆ. ಸೌಹಾರ್ದತೆ ಭಾರತ ಕಟ್ಟಬೇಕಾದರೆ ನೈಜ ವರದಿಗಳಿಗೆ ಆದ್ಯತೆ ನೀಡಬೇಕಾಗಿದೆ ಎಂದರು.

ಮಾಧ್ಯಮಗಳು ತಮ್ಮ ವರದಿಯಲ್ಲಿ ನೈಜತೆ ಮತ್ತು ಪಾರದರ್ಶಕತೆ ಕಾಪಾಡಿಕೊಂಡಾಗ ಮಾಧ್ಯಮರಂಗಕ್ಕೆ ಗೌರವ ಹೆಚ್ಚಲು ಸಾಧ್ಯವಾಗುತ್ತದೆ. ತಮ್ಮ ಸ್ಥಾನಮಾನಕ್ಕೆ ಧಕ್ಕೆ ಬರದಂತೆ ಪತ್ರಕರ್ತರು ಕಾರ್ಯ ನಿರ್ವಹಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಮಾಧ್ಯಮ ಸಮಾಜದಲ್ಲಿ ಪರಿವರ್ತನೆ ತರುವಲ್ಲಿ ಅಪಾರ ಕೊಡುಗೆ ಇದೆ. ಮಹಾತ್ಮ ಗಾಂಧಿ ಡಾ.ಅಂಬೇಡ್ಕರ್ ಸೇರಿದಂತೆ ಹಲವರು ಪತ್ರಕರ್ತರಾಗಿ ಕೆಲಸ ಮಾಡಿದ್ದಾರೆ. ಸುಧಾರಣೆ ಮಾಡುವ ಕೆಲಸ ಮಾಧ್ಯಮ ಮಾಡುತ್ತಿದೆ. ಪತ್ರಕರ್ತರಿಗೆ ಸೂಕ್ತ ಭದ್ರತೆ, ರಕ್ಷಣೆ ಕೊಡುವ ಕೆಲಸ ಮಾಡಬೇಕಾಗಿದೆ ಎಂದರು.ಸ್ವಾತಂಪೂರ್ವದಲ್ಲಿ ಅನ್ಯಾಯದ ವಿರುದ್ಧ ಪತ್ರಕರ್ತರಾಗಿ ಡಾ.ಅಂಬೇಡ್ಕರ್ ಅವರು ಪರಿಣಾಮಕಾರಿಯಾಗಿ ಕೆಲಸ ಮಾಡಿದ್ದರು. ಇಂದು ಅವರ ಪರಿನಿಬ್ಬಾಣ ದಿನದಂದೇ ಅಭಿನಂದನಾ ಸಮಾರಂಭ ಹಾಗೂ ದತ್ತಿ ನಿಧಿ ಚೆಕ್ ಹಸ್ತಾಂತರ ಕಾರ್ಯಕ್ರಮ ಆಯೋಜಿಸಿದ್ದು ಉತ್ತಮ.



ಸಂಘದ ನೂತನ ಅಧ್ಯಕ್ಷ ಶಿವಾನಂದ ತಗಡೂರು ಸರಳ, ಸಜ್ಜನಿಕೆ ವ್ಯಕ್ತಿ. ಕೋವಿಡ್ ವೇಳೆ ಜೀವದ ಹಂಗು ತೊರೆದು ಪತ್ರಕರ್ತರ ಕೆಲಸ ಮಾಡಿದ್ದಾರೆ. ಕರೊನಾ ವೇಳೆ ಮಡಿದ ಪತ್ರಕರ್ತರ ಪರಿಹಾರ ಕೊಡಿಸುವಲ್ಲಿ ತಗಡೂರು ಸಾಕಷ್ಟು ಪ್ರಯತ್ನಿಸಿದ್ದರು. ಯಾವುದೇ ಚುನಾವಣೆ ಇಲ್ಲದೆ ಸಂಘದ ಬೀದರ್ ಜಿಲ್ಲಾ ಘಟಕಕ್ಕೆ ಆನಂದ ದೇವಪ್ಪ ಅವರನ್ನು ನೇಮಕ ಮಾಡಿದ್ದು ಸಂತಸ ತಂದಿದೆ ಎಂದು ಹೇಳಿದರು.ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕ ರಚನೆ ಸಂಬಂಧ ಅಡಾಕ್ ಸಮಿತಿ ರಚಿಸಿಸಿದ್ದು, ಈ ಸಮಿತಿಗೆ ಆನಂದ ದೇವಪ್ಪ ಅವರನ್ನು ಮುಖ್ಯಸ್ಥರನ್ನಾಗಿ ಹಾಗೂ ಸದಸ್ಯರಾಗಿ ಅಪ್ಪಾರಾವ ಸೌದಿ, ಶಿವಕುಮಾರ ಸ್ವಾಮಿ ಅವರನ್ನು ನೇಮಿಸಲಾಗಿದೆ ಎಂದು ಹೇಳಿದರು.

ಬೀದರ್ ಜಿಲ್ಲೆಯ ಸಂಘದ ಸರ್ವ ಸದಸ್ಯರು ಒಗ್ಗಟ್ಟಿನಿಂದ ಮನವಿ ಮಾಡಿದ ಹಿನ್ನೆಲೆಯಲ್ಲಿ ಈ ನೇಮಕ ಮಾಡಲಾಗಿದೆ ಎಂದರು.

ಮೂರು ದಶಕಗಳ ಬಸ್ ಪಾಸ್ ಹೋರಾಟವನ್ನು ಸಿದ್ದರಾಮಯ್ಯ ಸರ್ಕಾರ ಜಾರಿಗೆ ತಂದಿದೆ. ಎಲ್ಲ ಪತ್ರಕರ್ತರು ಉಚಿತವಾಗಿ ಪ್ರಯಾಣ ಮಾಡಬಹುದು. ಪತ್ರಕರ್ತರಿಗೆ ಆರೋಗ್ಯ ಭಾಗ್ಯ ನೀಡುವ ನಿಟ್ಟಿನಲ್ಲಿ ಸಿಎಂ ಮಾಧ್ಯಮ ಸಂಜೀವಿನಿ ಯೋಜನೆ ಜಾರಿಗೆ ತಂದಿದೆ. ಮಾಧ್ಯಮಪಟ್ಟಿಯಲ್ಲಿ ಇರುವವರೆಗೆ ನಗದು ರಹಿತ ಚಿಕಿತ್ಸೆ ಸೌಲಭ್ಯ ಸಿಗಲಿದೆ. ಎಲ್ಲ ಪತ್ರಕರ್ತರಿಗೆ ಈ ಯೋಜನೆಯಡಿ ತರುವ ನಿಟ್ಟಿನಲ್ಲಿ ಸರ್ಕಾರದ ಮೇಲೆ ಒತ್ತಡ ಹಾಕಲಾಗಿದೆ ಎಂದರು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ್, ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಡಾಕ ಕಮಿಟಿ ಮುಖ್ಯಸ್ಥ ಆನಂದ ದೇವಪ್ಪ, ಮಹಾನಗರ ಪಾಲಿಕೆ ಅಧ್ಯಕ್ಷ ಮಹ್ಮದ್ ಗೌಸೊದ್ದೀನ್, ಪ್ರಮುಖರಾದ ದೀಪಕ್ ವಾಲಿ, ಅಲಿಬಾಬಾ, ಸಿದ್ರಾಮಯ್ಯ ಸ್ವಾಮಿ, ಬಸವರಾಜ ಕಾಮಶೆಟ್ಟಿ, ಅಪ್ಪಾರಾವ ಸೌದಿ, ನಿಕಟಪೂರ್ವ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ್, ಮಲ್ಲಿಕಾರ್ಜುನ ಮರಖಲೆ ಇತರರಿದ್ದರು.

ಹಿರಿಯ ಪತ್ರಕರ್ತ ಬಾಬು ವಾಲಿ ಪ್ರಾಸ್ತಾವಿಕ ಮಾತನಾಡಿದರು. ಮಲ್ಲಿಕಾರ್ಜುನ ಬಿರಾದಾರ್ ಸ್ವಾಗತಿಸಿದರು. ಮಾಳಪ್ಪ ಅಡಸಾರೆ, ಸಂಜೆವಾಣಿ ಪತ್ರಕರ್ತ ಶಿವಕುಮಾರ ಸ್ವಾಮಿ ನಿರೂಪಣೆ ಮಾಡಿದರು.

# ಎನ್‌ಎಸ್‌ಎಸ್ ಶಿಬಿರದ ಸದುಪಯೋಗ ಪಡೆದುಕೊಳ್ಳಿ: ಸವಿತಾ



**ಮಲ್ಲಮ್ಮ ನುಡಿ ವಾರ್ತೆ,ಚಿಟಗುಪ್ಪ:** ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಬದ್ಧತೆ ಮೂಡಿಸುವುದಕ್ಕೆ, ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕಾಗಿ ಎನ್ಎಸ್ಎಸ್ ಶಿಬಿರ ನಡೆಯುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿ ಇದರ ಅನುಭವ ಪಡೆದುಕೊಳ್ಳಬೇಕೆಂದು ಬ್ರಹ್ಮಕುಮಾರಿ ಸವಿತಾ ಹೇಳಿದರು. ತಾಲೂಕಿನ ನಿರ್ಣಾ ಗ್ರಾಮದ ಶ್ರೀ ಮಲ್ಲಿಕಾರ್ಜುನ ಗುಂಪಾ ದೇವಾಲಯದಲ್ಲಿ ಎನ್ಎಸ್ಎಸ್ ವಾರ್ಷಿಕ ವಿಶೇಷ ಶಿಬಿರ ಆಯೋಜಿಸಿದ ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ಆಯೋಜನೆ ಮಾಡಲಾಗಿರುವ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರವನ್ನು ಸಸಿಗೆ ನೀರಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ಸೇವಾ ಯೋಜನಾ ಶಿಬಿರಗಳು ತನ್ನದೇ ಆದ ಮಹತ್ವ ಪಡೆದು ಕೊಂಡಿದ್ದು, ಗ್ರಾಮೀಣ ಭಾಗದ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡುತ್ತಿದೆ. ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಪಡೆಯಲು ಸರಿಯಾದ ನಿರ್ಧಾರ ಉತ್ತಮವಾದ ಮನಸ್ಸು ಏಕಾಗ್ರತೆಯ ಗುರಿಬಹಳ ಮುಖ್ಯ. ಜೀವನದಲ್ಲಿ ಉತ್ತಮವಾದ ಮೌಲ್ಯಗಳನ್ನು ಕಲಿಯಬೇಕು. ಅವಶ್ಯಕತೆಗೆ ಅನುಗುಣವಾಗಿ ಮೊಬೈಲ್ ಬಳಕೆ ಮಾಡಬೇಕು ಎಂದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಯುವಕರು, ಯುವತಿಯರು ದೇಶದ ಆಧಾರಸ್ಥಂಬ. ಶಿಸ್ತು ಬದ್ಧತೆ ಜೀವನದಲ್ಲಿ ಪರಿಸರ ಜಾಗೃತಿ, ಶ್ರಮದಾನ ಮೂಲಕ ಸ್ವಚ್ಛತೆ ಅರಿವು, ಆರೋಗ್ಯ ಕುರಿತು ಕಾಳಜಿ, ನೆರ್ಮಲೀಕರಣ ಬಗ್ಗೆ ಕಾಳಜಿ, ವ್ಹಾನಿಕ ಮನೋಭಾವ ಬೆಳೆಸಿಕೊಳ್ಳುವುದರ ಮೂಲಕ ಶಿಬಿರಾರ್ಥಿಗಳು ವ್ಯಕ್ತಿತ್ವ ವಿಕಸನ ಹೊಂದಬೇಕು, ಜೀವನದಲ್ಲಿ ಶಿಸ್ತು ಹಾಗೂ ಸೇವಾ ಮನೋಭಾವ ಮೈಗುಡಿಸಿಕೊಳ್ಳಲು ಸಾಧ್ಯ ಎಂದರು. ಹೆಣ್ಣು ಮಕ್ಕಳ ಸುರಕ್ಷತೆಗೆ ಸರ್ಕಾರ ಹಲವಾರು ಯೋಜನೆಗಳು ಜಾರಿಗೆ ತರುತ್ತಿದೆ ಇದರ ಸದುಪಯೋಗ ಪಡೆಕುಕೊಳ್ಳಬೇಕು ಎಂದು ತಿಳಿಸಿದರು. ಶಿವರಾಜ ಬಿರಾದಾರ್ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಲಿಕೆ ವಿದ್ಯಾರ್ಥಿ, ಶಿಕ್ಷಕರ ನಡುವಿನ ಕೊಂಡಿ ಆಗಿರದೆ ಸಮುದಾಯದ ನಡುವೆಯೂ ರಚನಾತ್ಮಕ ಸಂಬಂಧ ಏರ್ಪಡಬೇಕು ಎನ್ನುವ ಆಶಯದೊಂದಿಗೆ ಎನ್ಎಸ್ಎಸ್ ಶಿಬಿರ ನಡೆಸಲಾಗುತ್ತದೆ. ಗ್ರಾಮದ ಸ್ವಚ್ಛತೆ ಕೆಲಸದ ಜತೆ ಗ್ರಾಮೀಣರಲ್ಲಿ ಆರೋಗ್ಯ ಅರಿವು, ಮೌಢ್ಯತೆ ಹೋಗಲಾಡಿಸುವುದು, ಕಂದಾಚಾರಕ್ಕೆ ವಿರುದ್ಧವಾಗಿ ಯುವಕರ ಪ್ರೇರಣೆ ಹೀಗೆ ಹಲವು ಮಾರ್ಗದಲ್ಲಿ ಯುವ ಜನತೆ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದರು. ಎನ್ಎಸ್ಎಸ್

ಅಧಿಕಾರಿ ಸಂತೋಷ ಪ್ರಾಸ್ತಾವಿಕ ಮಾತನಾಡಿ, ಶಿಬಿರಾರ್ಥಿಗಳಿಗೆ ಎನ್ಎಸ್ಎಸ್ 1969ರಲ್ಲಿ ಸೆಪ್ಟೆಂಬರ್ 24ರಂದು ಜಾರಿಗೆ ಬಂದಿದೆ, ವ್ಯಕ್ತಿತ್ವ ವಿಕಸನ ಮತ್ತು ಶಿಕ್ಷಣದೊಂದಿಗೆ ಸೇವೆ ಎಂಬ ಎರಡು ಉದ್ದೇಶಗಳನ್ನು ಹೊಂದಿದೆ, ಗ್ರಾಮೀಣ ಜನರ ಜೀವನ ಅರಿತುಕೊಳ್ಳಲು ಸಹಕಾರಿಯಾಗಿದೆ,

ಯುವಕರು ಶೈಕ್ಷಣಿಕ ಅಭ್ಯಾಸ ಜೊತೆಗೆ ಸೇವಾ ಮನೋಭಾವ ಶಿಸ್ತು , ಸಮಯ, ಉತ್ತಮ ನಾಯಕತ್ವ, ಕಾಯಕದ ಬಗ್ಗೆ ಆಸಕ್ತಿ ಸಹಬಾಳ್ವೆ ಭಾತೃತ್ವ ಸಮಾನತೆ, ಭಾವೈಕ್ಯತೆ ಹಾಗೂ ಜವಾಬ್ದಾರಿಯುತ ವ್ಯಕ್ತಿತ್ವ ಹಾಗೂ ಉತ್ತಮ ಧ್ಯೇಯ ಹಾಗೂ ಗುಣಗಳನ್ನು ಬೆಳೆಸಿಕೊಳ್ಳಲು ಸಹಕಾರಿಯಾಗಿದೆ ಎಂದರು. ಕಾರ್ಯಕ್ರಮಕ್ಕೂ ಮುನ್ನ ರಾಷ್ಟ್ರೀಯ ಸೇವಾ ಯೋಜನೆ ಧ್ವಜಾರೋಹಣ ಕಾಲೇಜ ಅಭಿವೃದ್ಧಿ ಉಪಾಧ್ಯಕ್ಷ ಶಿವಶರಣಪ್ಪ ಪಾಟೀಲ್ ನೆರವೇರಿಸಿದರು. ಪಿಂಕು ನಿರೂಪಿಸಿದರು. ಅರ್ಚನಾ ವಂದಿಸಿದರು. ಈ ಸಂದರ್ಭದಲ್ಲಿ ಶಿವರಾಜ ಬಶೆಟ್ಟಿ, ಭೀಮಶೆಟ್ಟಿ ಗಂಗಾನಪಳ್ಳಿ, ನಾಗೇಂದ್ರ, ಶಿವರಾಜ್, ಉಪನ್ಯಾಸಕರಾದ ಶ್ರೀನಿವಾಸ ಕಾಂಬಳೆ, ಇಮಾನವೇಲ್, ಸರಿತಾ, ರೇಣುಕಾ, ಅಂಬಿಕಾ ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ಗುರು ಸೇವೆಯಿಂದ ಮನಸ್ಸು ನಿರ್ಮಲವಾಗುತ್ತದೆ : ಪ್ರಭುದೇವ್ ಮಹಾಸ್ವಾಮಿಜಿ.

**ಮಲ್ಲಮ್ಮನುಡಿವಾರ್ತೆ,ಬಸವಕಲ್ಯಾಣ:** ಜ್ಞಾನದ ಮೂಲ ಗುರುಸೇವೆ. ಗುರುಸೇವೆಯಿಂದ ಮನ ನಿರ್ಮಲವಾಗುತ್ತದೆ. ನರಜನ್ಮಕ್ಕೆ ಬಂದ ಬಳಿಕ ಗುರುವಿನ ಕುರುಹು ಕಾಣಬೇಕು ಗುರು ದೊರೆತರೆ ಶಿಷ್ಯನಾಗಿ ಗುರುಕರ ಜಾತನಾಗಿ ಸೇವೆ ಸಲ್ಲಿಸಬೇಕು ಎಂದು ಲಿಂಗಾಯತ ಮಹಾಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಪ್ರಭುದೇವ ಮಹಾಸ್ವಾಮೀಜಿ ಆಶೀರ್ವಚನ ನೀಡಿದರು.





ಹುಲಸೂರ ತಾಲೂಕಿನ ಗೋರಟಾ ಗ್ರಾಮದಲ್ಲಿ ನಡೆದ ಮಾಸಿಕ ಶರಣ ಸಂಗಮ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಇಂದು ಮಾನವನಲ್ಲಿ ಎಲ್ಲಾ ಸೌಕರ್ಯಗಳಿದ್ದರೂ ಶಾಂತಿ ಸಮಾಧಾನ ಸಂತೃಪ್ತಿ ಇಲ್ಲದೆ ಬಳಲುತ್ತಿದ್ದಾನೆ ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಶಂಭುಲಿಂಗ ಕಾಮಣ್ಣ ಮಾತನಾಡಿ ಶರಣರ ನೆನೆದರ ಸರಗಿಯ ಇಟ್ಟಂಗ ಎಂದು ಜನಪದ ನುಡಿಯಲ್ಲಿ ತಿಳಿಸುತ್ತಾರೆ ಯಾವುದು ಕೇಳುವುದರಿಂದ ಮನ ಸತ್ಪಥದತ್ತ ಮುಖ ಮಾಡುವುದೊ ಅಂತಹ ಶರಣರ ನುಡಿಗಳು ಮಾತ್ರ ಕೇಳಬೇಕು. ಕೌಟುಂಬಿಕ ಕಲಹ ಮನಸ್ತಾಪಗಳಿಗೆ ಶರಣರ ವಚನಗಳು ನಿಜವಾದ ಮದ್ದು ಎಂದು ತಿಳಿಸಿದರು.

ಕಲಖೋರದ ಪೂಜ್ಯಶ್ರೀ ಅನೀಲ ಮಹಾರಾಜ ಉದ್ಘಾಟಿಸಿ ಮಾತನಾಡಿ ಒಳ್ಳೆಯ ಗುರುಗಳು ಸಿಗುವುದು ಅಪರೂಪ ಸಿಕ್ಕಿದರೆ ಅವರಿಂದ ನಮಗೆ ಲಾಭ ಅಂಥಹ ಪೂಜ್ಯರು ನಮ್ಮಗೆ ದೊರೆಯುತ್ತಿರುವುದು ನಮ್ಮೆಲ್ಲರ ಸೌಭಾಗ್ಯ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ಆಲಗೂಡ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕರಾದ ನಾಗಪ್ಪ ನಿಣ್ಣೆ ಅವರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ರವಿ ಜಗಶೆಟ್ಟೆ ಗೋರ್ಟಾ ವಹಿಸಿದರು. ಷಟಸ್ಥಲ ಧ್ವಜಾರೋಹಣ ನಿವೃತ್ತ ಕೃಷಿ ಸಹಾಯಕರಾದ ಗುಂಡಪ್ಪ ಸಂಗಮಕರ್ ನೆರವೇರಿಸಿ ಮಾತನಾಡಿ ಸತ್ಸಂಗದಲಿ ಭಾಗವಹಿಸುವದರಿಂದ ಮನಸ್ಸಿಗೆ ಶಾಂತಿ ಸಿಗುತ್ತದೆ ಎಂದರು.

ದಾಸೋಹ ವ್ಯವಸ್ಥೆ ಶಕುಂತಲಾ ರಘುನಾಥಪಾ ಬಿರಾದಾರ. ಜೋತಿ ರಾಜಕುಮಾರ ಬಿರಾದಾರ. ಜಗದೇವಿ ಸಂಜುಕುಮಾರ ಬಿರಾದಾರ. ನೇರೆವೆರಿಸಿದ್ದರು. ಈ ವೇಳೆ ಲಿಂಗಾಯತ ಸೇವಾದಳ ಅಧ್ಯಕ್ಷರಾದ ಸುಪ್ರೀತ್ ಪತಂಗೆ. ಬಿ. ಆರ್. ಪಿ ಗಳಾದ ಶಿವರಾಜ ಕನಕಟ್ಟೆ. ಪ್ರಜ್ವಲ್ ಪತಂಗೆ. ಸುಭಾಷ ಪತಂಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ನೀಲಮ್ಮನ ಬಳಗದಿಂದ ಪ್ರಾರ್ಥನೆ . ಶಾಶ್ವತ ಸೋಮನಾಥ ರಾಜೇಶ್ವರೆ ಸ್ವಾಗತಿಸಿದರು. ಪ್ರಜ್ವಲ್ ರಾಜೋಳೆ ನಿರೂಪಿಸಿದರು.



ಡಿ 21 ರಂದು ರೆಡ್ಡಿ ಮಹಿಳಾ ಸಮಾವೇಶ ನಡೆಯಲಿದ್ದು ಅದರ ಪೂರ್ವಭಾವಿ ಸಭೆ ಬೀದರ್ ನಗರದ ಮಹಾಸ್ವಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಕಲ್ಯಾಣ ಮಂಟಪದಲ್ಲಿ ನಡೆಯಿತು.

# ಹದಗೆಟ್ಟ ರಸ್ತೆ ಅಭಿವೃದ್ಧಿ ಯಾವಾಗ.



**ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ :-** ಇಲ್ಲಿನ ಕೋಟೆಯಿಂದ ಪ್ರಮುಖ ರಸ್ತೆಗಳ ಮೂಲಕ ಹಾದುಹೋಗುವ ರಸ್ತೆಯ ಬಹಳಷ್ಟು ಹದಗೆಟ್ಟು ಹೋಗಿದೆ ಈ ರಸ್ತೆಯು ಗೌರವ. ಖಂಡಾಳ ರಸ್ತೆಯು ಅಲ್ಲ ಅಲ್ಲಿ ಹದಗೆಟ್ಟು ಹೋಗಿದೆ ಎಂದು ಈ ಭಾಗದ ಜನರು

ಪ್ರಕಟಣೆಯ ಮೊಲಕ ಒತ್ತಾಯಿಸಿದ್ದಾರೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾ- ರೆ. ಇಲ್ಲಿಂದಲೆ ಬಹಳಷ್ಟು ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಸೇರಿದಂತೆ ಅನೇಕ ವಾಹನಗಳು ಸಂಚರಿಸುತ್ತವೆ ಅಲ್ಲದೆ ಇಲ್ಲಿಂದಲೆ ಅನೇಕ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು. ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ.

# ಶೋಷಿತರ ಪರ ಸಾಮಾಜಿಕ ನ್ಯಾಯ ಒದಗಿಸುವ ಹೋರಾಟ ಮಾಡಿರುವವರು ಡಾ. ಅಂಬೇಡ್ಕರ್ : ತಹಶೀಲ್ದಾರ್ ದೇಸಾಯಿ



**ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು:** ಸಂವಿಧಾನ ಶಿಲ್ಪಿ ಭಾರತ ರತ್ನ. ಡಾ. ಬಿ.ಆರ್ ಅಂಬೇಡ್ಕರ್ ರವರು ದಲಿತರಿಗೆ ಮಾತ್ರವಲ್ಲದೆ ಎಲ್ಲಾ ಶೋಷಿತರ ಪರವಾಗಿ ಗೌರವ ತಂದುಕೊಡುವ ಮತ್ತು ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಹೋರಾಟ ಮಾಡಿರುವ ಅವರೊಬ್ಬ ಮಹಾನ್ ವ್ಯಕ್ತಿ. ದೇಶ ಕಂಡ ಅಪರೂಪದ ಧೀಮಂತ ನಾಯಕರು ಎಂದು ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ್ ದೇಸಾಯಿ ಹೇಳಿದರು

ತಾಲೂಕು ಆಡಳಿತದಿಂದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 69 ಮಹಾ ಪರಿನಿರ್ವಾಣ ತಾಲೂಕು ಸಭಾಂಗಣದಲ್ಲಿ ಆಚರಿಸಲಾಯಿತು. ನಂತರ ಪಿಡಬ್ಲ್ಯೂಡಿ ಕ್ಯಾಂಪ್ ನಲ್ಲಿ ಡಾ. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿ ಮಾತನಾಡಿದರು

ಡಾ. ಬಾಬು ಸಾಹೇಬ್ ಅಂಬೇಡ್ಕರ್ ರವರು ದೇಶದ ಸಂವಿಧಾನ ಶಿಲ್ಪಿ. ನಮ್ಮ ದೇಶಕ್ಕೆ ಸ್ವಾತಂತ್ರ್ಯ ಬಂದ ಮೇಲೆ ಕಾನೂನು ಸಂವಿಧಾನ ಅವಶ್ಯಕತೆ ಇತ್ತು. ಆಗ ಕಂಡಿ- ದ್ದು.ಡಾ. ಬಾಬು ಸಾಹೇಬರು ಅಂಬೇಡ್ಕರ್ ಅವರ ಹಲವು ದೇಶಗಳು ಸುತ್ತಿ.ಅಲ್ಲಿಯ ಎಲ್ಲಾ ಸಂವಿಧಾನವನ್ನು ಅಧ್ಯಯನ ಮಾಡಿ. ಎಲ್ಲಾ ಸಂವಿಧಾನಕ್ಕಿಂತ ನಮ್ಮ ದೇಶಕ್ಕೆ ಶ್ರೇಷ್ಠವಾದ ಸಂವಿಧಾನವನ್ನು ಕೊಟ್ಟಿದ್ದಾರೆ. ಹಾಗಾಗಿ ಇವತ್ತು ನಮ್ಮ ಸಾಮಾಜಿಕ ವ್ಯವಸ್ಥೆಯ ಬದಲಾವಣೆಯಾಗಬೇಕು. ಮತ್ತು ಅಂತಹ ಮಹಾನ್ ನಾಯಕರು ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯಬೇಕು ಆಗ ಮಾತ್ರ ಸಮಾಜದಲ್ಲಿ ಬದಲಾವಣೆ ತರುವುದಕ್ಕೆ ಸಾಧ್ಯವಾಗುತ್ತದೆ ಎಂದು ಹೇಳಿದರು ಸಂವಿಧಾನದ ಅಡಿಯಲ್ಲಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಬೇಕು. ಹಾಗೂ ಸಾಮಾಜಿಕ ನ್ಯಾಯ ಸ್ಥಾಪಿಸಬೇಕು. ಎಂಬುದು ಅಂಬೇಡ್ಕರ್ ರವರು ಸಂವಿಧಾನ ಮೂಲಕ ಸ್ಪಷ್ಟವಾಗಿ ಹೇಳಿದ್ದಾರೆ. ಈ ಸಂದರ್ಭದಲ್ಲಿ. ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ. ನಗರ ಸಭೆ ಪೌರಾಯುಕ್ತರು. ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರು ಎಚ ಎಫ್ ಮಸ್ಕಿ. ಹನುಮಂತಪ್ಪ ಗೊಮರ್ಶಿ. ಮರಿಯಪ್ಪ. ಖಾಜಿ ಮಲಿಕ್ ವಕೀಲರು. ಗ್ಯಾರಂಟಿ ಯೋಜನೆ ಅಧ್ಯಕ್ಷ ಅನಿಲ್ ಕುಮಾರ್ ವೈ ಸೇರಿದಂತೆ ಇತರರು ಇದ್ದರು.

# ಹಿಲಾಲಪುರ ಗ್ರಾಮಕ್ಕೆ ಬಸ್ಸ್ ಸಂಚಾರ





ಮಲ್ಲಮ್ಮ ನುಡಿ ವಾರ್ತೆ

**ಮಸ್ಕಿ : ತಾಲೂಕಿನ ಸಮೀಪದ ಹಿಲಾಲಪುರ ಗ್ರಾಮಕ್ಕೆ ಬಸ್ಸಿನ ಸೌಲಭ್ಯ ಕಲ್ಪಿಸಿದ್ದಕ್ಕೆ ಶಾಸಕ ಹಾಗೂ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮದ್ಯೋಗ ನಿಗಮ ಮಂಡಳಿ ಅಧ್ಯಕ್ಷ ಆರ್ ಬಸನಗೌಡ ತುರುವಿಹಾಳ್ ಅವರಿಗೆ ಗ್ರಾಮದ ಜನತೆ ಅಭಿನಂದನೆ ಸಲ್ಲಿಸಿದರು.**

# ಇಂದಿರಾ ಕ್ಯಾಂಟೀನ್ ಉದ್ಘಾಟನೆ

# ಶುಚಿತ್ವ ಕಾಪಾಡಿಕೊಳ್ಳುವಂತೆ ಐಟಿಬಿಟಿ ಸಚಿವರು ಸೂಚನೆ.

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:** ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ನಗರ ಅಭಿವೃದ್ಧಿ ಕೋಶ ಅಡಿಯಲ್ಲಿ ಕಲಬುರಗಿ ನಗರದ ಕಿಣ್ಣಿ ಮಾರುಕಟ್ಟೆ ಬಳಿ ನೂತನವಾಗಿ ಸ್ಥಾಪಿಸಲಾಗಿರುವ ' ಇಂದಿರಾ ಕ್ಯಾಂಟೀನ್ ' ನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಉದ್ಘಾಟಿಸಿದರು.ಬಡ ಹಾಗೂ ಮಧ್ಯಮ ವರ್ಗದ ಜನರು, ಕೃಷಿ ಕೂಲಿ– ಕಾರ್ಮಿಕರು ಸೇರಿದಂತೆ ಎಲ್ಲರೂ ಅತಿ ಕಡಿಮೆ ಹಣವನ್ನು ಪಾವತಿಸಿ ಊಟ ಮಾಡಲು ಅನುಕೂಲವಾಗಂತೆ ರಾಜ್ಯ ಸರ್ಕಾರ ಇಂದಿರಾ ಕ್ಯಾಂಟಿನ್ ಸ್ಥಾಪಿಸಿದೆ.

ಕಲಬುರಗಿ ನಗರದ ಜನದಟ್ಟಣೆಯ ಪ್ರದೇಶದ ಕಿಣ್ಣಿ ಮಾರುಕಟ್ಟೆ ಬಳಿ ಇಂದಿರಾ ಕ್ಯಾಂಟೀನ್ ಸ್ಥಾಪಿಸಲಾಗಿದೆ. ಇದರಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದು ಸಚಿವರು ಹೇಳಿದರು.ಶುಚಿತ್ವ ಕಾಪಾಡುವಂತೆ ಸಿಬ್ಬಂದಿಗಳಿಗೆ ಸೂಚಿಸಿದ ಸಚಿವರು, ರುಚಿಕರವಾದ ಆಹಾರ ತಯಾರು ಮಾಡಿ ಸಾರ್ವಜನಿಕರಿಗೆ ಒದಗಿಸಬೇಕು. ನಮ್ಮ ಯೋಜನೆಯ ಲಾಭ ಎಲ್ಲರೂ ಪಡೆಯುವಂತಾಗಬೇಕು ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ನಿರಂತರ ಕ್ರಮವಹಿಸಬೇಕು ಎಂದು ಸಚಿವರು ಹೇಳಿದರು.

# ಅಂಬೇಡ್ಕರ್ ವೃತ್ತದಲ್ಲಿ ೬೯ನೇ ಮಹಾಪರಿನಿರ್ವಾಣ ದಿನ ಅಂಬೇಡ್ಕರ್ ವಿಚಾರಧಾರೆ ಸರ್ವಶ್ರೇಷ್ಠ



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ :** ಡಾ. ಅಂಬೇಡ್ಕರ್ ಅವರ ಸೈದ್ಧಾಂತಿಕ ಹೋರಾಟ ಮತ್ತು ವಿಚಾರಧಾರೆ ಸರ್ವಶ್ರೇಷ್ಠವಾಗಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ 69ನೇ ಮಹಾಪರಿನಿರ್ವಾಣ ಅಂಗವಾಗಿ ಶನಿವಾರ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಸಲ್ಲಿಸಿ ಅವರು ಮಾತನಾಡಿದರು. ದೇಶದಲ್ಲಿರುವ ಪ್ರತಿಯೊಬ್ಬರಿಗೂ ಬದುಕುವ ಹಕ್ಕನ್ನು ಸಂವಿಧಾನದ ಮೂಲಕ ಅಂಬೇಡ್ಕರ್ ಕಲ್ಪಿಸಿದ್ದಾರೆ.

ಅವರ ಆದರ್ಶಗಳನ್ನು ಎಲ್ಲರೂ ಅನುಸರಿಸಿ ಬದುಕು ಸಾರ್ಥಕಗೊಳಿಸಬೇಕು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ದಲಿತಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ವಿಲಾಸ ಮೋರೆ, ಪ್ರಮುಖರಾದ ಕೈಲಾಸ ಭಾವಿಕಟ್ಟಿ, ಸಂಜೀವಕುಮಾರ ಭಾವಿಕಟ್ಟಿ, ಧನರಾಜ ಕುಂದೆ, ಪ್ರಕಾಶ ಭಾವಿಕಟ್ಟಿ, ಜೈಪಾಲ ಭೋರಾಳೆ ಸೇರಿದಂತೆ ಹಲವರು ಇದ್ದರು.

# ಪಲ್ಸ್ ಪೋಲಿಯೊ ಗುರಿ ಸಾಧಿಸಿ ಪೋಲಿಯೊ ದಿಂದ ಮಕ್ಕಳು ವಂಚಿತರಾಗಬಾರದು; ತಹಸೀಲ್ದಾರ್ ಎಚ ದೇಸಾಯಿ.

**ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು:** ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮವನ್ನು ಎಲ್ಲಾ ಇಲಾಖೆಯ ಅಧಿಕಾರಿಗಳು ಸಮನ್ವಯತೆ ಯಿಂದ ಕೆಲಸ ಮಾಡುವ ಮೂಲಕ ಪಲ್ಸ್ ಪೋಲಿಯೊ ಮುಕ್ತ ತಾಲುಕನ್ನಾಗಿ ಮಾಡಬೇಕೆಂದು. ತಹಸೀಲ್ದಾರ ಅರುಣ ಹೆಚ್ ದೇಸಾಯಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇಂದು ತಹಸೀಲ್ದಾರ ಕಚೇರಿಯಲ್ಲಿ ಕರೆದ ಪಲ್ಸ್ ಪೋಲಿಯೊ ಕಾರ್ಯಕ್ರಮದ ತಾಲುಕಾ ಮಟ್ಟದ ಟಾಸ್ಕ್ ಪೊರ್ಸ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಆಯಾ ಗ್ರಾಮ ಪಂಚಾಯ್ತಿ ಪಿಡಿಓಗಳು ಗ್ರಾಮದಲ್ಲಿರುವ ದೇವಸ್ಥಾನ ಮೈಕ್ ಹಾಗೂ ಹಲಗಿ ಮೂಲಕ ಡಂಗೂರ ಸಾರಬೇಕು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಮತ್ತು ನಗರಸಭೆ ಕಸದ ವಾಹನದ ಮೂಲಕ ಸಹ ಪ್ರಚಾರ ಮಾಡಬೇಕು ಎಂದರು .ನಗರದ ತಾಲೂಕು ಬಸ ನಿಲ್ದಾಣ.ಹಾಗೂ ರೈಲ್ವೆ ಸ್ಟೇಷನ್ ಗಳಲ್ಲಿ ಪೋಲಿಯೊ ಬೂತ್ ಮಟ್ಟದಲ್ಲಿ ಮಾಡಿಸಿ ಮಕ್ಕಳಿಗೆ ಪೋಲಿಯೊ ಹಾಕಬೇಕು. ಯಾವ ಮಗು ಸಹ ಪೋಲಿಯೊ ದಿಂದ ವಂಚಿತ ರಾಗದಂತೆ ನೋಡಿ ಕೊಳ್ಳುವ ಜವಾಬ್ದಾರಿ ಆರೋಗ್ಯ ಇಲಾಖೆ ಜೊತೆಗೆ ಎಲ್ಲಾ ಇಲಾಖೆಯ ಅಧಿಕಾರಿಗಳ ಜವಾಬ್ದಾರಿಯುತವಾಗಿ ಕೈಜೋಡಿಸಿದನ್ನು ಮರೆಯಬಾರದು ಎಂದರು . ದಿನಾಂಕ 21.12.2025,ರಿಂದ 24.12.2025 ವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ ಇರುತ್ತದೆ ಆದ್ದರಿಂದ ಅಂದು ಯಾವದೆ ಕಾರಣಕ್ಕೂ ವಿದ್ಯುತ್ ಸಂಪರ್ಕ ಕಟ್ ಯಾಗದಂತೆ ನೋಡಿಕೊಳ್ಳಬೇಕು ಎಂದು ಜೆಸ್ಕಾಂ ಅಧಿಕಾರಿಗಳಗೆ ಸೂಚನೆ ನೀಡಿ ಎಲ್ಲಾ ಅಂಗನವಾಡಿ ಕೇಂದ್ರ ಗಳಲ್ಲಿ ಕಡ್ಡಾಯವಾಗಿ ಪೋಲಿಯೊ ಬೂತ ಮಾಡಬೇಕು ಎಷ್ಟು ಪ್ರಗತಿ ಪಾಗಿದೆ



ಎನ್ನುವ ಮೇಲೆ ಉಸ್ತುವಾರಿ ಯನ್ನು ಅಂಗನವಾಡಿ ಸೂಪರ ವೈಜರ ವರದಿ ತೆಗೆದುಕೊಂಡು ನನಗೆ ಕೊಡಬೇಕು ಅಲಕ್ಷ್ಯ ಮಾಡಬಾರದು ಎಂದು ಸುಪರ ವೈಜರಗಳಿಗೆ ತಾಕೀತು ಮಾಡಿದರು. ತಾ. ಪ.ಇಒ ಚಂದ್ರಶೇಖರ ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ .ಬಿಇಓ ಬಸಲಿಂಗಪ್ಪ ಜವಳಗೇರಾ ಟಿ ಹೆ ಡಾ ಅಯ್ಯನಗೌಡ. ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳಾದ ಡಾ ಸುರೇಶ. ಡಾ ಮೇರಿ. ಡಾ ನಾಗರಾಜ ಡಾ. ಶ್ವೇತಾಂಬರಿ.ಹಿರಿಯ ಆರೋಗ್ಯ ನಿರೀಕ್ಷರಾದ ರಂಗನಾಥ ಗುಡಿ ಸಂಗನಗೌಡ ಪಾಟೀಲ. ಕ್ಷೇತ್ರ ಆರೋಗ್ಯ ಶಿಕ್ಷಾಣಾದಿಕಾರಿಗಳಾದ ಬಾಲಪ್ಪ ನಾಯಕ. ಗೀತಾ ಹಿರೆಮಠ ಜೇಸ್ಕಾ. ಸಿಡಿಪಿಓ. ಸಾರಿಗೆ ಇಲಾಖೆ. ಕಾರ್ಮಿಕ ಇಲಾಖೆ.ಐಎಂಎ ಅಧ್ಯಕ್ಷರು.ಆರೋಗ್ಯ ಇಲಾಖೆಯ ತ್ರಿವೇಣಿ ಃಕಒ, ಜಿಲ್ಲಾ ಖಈಗಿ ಮೇಲ್ವಿಚ ಾರಕರುರಾಘವೇಂದ್ರ,ಹನುಮಂತ ಸೇರಿದಂತೆ ನಗರ ಆರೋಗ್ಯ ಇಲಾಖೆ. ತಾಲುಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಬ್ಬಂದಿಗಳು ಆಶಾ ಕಾರ್ಯಕರ್ತರು ಸಭೆಯಲ್ಲಿದ್ದರು.

# ಅರಿವು ಮೂಡಿಸುವ ಗೋಡೆ ಬರಹದ ಬಿಲ್ ಪಾವತಿಸುವಂತೆ ಜಿ.ಪಂ.ಸಿಇಒ ಗೆ ಮನವಿ



**ಹೊಸಪೇಟೆ (ವಿಜಯನಗರ) :** ನಾಗರಿಕ ಹಕ್ಕು ಸಂರಕ್ಷಣಾ ಆದಿ ನಿಯಮ ದೌರ್ಜನ್ಯ ಪ್ರತಿಬಂಧ ಕಾಯಿದೆ ನಂ, 23/1989 ಪ್ರಕಾರ ಅರಿವು ಮೂಡಿಸುವ ಗೋಡೆ ಬರಹ ಬರೆಯಿಸಲಾಗಿದ್ದು,ಅದರ ಬಿಲ್ ಪಾವತಿಸದೆ ಜಿಲ್ಲೆಯ ಹರಪನಹಳ್ಳಿ, ಕೊಟ್ಟೂರು ಮತ್ತು ಹಡಗಲಿಯ ಕೆಲವು ಪಿಡಿಓಗಳು ತುಂಬಾ ಹಿಂಸೆ ಕೊಟ್ಟು ಬಿಲ್ ಪಾವತಿಸದೆ ವರ್ಷಾನುಗಟ್ಟಲೇ ವಿಳಂಬ ಮಾಡಿದ್ದಾರೆ. ಹೀಗಾಗಿ ಅವರ ಮೇಲೆ ಸೂಕ್ತ ಕ್ರಮ ಕೈಗೊಂಡು ಅದಕ್ಕೆ ತಗುಲಿದ ನಷ್ಟ ಪರಿಹಾರ ಅವರಿಂದ ಕಲ್ಪಿಸಿ ಕೊಡಬೇಕೆಂದು ಆಗ್ರಹಿಸಿ ವಿವಿಧ ದಲಿತಪರ ಸಂಘಟನೆಗಳಿಂದ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಕರ್ನಾಟಕ ರಿಪಬ್ಲಿಕನ್ ಸೇನಾ ಜಿಲ್ಲಾಧ್ಯಕ್ಷ ಸಿ ವೆಂಕಟೇಶ ಮಾತನಾಡಿ, 2023ನೇ ಸಾಲಿನಲ್ಲಿ ಸರ್ಕಾರದ ಆದೇಶ ಮತ್ತು ಸುತ್ತೋಲೆಯ ಮೇರೆಗೆ ನಾಗರಿಕ ಹಕ್ಕು ಸಂರಕ್ಷಣಾ ಆದಿ ನಿಯಮದ ಪ್ರಕಾರ ದೌರ್ಜನ್ಯ ಪ್ರತಿಬಂದ ಕಾಯ್ದೆ 2023-24ನೇ ಸಾಲಿನಲ್ಲಿ ಗೋಡೆ ಬರಹ ಬರೆಯಲು , ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮತಿ ಪಡೆದು ಅವರ ಆದೇಶದ ಮೇರೆಗೆ ಮತ್ತು ಜಿಲ್ಲೆಯ ಎಲ್ಲಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳ ಆದೇಶದ ಪ್ರಕಾರ ಗೋಡೆ ಬರಹ ಬರೆಯಿಸಲಾಗಿತ್ತು. ಆದರೆ ಇದರಲ್ಲಿ ಕೆಲವು ಪಿಡಿಓ ಗಳು ಬಿಲ್ ಪಾವತಿಸಿದ್ದಾರೆ. ಇನ್ನು ಕೆಲವು ಪಿಡಿಓಗಳು ಪಾವತಿಸದೆ ನಮಗೆ ತುಂಬಾ ತೊಂದರೆ ಕೊಟ್ಟು ವಿನಾಕಾರಣ ಸುತ್ತಾಡಿಸಿದ್ದರಿಂದ ಮನೆಯ ಪರಿಸ್ಥಿತಿ ತುಂಬಾ ಗಂಭೀರ ಸ್ಥಿತಿಗೆ ಬಂದಿರುತ್ತದೆ. ಇದು ಅಲ್ಲದೆ ಒಂದೊಂದು ಪಂಚಾಯಿತಿಗೆ ಇಪ್ಪತ್ತರಿಂದ ಮೂವತ್ತು ಸಾರಿ ಅಲೆದರು ಕೂಡ ಬಿಲ್ ಪಾವತಿಸದೆ ಇದ್ದಿದ್ದು ಮತ್ತು ಫೋನ್ ಮಾಡಿದರೆ ಫೋನ್ ರಿಸೀವ್ ಮಾಡಲಾರದೆ, ಅವರನ್ನು ತುಂಬಾ ಹೀನಾಯವಾಗಿ ಹೀಯಾಳಿಸಿದ್ದಾರೆ. ಈ ಕಾರಣದಿಂದ ಅವರು ಅನಿವಾರ್ಯವಾಗಿ ಎಲ್ಲ ಪಂಚಾಯಿತಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಆ ಸಂದರ್ಭದಲ್ಲಿ ದೊಡ್ಡ ಮಟ್ಟದಲ್ಲಿ ಅಪಘಾತವಾಗಿ, ಅವರ ಎಡಕೈ ಸಹ ಮುರಿದು, ಸುಮಾರು ಮೂರು ತಿಂಗಳ ಕಾಲ ಆಸ್ಪತ್ರೆ ಪಾಲಾಗಿ, ಆ ಸಂದರ್ಭದಲ್ಲಿ ಕೂಡ ಯಾವೊಬ್ಬ ಪಿಡಿಓಗಳು ಸಹ ಅವರಿಗೆ ಮಾನವೀಯತೆಯಿಂದಾದರೂ ಅವರ ಬಿಲ್ ಪಾವತಿಸುವ ಮನಸ್ಸು ಕೂಡ ಮಾಡುವುದಿಲ್ಲ ಎಂದು ಆರೋಪಿಸಿದರು.

ಗೋಡೆ ಬರಹ ಬರೆಯಿಸಲು ಸುಮಾರು ಆರು ಲಕ್ಷ ಮೇಲ್ಪಟ್ಟು ಸಾಲವಾಗಿದೆ. ಹೀಗಾಗಿ ಆ ಕುಟುಂಬವು ಸಾಲಕ್ಕೆ ತುತ್ತಾಗಿದ್ದರಿಂದ, ವೆಂಕಟೇಶ್ ರವರು ಮತ್ತು ಅವರ ಶ್ರೀಮತಿಯವರು ತುಂಬಾ ಮಾನಸಿಕವಾಗಿ ನೊಂದು ದೈಹಿಕವಾಗಿ ಹಾಸಿಗೆ ಹಿಡಿದಿದ್ದಾರೆ. ಆದಕಾರಣ ಅವರಿಗೆ ಯಾವುದೇ ರೀತಿಯಿಂದ ತೊಂದರೆ ಅನಾಹುತ ಆಗುವ ಸಂಭವ ಇದೆ. ಅಕಸ್ಮಾತ್ ಹಾಗೇನಾದರು ಅನಾಹುತ ಸಂಭವಿಸಿದರೆ ಅದಕ್ಕೆ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಎಲ್ಲಾ ಪಿಡಿಓಗಳೆ ಮುಖ್ಯ ಕಾರಣ-ರಾಗುತ್ತಾರೆ. ಇಷ್ಟೇ ಅಲ್ಲದೆ ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳು ಒಂದು ವರ್ಷದ ಹಿಂದೆ ಇನ್ನು ಯಾರು ಬಿಲ್ಲು ಪಾವತಿಸಿರುವುದಿಲ್ಲವೋ ಅವರು ಪಾವತಿಸಿರಿ ಎಂದು ಆದೇಶ ಹೊರಡಿಸಿದ್ದರು ಕೂಡ ಇನ್ನೂ ಅನೇಕ ಪಿಡಿಓಗಳು ಸಿ ಓ ಅವರ ಆದೇಶವನ್ನು ನಿರ್ಲಕ್ಷ್ಯ ಮಾಡಿ ಕಾನೂನು ಉಲ್ಲಂಘನೆ ಮಾಡಿದ್ದಾರೆ. ಹಾಗಾದರೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬೆಲೆ ಇಲ್ಲವಾ ?.

ಎಂಬ ಪ್ರಶ್ನೆಯನ್ನು ಮುಂದಿಟ್ಟುಕೊಂಡು, ಯಾವೆಲ್ಲ ಪಂಚಾಯತಿಯ ಪೀಡಿಓಗಳು ಅವರಿಗೆ ಇತರದ ಹಿಂಸೆ ಕೊಟ್ಟು ಬಿಲ್ ಪಾವತಿಸದೆ ಸುತ್ತಾಡಿಸಿ ಕೊನೆಗೂ ಫೋನ್ ರಿಸೀವ್ ಮಾಡದೆ ಇದ್ದ ಪಿಡಿಓಗಳ ಮೇಲೆ ಸೂಕ್ತ ಕ್ರಮ ಕೈಗೊಂಡು ಇಲ್ಲಿಯವರೆಗೂ ಎಷ್ಟು ಸಾರಿ ಅಲೆದಾಡಿಸಿದ್ದಾರೆ ಮತ್ತು ಅದಕ್ಕಾದ ಖರ್ಚು ಮತ್ತು ಗೋಡೆ ಬರಹದ ಖರ್ಚು ಈ ಎಲ್ಲಾ ಖರ್ಚು ವೆಚ್ಚಗಳನ್ನು ಸಂಬಂಧಪಟ್ಟ ಪಿಡಿಓಗಳು ನಿಭಾಯಿಸಿಬೇಕಾಗತ್ತದೆ. ಮತ್ತು ಅವರೇ ಕಲ್ಪಿಸಬೇಕು. ಹಾಗೆ ಆ ಕುಟುಂಬದ ಪರಿಸ್ಥಿತಿ ಗಂಭೀರ ಇರುವುದರಿಂದ ಅವರಿಗೆ ಯಾವುದೇ ರೀತಿ ಅನಾಹುತ ಸಂಭವಿಸಿದ ಪಕ್ಷದಲ್ಲಿ ಪಿಡಿಓಗಳೆ ಹೊಣೆಯಾಗುತ್ತಾರೆ ಎಂದು ಎಚ್ಚರಿಸಿ, 10 /12/ 25ರ ಒಳಗಡೆ ಇನ್ನು ಯಾರು ಬಿಲ್ ಪಾವತಿಸಿರುವುದಿಲ್ಲವೋ ಅವರೆಲ್ಲ ಒಟ್ಟಾಗಿ ಸೇರಿ ಒಂದೇ ಸಾರಿ ಬಿಲ್ ಈ ಕೆಳಕಂಡ ಹರಪನಹಳ್ಳಿ ತಾಲೂಕಿನ ಗ್ರಾಮ ಪಂಚಾಯಿತಿಗಳಾದ

1) ಬಾಗಳಿ 2) ಕೂಲಹಳ್ಳಿ 3) ಚಿರಸ್ಥನಹಳ್ಳಿ 4) ನೀಲಗುಂದ 5) ಸಾಸ್ವಿಹಳ್ಳಿ 6) ಕಡಬಗೆರೆ 7) ತೊಗರಿ ಕಟ್ಟೆ 8) ಹಾರಕನಾಳು 9) ಮಾಡ್ಲಗೆರೆ 10) ಕೆ ಕಲ್ಲಹಳ್ಳಿ 11)ಚಿಗಟಗೇರಿ 12)ಮೈದೂರು

ಕೊಟ್ಟೂರು ತಾಲೂಕಿನ ಗ್ರಾಮ ಪಂಚಾಯಿತಿಗಳಾದ

1) ಅಂಬಳಿ 2) ಕೊಗಳಿ 3) ಕಾಳಾಪುರ 4) ಉಜ್ಜಿನಿ 5) ಚಿರಬಿ 6) ದೂಪದಹಳ್ಳಿ 7) ತೂಲಹಳ್ಳಿ

ಹಡಗಲಿ ತಾಲೂಕಿನ ಗ್ರಾಮ ಪಂಚಾಯತಿಗಳಾದ

1) ದಾಸನಹಳ್ಳಿ 2) ಕೊಂಬಳಿ 3) ನಂದಿಹಳ್ಳಿ 4) ಸೋಗಿ 5) ಕಾಲ್ವಿ 5) ದೇವಗೊಂಡನಹಳ್ಳಿ 6) ಹಿರೆ ಹಡಗಲಿ 7) ನವಲಿ 8) ಕೆ ಅಯ್ಯನಹಳ್ಳಿ 9) ಹಗರನೂರು 10) ಕುರುವತ್ತಿ 11) ನಾಗತಿ ಬಸಾಪುರ 12) ಹ್ಯಾರಡ 13) ಕಂತೆ ಬೆನ್ನೂರು. ಕೂಡ್ಲಿಗಿ ತಾಲೂಕಿನ ಶಿವಪುರ ಗ್ರಾಮ ಪಂಚಾಯಿತಿ ಮತ್ತು ಹೊಸಪೇಟೆ ತಾಲೂಕಿನ ಬುಕ್ಕಸಾಗರ ಗ್ರಾಮ ಪಂಚಾಯಿತಿಗಳು ಪಾವತಿಸಬೇಕು.ಇಲ್ಲವಾದ ಪಕ್ಷದಲ್ಲಿ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಮುಂದೆ ವಿವಿಧ ದಲಿತಪರ ಸಂಘಟನೆಗಳ ಒಕ್ಕೂಟದೊಂದಿಗೆ ಉಗ್ರ ಹೋರಾಟವನ್ನು ಹಮ್ಮಿಕೊಂಡು ಧರಣಿ ಸತ್ಯಾಗ್ರಹ ಕೂಡಲು ಮುಂದಾಗಬೇಕಾಗುತ್ತದೆ ಎಂದು ದಲಿತಪರ ಸಂಘಟನೆಗಳಾದ ದಲಿತ ಕರ್ನಾಟಕ ರಕ್ಷಣಾ ವೇದಿಕೆ, ಛಲುವಾದಿ ಮಹಾಸಭಾ, ಕರ್ನಾಟಕ ದಲಿತ ಸಂಘರ್ಷ ಸಮಿತಿ, ಹೈದರಾಬಾದ್ (ಕಲ್ಯಾಣ) ಕರ್ನಾಟಕ ರಕ್ಷಣಾ ವೇದಿಕೆ, ಮತ್ತು ದಲಿತ ಸಂಘರ್ಷ ಸಮಿತಿ ಭೀಮಮಾರ್ಗ ಈ ಎಲ್ಲಾ ಸಂಘಟನೆಗಳಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ ಮುನ್ನೆಚ್ಚರಿಕೆಯನ್ನು ನೀಡಿ, ಮನವಿ ಸಲ್ಲಿಸಿದರು.

# ಡಿ.೯ರಂದು ಖ್ಯಾತ ಗಾಯಕ ಜಗನಾಥ ಬೇಂದ್ರೆಯವರಿಗೆ ರಾಷ್ಟ್ರ ಮಟ್ಟದ "ಸದ್ಭಾವಾನ ಕಾಯಕ ರತ್ನ ಪ್ರಶಸ್ತಿ



ಮಲ್ಲಮ್ಮನುಡಿವಾರ್ತೆಹುಮನಾಬಾದ: ಬೀದರನ ಪೂಜ್ಯ.ಡಾ.ಚನ್ನಬಸವ ಪಟ್ಟದೇವರುಜಿಲ್ಲಾರಂಗಮಂದಿರದಲ್ಲಿ ಡಿ.9-2025ರಂದು ನಡೆಯಲಿರುವ ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ವತಿಯಿಂದ 70ನೇಕನ್ನಡರಾಜ್ಯೋತ್ಸವ ಕರ್ನಾಟಕ ಸುವರ್ಣ ಸಂಭ್ರಮ ನಿಮಿತ್ತವಾಗಿಕರ್ನಾಟಕರಾಜ್ಯೋತ್ಸವ ನಿಮಿತ್ತ ವಿಶ್ವ ಕನ್ನಡಿಗರ ಕೂಡ ಮಾಡುವರಾಷ್ಟಮಟ್ಟದಕರ್ನಾಟಕ ವತಿಯಿಂದ ರಾಜ್ಯೋತ್ಸವ ರತ್ನ ಪ್ರಶಸ್ತಿಗೆ ತಾಲ್ಲೂಕಿನ ಮೊಳಕೇರಾಗ್ರಾಮದ ಸಂಗೀತ ಶಿಕ್ಷಕ ಜಗನಾಥ ಬೇಂದ್ರೆರವರು ಆಯ್ಕೆಯಾಗಿದ್ದಾರೆ ಎಂದು ವಿಶ್ವ ಕನ್ನಡಿಗರ ಸಂಸ್ಥೆಯ ರಾಜ್ಯಾಧ್ಯಕ್ಷ ಸುಬ್ಬಣ್ಣ ಕರಕನಳ್ಳಿ ತಿಳಿಸಿದ್ದಾರೆ. ಇವರು ಸಂಗಿತದ ಮೂಲಕ ಆಕಾಶವಾಣಿ, ದೂರದರ್ಶನ ಹಾಗೂ ರಾಜ್ಯದ ತುಮಕೂರು, ಬಳ್ಳಾರಿ, ಬೀದರ, ಕಲಬುರಗಿ, ರಾಯಚೂರು, ಗದಗ, ಮೈಸೂರು, ಕೊಪ್ಪಳ, ಕಾರವಾರ, ಹಂಪಿಯಲ್ಲಿ ಸಂಗೀತ ಸೇವೆ ಸಲ್ಲಿಸಿ, ಇನ್ನೂ ಅನೇಕ ಜಿಲ್ಲೆಗಳಲ್ಲಿ ಉತ್ಸವ ಸಮಾರಂಭಗಳಲ್ಲಿ ಅತ್ಯುತ್ತಮ ಸಂಗೀತ ಸೇವೆ ಸಲ್ಲಿಸಿ ನೋಡುಗರ ಕಣ್ಮನ ಸೆಳೆದಿದ್ದಾರೆ. ಬಸವಕಲ್ಯಾಣ ತಾಲ್ಲೂಕಿನ ಮಂಠಾಳ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸಂಗೀತ ಶಿಕ್ಷಕರಾಗಿ ಸೇವೆಸಲ್ಲಿಸಿ ಕನಕಟ್ಟಾ ಗ್ರಾಮಕ್ಕೆ ವರ್ಗಾವಣೆ ಗೊಂಡು ಸರಕಾರಿ ಪ್ರೌಢಶಾಲೆಯ ಸಂಗೀತ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಾ ಮುಂದುವರಿಸಿದ್ದಾರೆ. ಇವರ ಕಾರ್ಯಕ್ಕೆ ಶಿಕ್ಷಕರು, ವಿದ್ಯಾರ್ಥಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಫ.ಗು.ಹಳಕಟ್ಟಿ ಪ್ರಶಸ್ತಿ ಪಡೆದ ಗಡ್ಡೆ ದಂಪತಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ವಚನ ಪಿತಾಮಹ ಫ.ಗು.ಹಳಕಟ್ಟಿ ಅಂತರ್ ರಾಷ್ಟ್ರೀಯ ಪ್ರಶಸ್ತಿ ಪಡೆದಿರುವ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ತಾಲ್ಲೂಕಾ ಅಧ್ಯಕ್ಷರಾದ ಗುರುನಾಥ ಗಡ್ಡೆ ಹಾಗೂ ಪ್ರೊ.ವಿಜಯಲಕ್ಷ್ಮಿ ಗಡ್ಡೆ ಅವರಿಗೆ ಶ್ರಮಜೀವಿ ಸೇವಾ ಪ್ರತಿಷ್ಠಾನದಿಂದ ನಡೆದ ಕಾರ್ಯಕ್ರಮದಲ್ಲಿ ಬಿನ್ನವತ್ತಳೆ, ನೆನಪಿನ ಕಾಣಿಕೆ, ಗ್ರಂಥಗಳನ್ನು ನೀಡಿ ವಿಶೇಷವಾಗಿ ಸನ್ಮಾನಿಸಲಾಯಿತು.

ದುಬೈನ ಮಿಲೆನಿಯಂ ಸಭಾಂಗಣದಲ್ಲಿ ಅನುಭಾವ ಮಿಡಿಯಾ ಹೌಸ್ ನ ವಚನ ಟಿವಿ ಹಾಗೂ ದುಬೈ ಕನ್ನಡ ಸಂಘದಿಂದ ಈಚೆಗೆ ನಡೆದ ಕಾರ್ಯಕ್ರಮದಲ್ಲಿ ಇವರನ್ನೊಳಗೊಂಡು ಏಳು ಮಹನೀಯರಿಗೆ ಪ್ರಶಸ್ತಿ ಪ್ರದಾನ ಮಾಡಲಾಗಿದೆ. ವಚನ ಟಿವಿ ಸಂಚಾಲಕ ಪ್ರೊ.ಸಿದ್ದು ಯಾಪಲಪರ್ವಿ, ವಚನ ಟ್ರೇಡರ್ಸ್ ನ ಅಲ್ಲಮಪ್ರಭು ನಾವದಗೇರೆ ಮತ್ತಿತರರು ಕಾರ್ಯಕ್ರಮ ಆಯೋಜಿಸಿದ್ದರು. ಪ್ರಶಸ್ತಿ ಪಡೆದು ತಾಯ್ನಾಡಿಗೆ ಹಿಂದುರಿಗಿದ ಬಳಿಕ ಅವರನ್ನುಸ್ವಾಗತಿಸಿ ಸನ್ಮಾನಿಸಲಾಯಿತು.

ಶ್ರಮಜೀವಿ ಸೇವಾ ಪ್ರತಿಷ್ಠಾನದ ಅಧ್ಯಕ್ಷರಾದ ಮಾಣಿಕ ಭುರೆ ಮಾತನಾಡಿ, ಬಸವತತ್ವ ಹಾಗೂ ವಚನ ಸಾಹಿತ್ಯದ ಪ್ರಚಾರ,ಪ್ರಸಾರ ಕಾರ್ಯದಲ್ಲಿ ಗುರುನಾಥ ಗಡ್ಡೆ ಅವರದ್ದು ಎತ್ತಿದ ಕೈಯಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು ಹಾಗೂ ಇತರೆ ಸಂಘಟನೆಗಳ ಪದಾಧಿಕಾರಿಯಾಗಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ವಿಜಯಲಕ್ಷ್ಮಿ ಗಡ್ಡೆ ಅವರು ಅಪ್ಪಟ ಬಸವತತ್ವನಿಷ್ಠರು. ಜನವಾದಿ ಮಹಿಳಾ ಸಂಘಟನೆ ಜಿಲ್ಲಾಧ್ಯಕ್ಷರಾಗಿ ಮಹಿಳೆಯರ ಹಕ್ಕುಗಳಿಗಾಗಿ ಮತ್ತು ಅವರ ಸಮಸ್ಯೆ ಪರಿಹಾರಕ್ಕಾಗಿ ಶ್ರಮಿಸುತ್ತಿದ್ದಾರೆ ಎಂದರು.

ಕುವೆಂಪು ಶಿಕ್ಷಣ ಸಂಸ್ಥೆ ಅಧ್ಯಕ್ಷ ಪ್ರಕಾಶ ಬಿರಾದಾರ ಮಾತನಾಡಿ, ಗುರುನಾಥ ಗಡ್ಡೆ ಮತ್ತು ವಿಜಯಲಕ್ಷ್ಮಿ ಗಡ್ಡೆಯವರು ಶ್ರಮಜೀವಿಗಳು. ನಗರದ ಏಕೈಕ ಬಹಿರಂಗ ಸುದ್ದಿ ಪತ್ರಿಕೆ ಪ್ರಕಟಿಸುವುದಕ್ಕೆ ಅವಿರತ ಶ್ರಮಿಸಿದರು. ಅನೇಕರಿಗೆ ಸಹಾಯ ಸಹಕಾರ ನೀಡಿದ್ದಾರೆ ಎಂದರು.

ಸಮಾಜ ಸೇವಕರಾದ ಧನರಾಜ ರಾಜೋಳೆ,ಕಲ್ಯಾಣರಾವ ಮದರಗಾಂವ ಗೋವಿಂದ ಶಿಂಧೆ, ಮಾರುತಿ ಫುಲೆ ಕಿಟ್ಟಾ. ಸಂಗಪ್ಪ ಪಾಟೀಲ, ವೈದ್ಯೆ ಡಾ.ಅಕ್ಕಮಹಾದೇವಿ, ಬಸವರಾಜ ಸೇರಿದಂತೆ ಆಉಪಸ್ಥಿತರಿದ್ದರು.

# ಡಾ. ಬಿ.ಆರ್. ಅಂಬೇಡ್ಕರ್ ಮಹಾಪರಿನಿರ್ವಾಣ ದಿನ ಆಚರಣೆಯಲ್ಲಿ ಕುಲಪತಿ ಪ್ರೊ. ಶಶಿಕಾಂತ ಅಭಿಪ್ರಾಯ



**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ :** ಮಹಾನ್ ಮಾನವತಾವಾದಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಬದುಕು ಮತ್ತು ಬರಹಗಳು ನೈಜತೆಯಿಂದ ಕೂಡಿದೆ. ವಾಸ್ತವಾಂಶಗಳಿಂದ ಕೂಡಿದ ಚಿಂತನೆ ಮತ್ತು ವಿಚಾರಗಳ ತಾತ್ವಿಕ ನೆಲೆಯನ್ನು ವಿದ್ಯಾರ್ಥಿ ಸಮೂಹ ಅರ್ಥಮಾಡಿಕೊಂಡರೆ ಮಾತ್ರ ಅವರ ಬದುಕು ಮತ್ತು ಬರಹಗಳ ಅಧ್ಯಯನ ಮತ್ತು ಸಂಶೋಧನೆಗೆ ಸ್ಫೂರ್ತಿ ಸಿಗಲಿದೆ ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಅಭಿಪ್ರಾಯಪಟ್ಟರು.

ಗುಲಬರ್ಗಾ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಹಾಗೂ ಸಂಶೋಧನಾ ಸಂಸ್ಥೆ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಆಯೋಜಿಸಿದ ಭಾರತ ರತ್ನ, ಸಂವಿಧಾನ ಶಿಲ್ಪಿ, ಮಹಾನ್ ಮಾನವತಾವಾದಿ, ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ 69ನೇ ಮಹಾಪರಿನಿರ್ವಾಣ ದಿನ ಕಾರ್ಯಕ್ರಮದಲ್ಲಿ ಮಾತನಾಡಿ ಅಮೇರಿಕಾ ಮತ್ತು ಇನ್ನಿತರ ದೇಶಗಳಲ್ಲಿ ಶಾಂತಿ ಎಂದರೆ ಗಾಂಧಿ, ಸಮಾನತೆ ಎಂದರೆ ಡಾ. ಬಿ. ಆರ್. ಅಂಬೇಡ್ಕರ್ ಎಂಬ ವಿಚಾರಗಳು ಚರ್ಚೆಯಾಗುತ್ತಿವೆ. ಡಾ. ಬಿ.ಆರ್. ಅಂಬೇಡ್ಕರ್ ವಿದೇಶಗಳಲ್ಲಿ ಓದಿ ದೇಶಕ್ಕೆ ನೀಡಿರುವ ಕೊಡುಗೆಗಳನ್ನು ಅರ್ಥ ಮಾಡಿಕೊಳ್ಳಲು ಹೆಚ್ಚು ಹೆಚ್ಚು ಅಧ್ಯಯನ ಮಾಡಬೇಕು ಎಂದರು.ಬೆಂಗಳೂರು ವಿಶ್ವವಿದ್ಯಾಲಯದ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ಪ್ರಾಧ್ಯಾಪಕ ಹಾಗೂ ಗ್ರಂಥಪಾಲಕ ಡಾ. ರಘುನಂದನ್ ಮುಖ್ಯ ಅತಿಥಿಯಾಗಿ ಮಾತನಾಡಿಸಮಾಜದಲ್ಲಿ ಮೌಢ್ಯವನ್ನು ಎತ್ತಿಹಿಡಿಯುವ ಹುನ್ನಾರ ನಡೆಯುತ್ತಿದೆ. ದೇಶಭಕ್ತಿ ಹೆಸರಿನಲ್ಲಿ ಜಾತಿ ಜಾತಿಗಳ ನಡುವೆ, ಧರ್ಮ ಧರ್ಮಗಳ ನಡುವೆ ಮತ್ತು ವರ್ಗ ವರ್ಗಗಳ ನಡುವೆ ಸಂಘರ್ಷ ಭಾವನೆ ಬೆಳೆಸಲು ಯತ್ನಿಸಲಾಗುತ್ತಿದೆ. ಕೆಲವು ಸಮಾಜ ವಿರೋಧಿ ಶಕ್ತಿಗಳು ವಿಷ ಬೀಜವನ್ನು ಬಿತ್ತುತ್ತಿವೆ. ಬುದ್ಧನ ಮಾರ್ಗದಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರ ಅವರು ಸಮಾನತೆ, ಸಹೋದರತೆ ಮತ್ತು ಬಾತೃತ್ವ ಸಂದೇಶಗಳನ್ನು ಅರ್ಥ ಮಾಡಿಕೊಳ್ಳಬೇಕಿದೆ ಎಂದರು. ಶೂದ್ರರು ಬ್ರಹ್ಮನ ಕಾಲಿನಿಂದ ಹುಟ್ಟಿದ್ದು ಎಂದು ಹೇಳಿದ ದಿನದಿಂದಲೇ ಅಸಮಾನತೆ ಬೆಳೆದಿದೆ. ಬುದ್ಧ, ಬಸವ ಮತ್ತು ಡಾ. ಬಿ.ಆರ್. ಅಂಬೇಡ್ಕರ್, ಜ್ಯೋತಿಬಾ ಪುಲೆ, ರಾಜಾರಾಂ ಮೋಹನರಾಯ್, ದಯಾನಂದ ಸರಸ್ವತಿ ಇಂತಹ ಮಹನೀಯರ ಹುಟ್ಟಿನಿಂದ ಸಮಾಜದಲ್ಲಿನ ಮೌಢ್ಯತೆ, ಅಜ್ಞಾನ ಮತ್ತು ಅಮಾನವೀಯ ಪದ್ಧತಿ ಮತ್ತು ಅವೈಜ್ಞಾನಿಕ ಪಿಡುಗುಗಳ ನಿವಾರಣೆ ಸಾಧ್ಯವಾಗಿದೆ. ಆದರೆ, ಇಂದು ಸರ್ವಾಧಿಕಾರ ಮನೋಭಾವ ಬೆಳೆಸಿಕೊಂಡವರು ಧರ್ಮವನ್ನು ಮುನ್ನಲೆಗೆ ತಂದು ಜನರ ತಲೆಗೆ ತುಂಬುತ್ತಿದ್ದಾರೆ. ಯುವಕರಿಗೆ ತಪ್ಪು ತಿಳುವಳಿಕೆ ಮೂಡಿಸುವ ಕೆಲ ಗುಂಪುಗಳು ಇಡೀ ಸಮಾಜಕ್ಕೆ ಅಪಾಯ ತಂದೊಡ್ಡುತ್ತಿವೆ. ಪ್ರಜ್ಞಾವಂತರು ಈ ಹುನ್ನಾರವನ್ನು ಅರಿತು ಪ್ರಶ್ನಿಸುವ ಸಾಮರ್ಥ್ಯ ಕಂಡುಕೊಳ್ಳಬೇಕು. ಪ್ರಸ್ತುತ ಡಾ. ಬಾಬಾ ಸಾಹೇಬ್ ಅಂಬೇಡ್ಕರ ಅವರ ಸಂವಿಧಾನವನ್ನು ಓದುವ ಅನಿವಾರ್ಯತೆ ಹೆಚ್ಚಾಗಿದೆ ಎಂದ ಅವರು ಸರ್ವಾಧಿಕಾರ ಮನಸ್ಥಿತಿ ಮತ್ತು ಧೋರಣೆಗಳಿಂದ ನೊಂದವರಿಗೆ ಸ್ವಾತಂತ್ರ್ಯ, ಸಮಾನತೆ, ಸಹೋದರತೆ ಸಿಕ್ಕಿದೆಯೇ ಎಂದು ಪ್ರಶ್ನಿಸಿದರು.

ಡಾ. ಬಿ. ಆರ್. ಅಂಬೇಡ್ಕರ್ ಅಧ್ಯಯನ ಹಾಗೂ ಸಂಶೋಧನಾ ಸಂಸ್ಥೆಯ ನಿರ್ದೇಶಕ ಪ್ರೊ. ಚಂದ್ರಕಾಂತ ಯಾತನೂರು ಅತಿಥಿ ಗಣ್ಯರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ಡಾ. ಬಿ. ಆರ್. ಅಂಬೇಡ್ಕರ್ ಅವರ ಆಶಯಗಳನ್ನು ಪ್ರಜ್ಞಾವಂತರು ಮರೆತಿದ್ದಾರೆ. ಶಿಕ್ಷಣ, ಸಂಘಟನೆ ಮತ್ತು ಹೋರಾಟ ಪ್ರಜ್ಞೆಯನ್ನು ವಿದ್ಯಾವಂತರು ಅರಿತುಕೊಳ್ಳಬೇಕು ಎಂದರು. ಸಂವಿಧಾನದ ಮೂಲ ಉದ್ದೇಶದಂತೆ ಎಲ್ಲರನ್ನು ಮುನ್ನಡೆಸಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಸಿಂಡಿಕೇಟ್ ಸದಸ್ಯ ಎಸ್. ಪಿ. ಸುಳ್ಳದ್, ಮೌಲ್ಯಮಾಪನ ಕುಲಸಚಿವ ಡಾ. ಎನ್. ಜಿ. ಕಣ್ಣೂರು, ವಿತ್ತಾಧಿಕಾರಿ ಶ್ರೀಮತಿ ಜಯಾಂಬಿಕ, ಕುಲಸಚಿವ ಪ್ರೊ. ರಮೇಶ್ ಲಂಡನಕರ್ ಉಪಸ್ಥಿತರಿದ್ದರು. ಕಲಾ ನಿಕಾಯದ ಡೀನ್ ಪ್ರೊ. ಎಚ್. ಟಿ. ಪೋತೆ, ಪ್ರೊ. ಬಸವರಾಜ ಸಣ್ಣಕ್ಕಿ, ಡಾ. ಪ್ರಕಾಶ್ ಕರಿಯಜ್ಜನವರ, ಪ್ರೊ. ಬಿ. ಎಂ. ಬೈನ್, ಪ್ರೊ. ವಿ. ಟಿ. ಕಾಂಬಳೆ ಹಾಗೂ ಸಿಂಡ-ಕೇಟ್ ಸದಸ್ಯರು, ವಿದ್ಯಾವಿಷಯಕ ಪರಿಷತ್ ಸದಸ್ಯರು, ಶಿಕ್ಷಕೇತರ ಸಿಬ್ಬಂದಿ, ಅತಿಥಿ ಉಪನ್ಯಾಸಕರು, ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸಂಗೀತ ವಿಭಾಗದ ಶಿಕ್ಷಕ ಸಿದ್ಧಾರ್ಥ ಚಿಮ್ಮಾ ಇದಲಾಯಿ ಬುದ್ಧ ವಂದನೆ ಹಾಗೂ ಡಾ.ಬಿ. ಆರ್. ಅಂಬೇಡ್ಕರ್ ಗೀತೆಗಳನ್ನಾಡಿದರು. ಡಾ. ಬುದ್ಧ ಭಾರತ ಕಾರ್ಯಕ್ರಮ ನಿರ್ವಹಣೆ ಮಾಡಿದರು. ಸಂಶೋಧನಾ ವಿದ್ಯಾರ್ಥಿ ಶಾಂತಪ್ಪ ಹೆಬಳಿ ವಂದಿಸಿದರು.

# ತಾಲೂಕ ಸಲಹೆಗಾರರಾಗಿ ತಿಪ್ಪಣ್ಣರೆಡ್ಡಿ ನೇಮಕ



**ಮಲ್ಲಮ್ಮನುಡಿವಾರ್ತೆ,ಚಿಟಗುಪ್ಪ:** ಕನ್ನಡ ನಾಡು, ನುಡಿ, ನೆಲ, ಜಲ ಭಾಷೆಗಾಗಿ ಕನ್ನಡ ಸೇನೆ ಕರ್ನಾಟಕಸಂಘಟನೆ ಮಾಡಿರುವ ಹೋರಾಟಗಳಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸಿದ ತಿಪ್ಪಣ್ಣರೆಡ್ಡಿ ಇಟಗಾ ಇವರನ್ನು ಚಿಟಗುಪ್ಪ ತಾಲೂಕ ಸಲಹಾಗಾರರಾಗಿ ನೇಮಕ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿಸ್ವಾಮಿ ನಿರ್ಣಾ ತಿಳಿಸಿದ್ದಾರೆ.ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸುಭಾಷ ಕೆನಡೆ, ಜಿಲ್ಲಾ ಕಾರ್ಯದರ್ಶಿ ರಮೇಶ್ ಧೂಳ್ ತಾಲೂಕಾಧ್ಯಕ್ಷ ಪವನ್ ಪೂಜಾರಿ ಉಪಸ್ಥಿತರಿದ್ದರು.

# ಮಹಾಪರಿನಿರ್ವಾಣ ದಿನ: ಸಂವಿಧಾನ ಶಿಲ್ಪಿಗೆ ಅಧಿಕಾರಿಗಳಿಂದ ಹಾಗೂ ಗಣ್ಯರಿಂದ ನಮನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನವನ್ನು ಪಟ್ಟಣದ ಡಾ.ಬಿ.ಆರ್ ಅಂಬೇಡ್ಕರ್ ವೃತ್ತದಲ್ಲಿ ಆಚರಿಸಲಾಯಿತು. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಅಧಿಕಾರಿಗಳು ಹಾಗೂ ಗಣ್ಯರು ಹೂ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್, ಉಪಾಧ್ಯಕ್ಷ ನಸೀರ ಖಾನ್, ಪುರಸಭೆ ಮುಖ್ಯಾಧಿಕಾರಿ ಸತೀಶ್ ಗುಡ್ಡೆ, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಪಿಎ ಬಸಲಿಂಗಪ್ಪ ಎಂ. ಗೋಧಿಹಾಳ, ಪುರಸಭೆ ಮಾಜಿ ಸದಸ್ಯ ರಾಜದೀಪ್ ಜಾಬಾ, ಬಾಬಾ ಆರ್.ಸಿ.ಸಿ, ಮನೋಜಕುಮಾರ್ ಶರ್ಮಾ, ಶಾಮರಾವ ಭುತ್ತಾಳೆ, ಶ್ರೀಕಾಂತ ಫುಲೇ, ಕಲ್ಯಾಣರಾವ ಜಾಬಾ, ದಯಾನಂದ ಕಾಂಬಳೆ, ಮಾಣಿಕ ಹಿಪರ್ಗ, ಶರೀಫ್, ಆಕಾಶ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಭೂಮಿಕಾ ಮೇಟಿಗೆ ಇಲಕಲ್ಲ ರಡ್ಡಿ ಸಮಾಜದಿಂದ ಸಹಾಯ ಹಸ್ತ



**ಮಲ್ಲಮ್ಮನುಡಿವಾರ್ತೆ ಇಳಕಲ್:** ಹುನುಗುಂದ ಇಲಕಲ್ಲ ಅವಳಿ ತಾಲೂಕುಗಳ ರಡ್ಡಿ ಸಮಾಜದ ವತಿಯಿಂದ ಕಡು ಬಡತನದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಉನ್ನತ ಸಾಧನೆ ಮಾಡಿದ ಕೊಪ್ಪಳ ತಾಲೂಕಿನ ಕಾತರಕಿ ಗ್ರಾಮದ ವಿದ್ಯಾರ್ಥಿನಿ ಕುಮಾರಿ ಭೂಮಿಕಾ ಮೇಟಿ ಯವರಿಗೆ ಹುನಗುಂದ ಇಲಕಲ್ಲ ಅವಳಿ ತಾಲೂಕ ರಡ್ಡಿ ಸಮಾಜ ಹಾಗೂ ಬೆಂಗಳೂರಿನ ರಾಜ್ಯ ರೆಡ್ಡಿ ಜನ ಸಂಘದ ಸಂಘಟನಾ ಅಧ್ಯಕ್ಷರಾದ ಶ್ರೀ ಪ್ರಭಾಕರ್ ರೆಡ್ಡಿ ನಿರ್ದೇಶಕರಾದ ಶಾಂತರಾಜ್ ರೆಡ್ಡಿ. ವಾಸುದೇವ ರೆಡ್ಡಿ ಕೆಜಿಎಫ್ ತಾಲೂಕ ರೆಡ್ಡಿ ಜನ ಸಂಘದ ಅಧ್ಯಕ್ಷರಾದ ಪ್ರಸನ್ನ ಕುಮಾರ್ ರೆಡ್ಡಿ ಹಾಗೂ ಹುನಗುಂದ-ಇಲಕಲ್ಲ ಅವಳಿ ತಾಲೂಕುಗಳ ರೆಡ್ಡಿ ಸಮಾಜದ ಆರ್ ಆರ್ ಪಿ ಸಂಘಟನೆ ಅಧ್ಯಕ್ಷರಾದ ಡಾ// ಸಿದ್ದನಗೌಡ ಪಾಟೀಲ್, ಬಸವರಾಜ ಚಿಕ್ಕಓತಗೇರಿ, ವಿಜಯ ತುಂಬದ, ಪ್ರಶಾಂತ ಪಾಟೀಲ್. ಕುಮಾರಗೌಡ ತಿಮ್ಮಾಪುರ, ಜಗದೀಶ ಎಮ್ಮಿ. ಜಗದೀಶ ಗಿರಡ್ಡಿ. ರವರುಗಳು ಕೊಪ್ಪಳ ತಾಲೂಕಿನ ಕಾತರಕಿ ಗ್ರಾಮಕ್ಕೆ ತೆರಳಿ ಕಡು ಬಡತನದಲ್ಲಿ ಪಿಯುಸಿ ದ್ವಿತೀಯ ವಿಜ್ಞಾನ ವಿಭಾಗದಲ್ಲಿ ಅಮೋಘ ಸಾಧನೆ ಮಾಡಿದ ಕುಮಾರಿ ಭೂಮಿಕಾ ಮೇಟಿ ಇವರಿಗೆ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಪ್ರತಿಶತ ಶೇಕಡ 98 ಅಂಕ ಪಡೆದ ವಿದ್ಯಾರ್ಥಿನಿಗೆ ಸಹಾಯಸ್ತವಾಗಿ ಮುಂದಿನ ಶಿಕ್ಷಣ ಬಿಎಸ್ಸಿ ಅಗ್ರಿ ಕಲಿಸುವ ಜವಾಬ್ದಾರಿ ಎರಡು ವರ್ಷದ ಫೀಸ್ ಅನ್ನು ಪ್ರಭಾಕರ್ ರೆಡ್ಡಿ. ಶಾಂತರಾಜ್ ರೆಡ್ಡಿ .ವಾಸುದೇವ ರೆಡ್ಡಿ. ಪ್ರಸನ್ನ ಕುಮಾರ್ ರೆಡ್ಡಿ. ಕೊಡ ಮಾಡುವ ವಾಗ್ದಾನ ಮಾಡಿದ್ದು ಹುನಗುಂದ ಇಲಕಲ್ಲ ಅವಳಿ ತಾಲೂಕುಗಳ ರಡ್ಡಿ ಸಮಾಜ ಹಾಗೂ ರಾಷ್ಟಕೂಟ ರಡ್ಡಿ ಪರಿವಾರದ ವತಿಯಿಂದ ಆರ್ಥಿಕ ಸಹಾಯ ಹಸ್ತ ನೀಡಿ ಮುಂದಿನ ವಿದ್ಯಾಭ್ಯಾಸಕ್ಕಾಗಿ ಸಹಾಯ ಮಾಡಿದರು..ಇದೇ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷರಾದ ಜಗದೀಶಪ್ಪ ಸಿಂಗನಾಳ ಬೀದರನ ಶ್ರೀನಿವಾಸ್ ರೆಡ್ಡಿ. ವೆಂಕಾರೆಡ್ಡಿ ವಕೀಲರು ಕಾತರಕಿ ಗ್ರಾಮದ ಹಿರಿಯರಾದ ಶಂಕರಗೌಡ ಹಿರೇಗೌಡ್ರ, ವೆಂಕನಗೌಡ ಹಿರೇಗೌಡ್ರು ,ಕಾಶಿನಾಥ್ ರೆಡ್ಡಿ. ಮಂಜುನಾಥ್ ಮೇಟಿ ಅಶೋಕ ನಾಗನಗೌಡ್ರ. ಎರಿಯಪ್ಪ ಗೌಡ ಹಾಗೂ ಗ್ರಾಮದ ಅನೇಕ ರಡ್ಡಿ ಸಮಾಜದ ಹಿರಿಯರು ಯುವಕರು ತಾಯಂದಿರು ಇದ್ದರು

# ಜಿಲ್ಲಾ ಕಾರ್ಯಾಧ್ಯಕ್ಷರಾಗಿ ನಿಂಗಪ್ಪ ಹಡಪದ ನೇಮಕ

ಮಲ್ಲಮ್ಮ ನುಡಿ ವಾರ್ತೆ



**ಚಿಟಗುಪ್ಪ:** ಕನ್ನಡ ಸೇನೆ ಕರ್ನಾಟಕ ಸಂಘಟನೆಯಲ್ಲಿ ಸುಮಾರು 17 ವರ್ಷಗಳಿಂದ ಕನ್ನಡ ಪರ ಹೋರಾಟಗಳಲ್ಲಿ ಸಕ್ರಿಯವಾಗಿ ಹೋರಾಟ ಮಾಡಿದಂತಹ ಹಿರಿಯ ಹೋರಾಟಗಾರ ನಿಂಗಪ್ಪ ಹಡಪದ ಇವರನ್ನು ಜಿಲ್ಲಾ ಕಾರ್ಯಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ. ಬಾಬಾ ಸಾಹೇಬರು ಶ್ರೇಷ್ಠ ಕಾನೂನು ತಜ್ಞರು



**ಮಲ್ಲಮ್ಮನುಡಿವಾರ್ತೆ ಕೆಂಭಾವಿ:** ದೇಶದ ಶೋಷಿತ ನಿರ್ಗತಿಕರು ತಳ ಸಮುದಾಯದ ಏಳಿಗೆಗಾಗಿ ಹೋರಾಟ ಮಾಡಿದ ಧೀಮಂತ ನಾಯಕ ಡಾ. ಬಿ ಆರ್ ಅಂಬೇಡ್ಕರ್ ರವರು ಎಂದು ಜಿಲ್ಲಾ ಕಾಂಗ್ರೆಸ್ ಪಕ್ಷದ ಜಿಲ್ಲಾ ಉಪಾಧ್ಯಕ್ಷ ಮಹಿಪಾಲರಡ್ಡಿ ಡಿಗ್ಗಾವಿ ಹೇಳಿದರು.

ಪಟ್ಟಣದ ಮಾಹಾನಾಯಕ ಡಾ. ಬಿ.ಆರ್.ಅಂಬೇಡ್ಕರ್ ಅವರ ಪುತ್ತಳಿ ಆವರಣದಲ್ಲಿ ಶನಿವಾರ ಹಮ್ಮಿಕೊಂಡ ಮಹಾ ಮಾನವತಾವಾದಿ ಡಾ. ಬಿ.ಆರ್.ಅಂಬೇಡ್ಕರ್ ಅವರ 69 ನೇ ಮಹಾಪರಿನಿರ್ವಾಣ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಸಂವಿಧಾನ ಶಿಲ್ಪಿ ಬಾಬಾಸಾಹೇಬ ಅಂಬೇಡ್ಕರರು ಮಹಿಳೆಯರ ಹಕ್ಕಿಗಾಗಿ ಹೋರಾಟ ಮಾಡಿದ ಮೊದಲ ಭಾರತೀಯ, ಅವರ ಹಕ್ಕಿಗಾಗಿ ತಮ್ಮ ಸದಸ್ಯತ್ವಕ್ಕೆ ರಾಜಿನಾಮೆ ನೀಡಿದ ಸಾಮಾಜಿಕ ನ್ಯಾಯದ ಹರಿಕಾರ ಎಂದ ಅವರು. ಸರ್ವ ಜನಾಂಗಕ್ಕೆ ನ್ಯಾಯವನ್ನು ಒದಗಿಸಿ ಕೊಟ್ಟ ಶ್ರೇಷ್ಠ ಕಾನೂನು ತಜ್ಞರು ಎಂದರು.

ಪುರಸಭೆ ಅಧ್ಯಕ್ಷೆ ಶ್ರೀಮತಿ ಪ್ರಿಯ ರಾಮನಗೌಡ ಪೊಲೀಸ್ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಶ್ರೀಮತಿ ಲಕ್ಷ್ಮೀಬಾಯಿ ಕಂಬಾರ, ಯುವಮುಖಂಡ ಆದಿತ್ಯಗೌಡ ಪೊಲೀಸ್ ಪಾಟೀಲ್, ಪುರಸಭೆ ಸದಸ್ಯರುಗಳಾದ ರವಿಶಂಕರ ಸೊನ್ನದ, ಆರಿಫ್ ಖಾಜಿ, ಭೀಮನಗೌಡ ಮಲ್ಕಾಪುರ, ಪರಶುರಾಮ ಬಳಬಟ್ಟಿ, ಪುರಸಭೆ ಮುಖ್ಯಅಧಿಕಾರಿ ಮಹ್ಮದ್ ಯೂಸುಫ, ಉಪ ತಹಶೀಲ್ದಾರ್ ಪ್ರವೀಣಕುಮಾರ ಸಜ್ಜನ, ಕಂದಾಯ ನಿರೀಕ್ಷಕ ರಜಾಸಾಬ್ ಕಂದಗಲ್, ಪದವಿ ಪೂರ್ವ ಕಾಲೇಜು ಪ್ರಿನ್ಸಿಪಾಲ ಅಶೋಕ ತಳಗೇರಿ, ಶಿವಶರಣಪ್ಪ ಮಾಳಳ್ಳಿಕರ್, ಮಲ್ಲಿಕಾರ್ಜುನ ಕರಡಕಲ್, ಶಿವಶರಣಪ್ಪ ವಾಡಿ, ಶರಣಪ್ಪ ನಗನೂರ,

ಮಡಿವಾಳಪ್ಪ ಕಟ್ಟಿಮನಿ, ಧರ್ಮಣ್ಣ ಬಡಿಗೇರ, ಅಯ್ಯಣ್ಣ ಮಾಳಳಿಕರ್, ಮರೆಪ್ಪ ಮಾಳಳ್ಳಿಕರ್, ಅಂಬರೀಶ ಬೊಮ್ಮನಹಳ್ಳಿ, ಬಸವಣ್ಣಪ್ಪ ಮಾಳಳ್ಳಿಕರ್, ಲಕ್ಷ್ಮಣ್ ಬಸರಿಗಿಡ, ಪರಶುರಾಮ ಮಾಳಳ್ಳಿಕರ್, ಲಕ್ಷ್ಮಣ ಬಾವಿಮನಿ, ರವಿಕುಮಾರ ಯಮನೂರ, ಜಟ್ಟೆಪ್ಪ ಮುಷ್ಠಹಳ್ಳಿ, ಶಿವಪ್ಪ ಕಂಬಾರ, ಮಲ್ಲಿಕಾರ್ಜುನ ಕಟ್ಟಿಮನಿ, ಭೀಮಣ್ಣ ದೊಡ್ಡಮನಿ, ಸಿದ್ದರಾಮಯ್ಯ ಇಂಡಿ, ಮೌನೇಶ, ಭೀಮು ಮಾಳಿಕೇರಿ, ಪ್ರಕಾಶ್ ಮಾಳಳ್ಳಿಕರ್, ತಿಪ್ಪಣ್ಣ ಅಗ್ಗಿ, ಬಾಲರಾಜ್ ಬಸರಿಗಿಡ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು

# ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ತಿಪ್ಪಣ್ಣ ಸಿರಸಗಿ ಅವರು ತಿಳಿಸಿದ್ದಾರೆ.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಯಲ್ಲಿ ಪ್ರತಿಬಿಂಬಿಸಲು ಹಾಗೂ ವಿವಿದ ಕ್ಷೇತ್ರಗಳ್ಲಿ ಅವರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲು ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಪ್ರತಿ ವರ್ಷ ಕಿತ್ತೂರು ರಾಣಿ ಚನ್ನಮ್ಮ ಇವರ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತುದೆ.

ಅದರಂತೆ 2025–26–ನೇ ಸಾಲಿನ ಈ ಪ್ರಶಸ್ತಿಗಾಗಿ ಯಾದಗಿರಿ ಜಿಲ್ಲೆಯಿಂದ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳನ್ನೊಳಗೊಂಡಂತೆ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರಿಗೆ ವೀರಮಹಿಳೆ ಎಂದು ಗುರುತಿಸಿ ಪ್ರಶಸ್ತಿ ನೀಡಲಿದೆ. ಅರ್ಜಿ ನಮೂನೆಗಳನ್ನು ಉಪ ನಿರ್ದೇಶಕ ಕಛೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೋಣೆ ಸಂಖ್ಯೆ ಸಿ–17, ಸಿ–ಬ್ಲಾಕ್ ಒಂದನೇ ಮಹಡಿ, ಜಿಲ್ಲಾಡಳಿತ ಭವನ ಸಂಕೀರ್ಣ, ಚಿತ್ತಾಪೂರ ರಸ್ತೆ ಯಾದಗಿರಿ ಈ ಕಛೇರಿಯಿಂದ ಪಡೆದು ಭರ್ತಿಮಾಡಿ 2025ರ ಡಿಸೆಂಬರ್ 28 ರಂದು ಒಳಗೆ ಅರ್ಜಿಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08743253739, 9845505585, 9113567035ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಧಾನ ಮಂತ್ರಿ ಯೋಜನೆಯಡಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :

ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನಲ್ಲಿ 2025–26ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯಡಿ ಧರ್ತಿ ಆಭಾ ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನವನ್ನು ಜಾರಿಗೊಳಿಸುವ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಅವರು ತಿಳಿಸಿದ್ದಾರೆ.

ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯಡಿ ಧರ್ತಿ ಆಭಾ ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನವನ್ನು ಜಾರಿಗೊಳಿಸುವ ಯೋಜನೆಯನ್ನು ಬುಡಕಟ್ಟು ಸಮುದಾಯ, ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಘಟಕ ವೆಚ್ಚದ 90 ರಷ್ಟು ಸಹಾಯಧನ ನೀಡಲು ಅವಕಾಶವಿದ್ದು, ಪರಿಶಿಷ್ಟ ಪಂಗಡದವರಿಗೆ ಮೀನುಮಾರಾಟಕ್ಕಾಗಿ ಐಸ್ ಬಾಕ್ಸೊಂದಿಗೆ ದ್ವಿಚಕ್ರ ವಾಹನ, ಐಸ್ ಬಾಕ್ಸೊಂದಿಗೆ ತ್ರಿಚಕ್ರ ವಾಹನ ಮತ್ತು ಜೀವಂತ ಮೀನು ಮಾರಾಟ ಕೇಂದ್ರಗಳನ್ನು ಸ್ಥಾಪಿಸಲು ಸಹಾಯಧನ ನೀಡಲಾಗುವುದು. ಈ ಯೋಜನೆ ಆಯ್ದ ಗ್ರಾಮಗಳಿಗೆ ಮೀಸಲಾಗಿದ್ದು, ಯಾದಗಿರಿ ತಾಲೂಕಿನ ಅರಿಕೇರಾ.ಬಿ ಗ್ರಾಮ ಪಂಚಾಯತ್‌ನಲ್ಲಿ ಬರುವ ಬಸಂತಪೂರ ಗ್ರಾಮದ ಅರ್ಹ ಮೀನುಗಾರ ಫಲಾನುಭವಿಗಳು 2025ರ ಡಿಸೆಂಬರ್ 22ರ ಒಳಗೆ ಅರ್ಜಿಸಲ್ಲಿಸಬೇಕು, ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಯೋಜನೆ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : 2025–26ನೇ ಸಾಲಿನ ನಿಗಮದ ವಿವಿಧ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಪ್ಪಣ್ಣ ಶಿರಸಿ ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು 2025–26ನೇ ಸಾಲಿನ ನಿಗಮದ ವಿವಿಧ ಯೋಜನೆಗಳಾದ ಉದ್ಯೋಗಿನಿ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳ, ಚೇತನ ಯೋಜನೆ, ಧನಶ್ರೀ ಯೋಜನೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಗಳ ಅರ್ಜಿಗಳನ್ನು ಹತ್ತಿರದ ಬಾಪೂಜಿ ಸೇವಾಕೇಂದ್ರ, ಗ್ರಾಮ್ ಒನ್, ಕರ್ನಾಟಕ ಒನ್, ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಗಳಡಿ ಅರ್ಜಿಗಳನ್ನು ಆನ್‌ಲೈನ್ ಮತ್ತು ಆಫ್ ಲೈನ್ ಎರಡರಲ್ಲಿ ಸಹ ಅರ್ಜಿಸಲ್ಲಿಸಲು ಅವಕಾಶ ನೀಡಲಾಗಿದೆ. ಆಫ್‌ಲೈನ್ ಅರ್ಜಿಗಳನ್ನು ನಿಗದಿತ ಅವಧಿ ಒಳಗೆ ಅವಶ್ಯ ದಾಖಲಾತಿಗಳೊಂದಿಗೆ ಉಪನಿರ್ದೇಶಕರ ಕಛೇರಿಗೆ 2025ರ ಡಿಸೆಂಬರ್ 15 ರಂದು ಸಂಜೆ 5.30 ಗಂಟೆಯ ಒಳಗೆ ಅರ್ಜಿಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ, ಹಾಗೂ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕಛೇರಿ ಕೋಣೆ ಸಂಖ್ಯೆ ಸಿ–17, ಒಂದನೇ ಮಹಡಿ, ಜಿಲ್ಲಾಡಳಿತ ಭವನ ಯಾದಗಿರಿ ದೂ.ಸಂ.08473253739, 8105395485ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಜಿಲ್ಲಾ ಮಟ್ಟದ ಡಿಟಿಎಫ್ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :

ಜಿಲ್ಲೆಯಲ್ಲಿ 2025ರ ಡಿಸೆಂಬರ್ 21 ರಿಂದ 24ರ ವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ವಿ ಅನುಷ್ಠಾನದ ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರ ಅಧ್ಯಕ್ಷತೆಯಲ್ಲಿ 2025ರ

ಡಿಸೆಂಬರ್ 8 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಡಿಟಿಎಫ್ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಅವರು ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ 2025ರ ಡಿಸೆಂಬರ್ 21 ರಿಂದ 24ರ ವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಕುರಿತು ಜಿಲ್ಲಾ ಮಟ್ಟದ ಡಿಟಿಎಫ್ ಸಭೆಗೆ ಅಂ–ದು ಸಂಬಂಧಿಸಿದ ಅಧಿಕಾರಿಗಳು ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಅಂಬೇಡ್ಕರ್ ರವರ 69ನೇ

## ಮಹಾಪರಿನಿರ್ವಾಣ ದಿನದ ಅಂಗವಾಗಿ ಗೌರವ ಸಮರ್ಪಣೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ 69 ನೇ ಮಹಾಪರಿನಿರ್ವಾಣ ದಿನದ ಅಂಗವಾಗಿ ಇಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ನಗರದ ಅಂಬೇಡ್ಕರ್ ಸರ್ಕಲ್ ದಲ್ಲಿರುವ ಡಾ.ಬಿ. ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಗತ್ತೇ ಮೆಚ್ಚುವಂತಹ ಮತ್ತು ಸರ್ವ ಸಮುದಾಯಗಳಿಗೆ ಸಮಾನ ಅವಕಾಶ, ನ್ಯಾಯ ಸಿಗುವಂತಹ ಶ್ರೇಷ್ಠ ಸಂವಿಧಾನ ನೀಡಿದವರು ಡಾ.ಬಿ.ಆರ್. ಅಂಬೇಡ್ಕರ್ ಅವರು ಎಂದು ಬಣ್ಣಿಸಿದರು. ನ್ಯಾಯವಾದಿ, ಅರ್ಥಶಾಸ್ತ್ರಜ್ಞ, ತತ್ವಜ್ಞಾನಿ, ಸಮಾಜ ಸುಧಾರಕ ಮತ್ತು ರಾಷ್ಟ್ರನಿರ್ಮಾಣಕಾರರಾಗಿ ಅವರ ಅವಿರತ ಶ್ರಮ ಮತ್ತು ಪ್ರಯತ್ನಗಳು ಆಧುನಿಕ ಭಾರತಕ್ಕೆ ಭದ್ರ ಬುನಾದಿ ಹಾಕಿವೆ ಎಂದರು.

ಡಾ.ಅಂಬೇಡ್ಕರ್ ಅವರು ರಚಿಸಿದ್ದು ಕೇವಲ ಸಂವಿಧಾನವಲ್ಲ. ಆ ಮೂಲಕ ಪ್ರತಿಯೊಬ್ಬ ನಾಗರಿಕನೂ ಘನತೆ ಮತ್ತು ಅವಕಾಶವನ್ನು ಅನುಭವಿಸುವ ಸಮಗ್ರ ಸಬಲೀಕರಣಗೊಂಡ ರಾಷ್ಟ್ರಕ್ಕೆ ನೀಲಿನಕ್ಷೆ ಒದಗಿಸಿದ ಶ್ರೇಷ್ಠ ಜ್ಞಾನಿಯಾಗಿದ್ದಾರೆಂದು ಅವರು ಮಾರ್ಮಿಕವಾಗಿ ನುಡಿದರು.

ದೀನದಲಿತರ, ಕಾರ್ಮಿಕರ, ನೊಂದವರ ಧ್ವನಿಯಾಗಿ ಮತ್ತು ಅವರ ಕಲ್ಯಾಣಕ್ಕಾಗಿ ಹೋರಾಟ ಮಾಡುವ ಮೂಲಕ ನ್ಯಾಯ ಒದಗಿಸಿದ್ದಾರೆಂದ ಅವರು ಡಾ.ಅಂಬೇಡ್ಕರ್ ಅವರ ಮೌಲ್ಯಗಳು, ಜೀವನಅನುಭವ ಪ್ರತಿಯೊಬ್ಬರು ಅನುಸರಿಸುವ ಮೂಲಕ ಜಾತ್ಯಾತೀತ ರಾಷ್ಟ್ರನಿರ್ಮಾಣಕ್ಕೆ ಎಲ್ಲರೂ ಶ್ರಮಿಸೋಣ ಎಂದು ಶಾಸಕರು ಹೇಳಿದರು. ಜಿಲ್ಲಾಡಳಿತದ ಪರವಾಗಿ ಮಾಲಾರ್ಪಣೆ ಮಾಡಿ ಮಾತನಾಡಿದ ಡಿಸಿ ಹರ್ಷಲ್ ಭೋಯರ್ ಅವರು, ಪ್ರಜಾಪ್ರಭುತ್ವದ ವ್ಯವಸ್ಥೆಗೆ ಡಾ.ಅಂಬೇಡ್ಕರ್ ಅವರು ಅತ್ಯುತ್ತಮ ಸಂವಿಧಾನ ನೀಡುವ ಮೂಲಕ ರಾಷ್ಟ್ರದ ಅಭಿವೃದ್ಧಿಗೆ ಭದ್ರ ಬುನಾದಿಹಾಕಿದ್ದಾರೆ.

ದೇಶದ ಸರ್ವ ಜನಾಂಗದ ಹಿತ ಕಾಯುವ ಅಂಶಗಳು ಅಡಗಿವೆ ಎಂದರು. ಡಾ.ಬಿ.ಆರ್.ಅಂಬೇಡ್ಕರ್ ಅವರ 69 ಪರಿನಿರ್ವಾಣ ದಿನದ ಅಂಗವಾಗಿ ಈ ಸಂದರ್ಭದಲ್ಲಿ ಸುರೇಂದ್ರ ಬಬಲಾದಿ, ಸುರೇಶ್ ಬೊಮ್ಮನವರು ಪಂಚಶೀಲ ಮತ್ತು ನೀಲಿಧ್ವಜವನ್ನು ನೆರವೇರಿಸಲಾಯಿತು. ನಗರಸಭೆ ಪೌರಾಯುಕ್ತ ಉಮೇಶ ನಾಯಕ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಸಕರಾದ ಎಸ್ ಎಸ್ ಚನ್ನಬಸಪ್ಪ, ತಹಸೀಲ್ದಾರ ಸುರೇಶ್ ಅಂಕಲಗಿ, ಸಹಾಯಕ ನಿರ್ದೇಶಕರಾದ ಬೆಬಿ ಲಕ್ಷ್ಮಣ ಹುಲಸವಾರ್, ನಿಲಯ ಮೇಲ್ವಿಚಾರಕರಾದ ದೇವಿಂದ್ರಪ್ಪ, ಮೋಹ್ಮದ್ ಹುಸೇನಿ, ನಿಂಗಣ್ಣ ಸೇರಿ, ಸುನೀಲ್ ಪವಾರ್, ನ್ಯಾಯವಾದಿ ಮಹೇಶ ಎಸ್ ಕುರಕುಂಬಳ, ಕುಪೇಂದ್ರ ವಠಾರ್, ಶ್ಯಾಮಸನ್ ಮಾಲಿಕೆರಿ. ಮಲ್ಲಣ್ಣ ದಾಸನಕೆರಿ, ಭೀಮರಾಯ ಬೊಮ್ಮನ್, ಮಲ್ಲಿಕಾರ್ಜುನ್ ಈಟಿ, ಮಹೇಶ್ ಕುರುಕುಂಬಳ, ಕೈಲಾಸ ಅನ್ವರ್, ಶರಣು ನಾಟೇಕರ್, ಸ್ವಾಮಿ ದೇವ್ ದಾಸನ ಕೇರಿ, ಮಂಜುನಾಥ್ ದಾಸನಕೇರಿ, ನಿಂಗಪ್ಪ ಬೀರ್ನಾಳ್, ಭೀಮಪ್ಪ ಕಾಗಿ, ಮಲ್ಲಿಕಾರ್ಜುನ್, ಶ್ರೀಮಂತ ಚಿನ್ನ ಕರ್, ಗಾಲಿ ಪಟೇಲ್, ಚಂದ್ರಕಾಂತ್ ಚಲವಾದಿ, ಅವಿನಾಶ್ ಅನ್ವರ್, ವಸಂತ್ ಕುಮಾರ್, ಸಂಪತ್ ಕುಮಾರ್, ಮಂಜುನಾಥ್, ಶ್ರೀಕಾಂತ್ ಸುಂಗಲ್ ಕರ ಇದ್ದರು.

# ಭಾರತೀಯ ಸೇನೆಗೆ ಯುವಕ ಆಯ್ಕೆ ಗ್ರಾಮಸ್ಥರಿಂದ ಅದ್ದೂರಿ ಮೆರವಣಿಗೆ



ಮಂಜಲಾಪುರಹಳ್ಳಿಯ ಗ್ರಾಮೀಣ ಪ್ರತಿಭೆ ದೇವಪ್ಪ ಅಬ್ಲಿ

ಸುರಪುರ ಸುದ್ದಿ : ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ಮಂಜಲಾಪುರಹಳ್ಳಿ ಗ್ರಾಮದ ಯುವಕ ದೇವಪ್ಪ ಅಬ್ಲಿ ಭಾರತೀಯ ಸೇನೆಗೆ ಆಯ್ಕೆಯಾಗಿ ಯುವ ಸಮುದಾಯಕ್ಕೆ ಮಾದರಿಯಾಗಿದ್ದಾನೆ.

ಎದೆಗೆ ಬಿದ್ದ ಅಕ್ಷರ ಭೂಮಿಗೆ ಬಿದ್ದ ಬೀಜ ಇಂದಲ್ಲ ನಾಳೆ ಫಲ ಕೊಡುತ್ತದೆ, ಎಂಬ ನುಡಿಯಂತೆ ಬಡತನದಲ್ಲಿ ಹುಟ್ಟಿದ್ದೇವೆ ಎಂದು ಕೈ ಕಟ್ಟಿ ಸುಮ್ಮನೆ ಕುಳಿತುಕೊಳ್ಳುವ ಬದಲು ಜೀವನದಲ್ಲಿ ಏನಾದ್ರೂ ಸಾಧಿಸಬೇಕೆಂಬ ಛಲತೊಟ್ಟು ಗುರಿಯ ಕಡೆಗೆ ಸಾಗಬೇಕು ಎಂದು ತಾಲೂಕಿನ ಮಂಜಲಾಪುರಹಳ್ಳಿಯ ಗ್ರಾಮೀಣ ಯುವಕ ತೋರಿಸಿಕೊಟ್ಟಿದ್ದಾನೆ.

ಅಗ್ನಿವೀರ 6ನೇ ಃಚಿಣಖಿನಂಬರ್ ನ ಇವರು ೦ಬಅ ಅಜಟಿಣಜಡಿ ಚಿಟಿಜ ಥಿಂಟಟಜರಜ ಐಣಥಿ–ಇಟಿಂತಿ ದಲ್ಲಿ ತಮ್ಮ ಟ್ರೈನಿಂಗ್ ಮುಗಿಸಿದ್ದಾರೆ.

ನಮ್ಮ ಹೆಮ್ಮೆಯ ಭಾರತೀಯ ಸೇನೆಗೆ ಆಯ್ಕೆಯಾಗಿ ಏಳು ತಿಂಗಳುಗಳ ಕಾಲ ತರಬೇತಿ ಮುಗಿಸಿ ಮರಳಿ ಸ್ವಗ್ರಾಮಕ್ಕೆ ತೆರಳಿದಾಗ ಗ್ರಾಮದಲ್ಲಿ ಸಂತಸದ ಜೊತೆಗೆ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ವೀರಯೋಧನನ್ನು ಅದ್ದೂರಿಯಾಗಿ ಬರಮಾಡಿಕೊಂಡ ಗ್ರಾಮಸ್ಥರು ಹುಣಸಗಿ ಪಟ್ಟಣದ ಮಹಾಂತಸ್ವಾಮಿ ವೃತ್ತದಿಂದ, ಬಸವೇಶ್ವರ ವೃತ್ತದವರೆಗೆ ಬೈಕ್ ರ್ಯಾಲಿ ಮೂಲಕ ತೆ–ರೆದ ವಾಹನದಲ್ಲಿ ಮೆರವಣಿಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ಹುಣಸಗಿಯ ಪಟ್ಟಣ ಪಂಚಾಯಿತಿ ಸದಸ್ಯರಾದ ಮಲ್ಲಣ್ಣ ಬಿರಾದಾರ, ಹಣಮೇಶ ತೋಳದಿನ್ನಿ, ಅರುಣ್ ದೊರೆ ಹುಣಸಗಿ, ಸುನಿಲ್ ಸೇರಿದಂತೆ ಇತರರು ಯೋಧ ದೇವಪ್ಪ ಅಬ್ಲಿಗೆ ಶುಭ ಹಾರೈಸಿ ಸನ್ಮಾನಿಸಿದರು.

ನಂತರ ಮಂಜಲಾಪುರ ಹಳ್ಳಿಯ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಗ್ರಾಮದ ಪ್ರಮುಖರಾದ ಪ್ರಧಾನೆಪ್ಪ ಮೇಟಿ, ಮಲ್ಲಪ್ಪ ಮೇಟಿ, ಚಂದಪ್ಪ ಬೈಚಬಾಳ, ವೆಂಕಟೇಶ್ ಬಿರಾದಾರ, ಮಲ್ಲಪ್ಪ ಸಾಲವಾಡಗಿ ಸೇರಿದಂತೆ ಇತರರು ಸೇರಿ ಯುವಕನಿಗೆ ಸನ್ಮಾಸಿದರು.

ಈ ಸಂದರ್ಭದಲ್ಲಿ ಗೆಳೆಯರ ಬಳಗ ಪಟಾಕಿ ಸಿಡಿಸಿ ವಿಜೃಂಭಿಸಿದರು.

ಯೋಧ ದೇವಪ್ಪ ಅಬ್ಲಿ ತನ್ನ ಹೆತ್ತವರಿಗೆ ಪರೇಡ್ ಡ್ರಿಲ್ ಮೂಲಕ ಸೆಲ್ಯೂಟ್ ಮಾಡಿ ಟೋಪಿಯನ್ನು ಹಾಕುವುದರ ಜೊತೆಗೆ ಕೃತಜ್ಞತೆ ಸಲ್ಲಿಸಿದನು.

ವರದಿ : ಶಿವು ರಾಠೋಡ

# ಉಪನಿರ್ದೇಶಕರ ಇಲಾಖೆ-2 ಸ್ಥಳಾಂತರ ವಿರೋಧಿಸಿ ಉಪವಾಸ ಸತ್ಯಾಗ್ರಹಕ್ಕೆ ರೈತ ಸಂಘ ಘೋಷಣೆ




ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು: ತಾಲೂಕಿನ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಅಧ್ಯಕ್ಷ ಶಿವು ಪುತ್ರಗೌಡ ಅವರ ನೇತೃತ್ವದಲ್ಲಿ ಉಪನಿರ್ದೇಶಕರ ಇಲಾಖೆ□2 ಸ್ಥಳಾಂತರದ ವಿರುದ್ಧ ನಡೆಯುತ್ತಿರುವ ಧರಣಿ ಹೋರಾಟ ಇಂದು 12ನೇ ದಿನಕ್ಕೆ ಕಾಲಿಟ್ಟಿದೆ. ಸ್ಥಳಾಂತರದಿಂದ ರೈತರಿಗೆ ಉಂಟಾಗುವ ಆಡಳಿತಾತ್ಮಕ ತೊಂದರೆಗಳನ್ನು ಉಲ್ಲೇಖಿಸಿ, ಇಲಾಖೆ ಸ್ಥಳಾಂತರವನ್ನು ತಕ್ಷಣ ರದ್ದುಗೊಳಿಸಬೇಕೆಂದು ರೈತರು ಆಗ್ರಹಿಸುತ್ತಿದ್ದಾರೆ. ಶಿವು ಪುತ್ರಗೌಡ ಅವರು, "ರೈತರ ಕೆಲಸಕಾರ್ಯ ಗಳಿಗೆ ನೇರವಾಗಿ ಸಂಪರ್ಕ ಹೊಂದಿರುವ ಪ್ರಮುಖ ಇಲಾಖೆ ಸ್ಥಳಾಂತರಗೊಳ್ಳುವುದರಿಂದ ಲಿಂಗಸುಗೂರ ತಾಲೂಕಿನ ರೈತರು ದೂರದೂರಿಗೆ ತೆರಳಿ ಸಮಯ□ಹಣ ನಷ್ಟ ಅನುಭವಿಸಬೇಕಾಗುತ್ತದೆ. ಸರ್ಕಾರ ನಮ್ಮ ಬೇಡಿಕೆಗೆ ಸ್ಪಂದಿಸದಿರುವುದು ವಿಷಾದನೀಯ," ಎಂದು ಹೇಳಿದರು. ಧರಣಿ ಸ್ಥಳದಲ್ಲಿ ದಿನವಿಡೀ ರೈತರು, ಸಂಘದ ಹೋರಾಟಗಾರರು, ಮಹಿಳಾ ರೈತರು ಪ್ರತಿಭಟನೆ ನಡೆಸಿದರು. ಸರ್ಕಾರದ ನಿರ್ಲಕ್ಷ್ಯತೆಯನ್ನು ಖಂಡಿಸಿ ಘೋಷಣೆ ಕೂಗಲಾಯಿತು. ಶಿವುಪುತ್ರಗೌಡ ಮುಂದುವರಿಸಿ, "ಸರ್ಕಾರ ಯಾವುದೇ ತೀರ್ಮಾನಕ್ಕೆ ಬರದಿದ್ದರೆ ಹೋರಾಟ ಹಿಂಪಡೆಯುವುದಿಲ್ಲ. ನಾಳೆಯಿಂದ ಉಪವಾಸ ಸತ್ಯಾಗ್ರಹ ಆರಂಭಿಸುತ್ತೇವೆ. ಇದು ರೈತರ ಹಕ್ಕಿಗಾಗಿ ನಡೆಯುತ್ತಿರುವ ಹೋರಾಟ, ಹಿಂಜರಿಯುವ ಪ್ರಶ್ನೆಯೇ ಇಲ್ಲ," ಎಂದು ಸ್ಪಷ್ಟಪಡಿಸಿದರು. ರೈತ ನಾಯಕರು, ಸಂಘದ ಹಲವು ಘಟಕಗಳ ಪದಾಧಿಕಾರಿಗಳು ಮತ್ತು ಯುವ ಹೋರಾಟಗಾರರು ಧರಣಿಗೆ ಬೆಂಬಲ ವ್ಯಕ್ತಪಡಿಸಿದ್ದಾರೆ. ರೈತರ ಬೇಡಿಕೆಗೆ ತಕ್ಷಣ ಸ್ಪಂದಿಸಿ ಇಲಾಖೆ ಸ್ಥಳಾಂತರ ಆದೇಶವನ್ನು ರದ್ದುಪಡಿಸಬೇಕು ಎಂಬುದು ಪ್ರತಿಭಟನೆಕಾರರ ಒತ್ತಾಯವಾಗಿದೆ ಈ ಸಂದರ್ಭದಲ್ಲಿ ಅನಂದ ಕುಂಬಾರ ವಿಜಯ್ ಕುಮಾರ್ ಪೋಳ್ ಬಸವರಾಜ್ ಸೇರಿದಂತೆ ಇತರರು ಇದ್ದರು

# ಡಾ.ಭೀಮ್ ರಾವ್ ಅಂಬೇಡ್ಕರ್ ಮಹಾಪರಿನಿರ್ವಾಣ ದಿನ ಭಾವಚಿತ್ರಕ್ಕೆ ಪುಷ್ಪಾ ನಮನ

ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು: ಭಾರತದ ಸಂವಿಧಾನಶಿಲ್ಪಿ ನ್ಯಾಯ ಶಾಸ್ತ್ರಜ್ಞರಾಗಿ, ಭಾರತರತ್ನ ಡಾ.ಭೀಮ್ ರಾವ್ ಅಂಬೇ ಡ್ಕರ್ ಮಹಾಪರಿನಿರ್ವಾಣ ದಿನ ಅಂಗವಾಗಿ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾ ನಮನ ಸಲ್ಲಿಸಲಾಯಿತು. ನಂತರ

ಅಮ್ಮದ್ ಶೇರ್ ಮಾತನಾಡಿ ಬಾಬಾ ಸಾಹೇಬ್ ರವರು ಅರ್ಥಶಾಸ್ತ್ರಜ್ಞರಾಗಿ ಸಮಾಜ ಸುಧಾರಕರಾಗಿ, ಮಹಿಳೆಯರು, ದಲಿತರು, ಅಲ್ಪಸಂಖ್ಯಾತರು ಸೇರಿದಂತೆ, ಅಸ್ಪೃಶ್ಯತೆ, ಅಸಮಾನತೆಯ ವಿರುದ್ಧ ದಿಟ್ಟತನದಿಂದ ಹೋರಾಡಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಸಿಗುವಂತೆ ಮಾಡಿದ ಮಹಾನ್ ಮಾನವತಾವಾದಿ. ಅಂಬೇಡ್ಕರ್ ಅವರ ಹೋರಾಟದ ಫಲವಾಗಿ ಇಂದು ದೇಶಾದ್ಯಂತ ಕೋಟ್ಯಂತರ ಮಂದಿ ನೆಮ್ಮದಿಯ ನಿಟ್ಟುಸಿರು ಬಿಡುತ್ತಿದ್ದಾರೆ ಎಂದರು.



ಈ ಸಂದರ್ಭದಲ್ಲಿ ಪ್ರಭುಲಿಂಗ ಪ್ರಭು ಹವಾಲ್ದಾರು, ಅಕ್ರಂಪಾಷಾ ಮೇಗಳಮನಿ, ಮೋಹನ್ ಗೋಸೆ, ಸೇರಿ ಇತರರು ಇದ್ದರು.

# ಡಿ.12 ರಂದು ಪಿಂಚಣಿ ಅದಾಲತ್‌ಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :

ಯಾದಗಿರಿ ಅಂಚೆ ಇಲಾಖೆಯಲ್ಲಿ ಯಾದಗಿರಿ ವಿಭಾಗ ಮಟ್ಟದ ಪಿಂಚಣಿ ಅದಾಲತ್ 2025ರ ಡಿಸೆಂಬರ್ 12 ರಂದು ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಅಂಚೆ ಅಧೀಕ್ಷಕರು ಅವರು ತಿಳಿಸಿದ್ದಾರೆ. ಅದಾಲತ್‌ನ ಕುಂದುಕೊರತೆಗಳನ್ನು ಸಾಮಾನ್ಯ ಅಂಚೆ, ಸ್ಪೀಡ್ ಪೋಸ್ಟ್ ಮೂಲಕ ಕಳಿಸಬಹುದು, ಅಂಚೆ ಲಕೋಟೆ ಮೇಲೆ ಪಿಂಚಣಿ ಅದಾಲತ್–2025 ಎಂದು ಬರೆದು 2025ರ ಡಿಸೆಂಬರ್ 9ರ ಒಳಗೆ ಸಲ್ಲಿಸಬೇಕು. ಅಂಚೆ ಸೇವೆಯಿಂದ ನಿವೃತ್ತರಾದ ನೌಕರರ ಪಿಂಚಣಿ ಸೌಲಭ್ಯಗಳ ಹಾಗೂ ಕುಟುಂಬ ಪಿಂಚಣಿ ಸೌಲಭ್ಯಗಳ ವಿಳಂಬ, ಇತ್ಯರ್ಥಕ್ಕೆ ಸಂಬಂಧಿಸಿದ ಕುಂದುಕೊರತೆಗಳು, ಗ್ರಾಮೀಣ ಅಂಚೆ ಸೇವಕರನ್ನು ಹೊರತು ಪಡಿಸಿ, ಅಂಚೆ ಇಲಾಖೆಯ ನಿವೃತ್ತ ನೌಕರರ ಪಿಂಚಣಿ ಸ್ವೀಕರಿಸುವಲ್ಲಿನ ಅಹವಾಲುಗಳನ್ನು ಇಲಾಖೆ ಆಲಿಸಲಿದೆ. ಈಗಾಗಲೇ ವಿಭಾಗಗಳು ಕೈಗೆತ್ತಿಕೊಂಡಿರುವ ಪ್ರಕರಣಗಳು ಮತ್ತು ಪಿಂಚಣಿದಾರರು ವಿಭಾಗೀಯ ಮಟ್ಟದಿಂದ ಬಂದ ಪ್ರತಿಕ್ರಿಯೆಯಿಂದ ತೃಪ್ತರಾಗದ ಪ್ರಕರಣಗಳನ್ನು ಮಾತ್ರ ಪಿಂಚಣಿ ಅದಾಲತ್‌ಗೆ ತರಬಹುದು, ಪಿಂಚಣಿ ಅದಾಲತ್‌ಗೆ ನೇರವಾಗಿ ಕಳುಹಿಸಲಾದ ಹೊಸ ಪ್ರಕರಣಗಳನ್ನು ಅಹವಾಲಿಸಲು ಅವಕಾಶವಿರುವುದಿಲ್ಲ. ಅವವಾಲುಗಳು, ಕುಂದುಕೊರತೆಗಳನ್ನು ಅಂಚೆ ಅಧೀಕ್ಷಕರು, ಯಾದಗಿರಿ ವಿಭಾಗ ಯಾದಗಿರಿ 585 201 ಇಲ್ಲಿಗೆ ಕಳಿಸಬೇಕು, ಪಿಂಚಣಿದಾರರು ತಮ್ಮ ಸ್ವಂತ ವೆಚ್ಚದೊಂದಿಗೆ 2025ರ ಡಿಸೆಂಬರ್ 12 ರಂದು ಬೆಳಿಗ್ಗೆ 11 ಗಂಟೆಗೆ ಅಂಬೇಡ್ಕರ್ ಚೌಕ್ ಹತ್ತಿರ, ಬಿ.ಎಸ್.ಎನ್.ಎಲ್ ಕಛೇರಿ ಹಿಂದುಗಡೆ, ಅಂಚೆ ಅಧೀಕ್ಷಕರ ಕಛೇರಿ, ಯಾದಗಿರಿ ವಿಭಾಗ, ಯಾದಗಿರಿ –585 201ಗೆ ಪಿಂಚಣಿ ಅದಾಲತ್‌ಗೆ ಹಾಜರಾಗುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ ಉಂಟಾಗಲಿದೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ: ಕೊಂಕಲ್‌ನ 110ಕೆವಿ ಸ್ಟೇಷನ್‌ನಲ್ಲಿ 3ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಹಿನ್ನೆಲೆ 2025ರ ಡಿಸೆಂಬರ್ 8ರ ಸೋಮವಾರ ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಗುರುಮಠಕಲ್ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನೆ ಉಪ ವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ಎ.ಟಿ ರಾಠೋಡ ಅವರು ತಿಳಿಸಿದ್ದಾರೆ. 110ಕೆವಿ ಕೊಂಕಲ್ ವಿದ್ಯುತ್ ಉಪಕೇಂದ್ರ, 110ಕೆವಿ ಎಲ್.ಐ.ಎಸ್ ಕೆಬಿಜೆಎನ್‌ಎಲ್ ಚಿನ್ನಾಕಾರ, ಮೇ.ಮ್ಯಾಟ್ರಿಕ್ಸ್ ಸನ್‌ಪವರ ಕೊಂಕಲ್ ಹಾಗೂ 33ಕೆವಿ ಜೈಗ್ರಾಮ ವಿದ್ಯುತ್ ಉಪಕೇಂದ್ರಗಳಿಗೆ ವಿದ್ಯುತ್ ಸರಬರಾಜು ನಿಲುಗಡೆ ಮಾಡಲಾಗುವುದು. ಈ 110ಕೆವಿ ಮತ್ತು 33ಕೆವಿ ವಿದ್ಯುತ್ ಉಪಕೇಂದ್ರಗಳಿಂದ ವಿದ್ಯುತ್ ಸರಬರಾಜು ಮಾಡುವ ಎಲ್ಲಾ 11ಕೆವಿ ಮಾರ್ಗಗಳಿಂದ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಕೊಂಕಲ್, ಕಂದಕೂರ, ಜೈಗ್ರಾಮ ಹಾಗೂ ಸುತ್ತಮುತ್ತಿಲಿನ ಗ್ರಾಮಗಳಿಗೆ, ತಾಂಡಗಳಿಗೆ ಮತ್ತು ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ, ಗ್ರಾಹಕರು ಜೆಸ್ಕಾಂಗೆ ಸಹಕರಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರವಾರದ ನಗೆ ಜಾತ್ರೆಯಲ್ಲಿ ವಿಜೃಂಭಿಸಿದ ರೂಪಕಗಳು



ಮಲ್ಲಮ್ಮ ನುಡಿ ವಾರ್ತೆ ಕಾರವಾರ :

ತಾಲೂಕಿನ ಕುಗ್ರಾಮವಾದ ನಗೆ ಇದು ಹಿಂದುಳಿದ ಗ್ರಾಮವಾಗಿದ್ದು, ಇಲ್ಲಿ ಹಾಲಕ್ಕಿ ಸಮಾಜದ ಬಾಂಧವರು ಅನ್ಯೋನ್ಯವಾಗಿ ಜೀವನವನ್ನು ಸಾಗಿಸುತ್ತಿರುವುದು ಈ ಮಧ್ಯೆ ಪ್ರತಿವರ್ಷದಂತೆ ಗ್ರಾಮ ದೇವರಾದ ಶ್ರೀ ಉದ್ಭವಲಿಂಗ ಜಾತ್ರಾ ಮಹೋತ್ಸವ ಅತ್ಯಂತ ಸಡಗರ ಹಾಗೂ ಸಂಭ್ರಮದಿಂದ ಜರುಗಿತು. ಈ ಜಾತ್ರಾ ಮಹೋತ್ಸವದಲ್ಲಿ ಉದ್ಭವಲಿಂಗ ದೇವರ ಪಲ್ಲಕ್ಕಿಯು ಗ್ರಾಮದ ಮೋಕ್ತೆಸರರು ಹಾಗೂ ಗುನಗರು ಮತ್ತು ಎಲ್ಲ ದೇವರ ಕೆಲಸ ಮಾಡುವ ಹಿರಿಯರು ಕೂಡಿ ಗ್ರಾಮದ ತುಂಬ ಸಾಗುವುದು ಬಹಳ ಆನಂದಕರವಾಗಿ ಕಾಣುತ್ತದೆ.

ಇಲ್ಲಿಯ ಗ್ರಾಮಸ್ಥರು ಊರಿನ ಎಲ್ಲ ಮಜರೆಗಳಿಂದ ಪ್ರತ್ಯೇಕ ರೂಪಕಗಳನ್ನು ಮಾಡಿ ದೇವಸ್ಥಾನದ ಎದುರುಗಡೆ ದೇವರ ಪಲ್ಲಕ್ಕಿ ಬಂದು ವಿಜೃಂಭಿಸಿ ಕುಳಿತಾಗ ತಮ್ಮ ತಮ್ಮ ಕೈಯಾರೆ ತಯಾರಿಸಿದ ವಿವಿಧ ರೂಪಕಗಳನ್ನು ತಮ್ಮ ಹೆಗಲಮೇಲೆ ಹೊತ್ತು ದೇವರ ಪಲ್ಲಕ್ಕಿಯ ಎದುರುಗಡೆಯಲ್ಲಿ ಸಾಗುತ್ತಾರೆ. ಇವರಿಗೆ ಯಾವುದೇ ನುರಿತ ಚಿತ್ರಕಾರರನ್ನು ಮತ್ತು ಅಲಂಕಾರ ಮಾಡುವವರನ್ನು ಬಳಸದೇ ಊರಿನ ಜನರು ಹಾಗೂ ಯುವಕರು ಬಗೆ ಬಗೆಯ ಚಿತ್ರಣಗಳನ್ನು ತಯಾರಿಸಿ ಹೊತ್ತು ತರುತ್ತಾರೆ. ಊರ ಮಹಿಳೆಯರಿಗೂ ತಮ್ಮ ಮಕ್ಕಳು ಮತ್ತು ತಮ್ಮ ಯಜಮಾನರು ಯಾವ ರೂಪಕಗಳನ್ನು ತಯಾರಿಸಿದ್ದಾರೆ ಎಂದು ತಿಳಿದಿರುವುದಿಲ್ಲ ಅಷ್ಟು ಗೌಪ್ಯತೆಯನ್ನು ಕಾಪಾಡಿಕೊಂಡಿರುತ್ತಾರೆ. ಗ್ರಾಮದ ವಿಜಯೇಂದ್ರ ರಮೇಶ ಗೌಡ ಮತ್ತು ಸಂಗಡಿಗರು ಬೆಳ್ಳಕ್ಕಿಯನ್ನು ಮಾಡಿದ್ದರೆ ಕೋಳಿಮಂಕೆಯವರು ನವೀನ, ರಾಘವೇಂದ್ರ, ಸುಮಂತ, ಬಾಲಚಂದ್ರ, ದಿನೇಶ, ಗಣಪತಿ, ರವಿದಾ, ಜೇನುನೊಣ ನರಸಿಂಹ ಅವತಾರ, ಬಾಡಿಗಾರ್ಡ್ ಹಾಗೂ ಕಾಡುಮನುಷ್ಯ ರೂಪಕಗಳನ್ನು ಮತ್ತು ಸಂತೆಗದ್ದೆಯವರು ಲೇಡಿ (ಹುಡುಗಿ) ಯ ರೂಪಕವನ್ನು ಮಾಡಿದ್ದರು. ಗಾಂವಕಾರ ವಾಡದ ಸಿಂಹರೂಪಕದಲ್ಲಿ ಸೌರಭ ದಿನೇಶ, ವಿನೋದ ಚಂದ್ರಕಾಂತ ಮತ್ತು ಗಾಂವಕಾರ ಮನೆಯವರು ಇವರುಗಳ ತಂಡ ಒಂದು ರೂಪಕವನ್ನು ಬರ್ಗಲ್ ಬೈಲ್‌ನ ಗೌರೀಶ ಉಮೇಶ ಕೃಷ್ಣ ಥಾಕು ಕೋಮಾರ ಇವರುಗಳು ಒಂದು ರೂಪಕವನ್ನು ತಯಾರಿಸಿದ್ದರು. ಸಂತೆಗದ್ದೆಯ ಸಂದೀಪ, ಸುಧೀರ, ಗೌರೀಶ ಇವರುಗಳ ಚಿಕ್ಕಮಕ್ಕಳ ತಂಡ ಒಂದು ರೂಪಕ ಮಾಡಿದ್ದರೆ. ಗುಳೆ ಹೊಂಡದ ದುರ್ಗಾದಾಸ ಸಂಜಯ ತಂಡ ಇನ್ನೊಂದು ರೂಪಕವನ್ನು, ಮುರಗಲ ಹೊಂಡದ ವಿರೇಂದ್ರ ಇವರುಗಳು ಅತ್ಯುತ್ತಮ ಶೈಲಿಯಲ್ಲಿ ವಿವಿಧ ಭಂಗಗಳಲ್ಲಿ ಕಲಾಕೃತಿಗಳನ್ನು ಮತ್ತು ಬೊಂಬೆಗಳನ್ನು ತಯಾರಿಸಿ ಬಣ್ಣಗಳನ್ನು ತುಂಬಿ ಹೆಗಲಮೇಲೆ ಹೊತ್ತುತಂದು ಪ್ರದರ್ಶಿಸಿದ್ದು ಸಾವಿರಾರು ಜನರ ಪ್ರೇಪಕ್ಷಕರು ಕಣ್ತುಂಬಿಕೊಂಡು ಆನಂದದಿಂದ ಆ ಚಿತ್ರಣಗಳ ಮೇಲೆ ನಿಂತು ತಮ್ಮ ಫೋಟೋ ಕ್ಲಿಕ್ಕಿಸಿಕೊಂಡು ಆನಂದಿಸಿದರು. ಊರಜನರಲ್ಲಿ ಕಲೆಗೆ ಇರುವ ಅಭಿಮಾನ ಮತ್ತು ಪ್ರದರ್ಶನದ ಗಾಢ್ಯತೆ ಎತ್ತಿ ತೋರಿಸುತ್ತದೆ. ಇದೊಂದು ಅಪರೂಪದಲ್ಲಿ ಅಪರೂಪ ಜಾತ್ರೆ ಆಗಿ ಕಣ್ಮನ ಸೆಳೆದಿದೆ.

# ಒಳಮೀಸಲಾತಿ ಜಾರಿಗೆ ವಿರೋಧವಿಲ್ಲ-ಮಹೇಂದ್ರಕುಮಾರ




**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:** ಒಳಮೀಸಲಾತಿ ಜಾರಿಯಲ್ಲಿ ನನ್ನ ವಿರೋಧವಿಲ್ಲ ಆದರೆ ಸಂವಿಧಾನ ಬದ್ಧವಾಗಿ ಒಳಮೀಸಲಾತಿ ಜಾರಿ ಆಗಬೇಕು ಎಂದು ಡಾ. ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟ ರಾಜ್ಯಾಧ್ಯಕ್ಷರಾದ ಮಹೇಂದ್ರಕುಮಾರ ಮಿತ್ರ ಅವರು ಹೇಳಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಮಾದಿಗ ಸಮುದಾಯದ ಕೆಲ ಜನರು ಒಳಮೀಸಲಾತಿ ಜಾರಿಗೆ ತಕರಾರು ಮಾಡುತ್ತಿದ್ದಾರೆ ಎಂದು ನನ್ನ ವಿರುದ್ಧ ಸಾಮಾಜಿಕ ಜಾಲತಾಣ ವಿಡಿಯೋ ವೈರಲ್ ಹರಿಬಿಟ್ಟಿದ್ದು, ಅಪಪ್ರಚಾರ ಮಾಡುತ್ತಿದ್ದಾರೆ. ಒಳಮೀಸಲಾತಿ ವಿರೋಧವಿಲ್ಲ

ಆದರೆ ಸಂವಿಧಾನ ಬದ್ದವಾಗಿ ನ್ಯಾಯ ಕೇಳುವುದು ತಪ್ಪೇ? ಎಂದು ಪ್ರಶ್ನೆಸಿದರು. ಇಂದಿರಾ ಸಹಾನಿ ಪ್ರಕರಣದಲ್ಲಿ ಸರ್ವೋಚ್ಚ ನ್ಯಾಯಾಲಯವು ನೀಡಿದ ತೀರ್ಪಿನ ಪ್ರಕಾರ ರಾಜ್ಯದಲ್ಲಿ ಮೀಸಲಾತಿಯ ಪ್ರಮಾಣ 56 ರಿಂದ 50 ಕ್ಕೆ ಇಳಿಕೆ ಆಗಬೇಕು ಎಂದರು

2024 ರಲ್ಲಿ ದೇಶದ ಸರ್ವೋಚ್ಚ ನ್ಯಾಯಾಲಯವು ಸ್ಟೇಟ್ ಆಫ್ ಪಂಜಾಬ್ ವರ್ಸಸ್ ವಿರುದ್ಧ ದಾವೇಂದ್ರಸಿಂಗ್ ಪ್ರಕರಣದಲ್ಲಿ ನೀಡಿದ ತೀರ್ಪಿನ ಪ್ರಕಾರ ಪರಿಶಿಷ್ಟ ಜಾತಿಯವರಲ್ಲಿ ವರ್ಗೀಕರಣ ಮತ್ತು ಕೆನೆ ಪದರವನ್ನು ಜಾರಿ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಈ ಹಿಂದೆ ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಯವರಲ್ಲಿ ವರ್ಗೀಕರಣ ಮಾಡುವ ಸಂದರ್ಭದಲ್ಲಿ 3 ಗುಂಪುಗಳನ್ನಾಗಿ ಮಾಡಿತ್ತು ಇದು ಕಾನೂನಿನ ಪ್ರಕಾರ ತಪ್ಪು, ಪರಿಶಿಷ್ಟ ಜಾತಿಯವರಲ್ಲಿ ಕೇವಲ 02 ಗುಂಪು ಮಾಡಬೇಕು, ಅದರಲ್ಲಿ ಮಾದಿಗ ಮತ್ತು ಅದರ ಸಂಬಂಧಿತ ಉಪ ಜಾತಿಗಳ ಗುಂಪು (2) ಹೊಲೆಯ ಮತ್ತು ಸಂಬಂಧಿತ ಉಪ ಜಾತಿಗಳ ಗುಂಪು ತಲಾ ಒಂದು ಗುಂಪಿಗೆ ಶೇ. 7.5% ರಂತೆ ಹಂಚಿಕೆ ಮಾಡಬೇಕು. ಕರ್ನಾಟಕ ರಾಜ್ಯ ಸರಕಾರವು ಈ ಹಿಂದೆ ಮಾಡಿದ ವರ್ಗೀಕರಣದಲ್ಲಿ ಪ್ರವರ್ಗ 'ಸಿ' ರಲ್ಲಿ ಮಾದಿಗ ಮತ್ತು ಹೊಲೆಯ ಸಂಬಂಧಿತ ಉಪ ಜಾತಿಗಳನ್ನು ಅಲೆಮಾರಿಗಳ ಜೊತೆಗೆ ಸೇರಿಸಿದ್ದಾರೆ, ಅಲ್ಲಿಂದ ಅವರನ್ನು ತೆಗೆದು ಮೇಲಿನ ಎರಡು ಗುಂಪುಗಳಿಗೆ ಸೇರಿಸಬೇಕು. ಮೀಸಲಾತಿ ಅನುಗುಣವಾಗಿ ರಾಜ್ಯದಲ್ಲಿ ಹುದ್ದೆಗೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಸಂವಿಧಾನದ ಅನುಚ್ಛೇಧ 341 (1) ಮತ್ತು 366 (24) ರ ಪ್ರಕಾರ ಪರಿಶಿಷ್ಟ ಜಾತಿಯವರೆಂದರೆ ಅಸ್ಪೃಶ್ಯತೆ ಕಳಂಕದಿಂದ ಒಳಪಟ್ಟಿರಬೇಕು ಮತ್ತು ಹಿಂದೂ ಧರ್ಮವನ್ನು ಪಾಲನೆ ಮಾಡಬೇಕು. ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿಯವರು ಹಿಂದೂ ಧರ್ಮವನ್ನು ಹೊರತುಪಡಿಸಿ ಬೌದ್ಧ ಧರ್ಮ, ಕ್ರೈಸ್ತ ಧರ್ಮ ಮತ್ತು ಬೇರೆ ಯಾವುದೇ ಧರ್ಮವನ್ನು ಮಾಡಿದದಲ್ಲಿ ಅವರ ಜಾತಿ ಪ್ರಮಾಣ ಪತ್ರವನ್ನು ಸರಕಾರ ರದ್ದುಮಾಡಬೇಕು. ಅದೇ ರೀತಿ ಅವರನ್ನು ಮೀಸಲಾತಿಯಿಂದ ಹೊರ ಇಡಬೇಕು ಎಂದು ಆಗ್ರಹಿಸಿದರು.

# ಪಿಡಿಓ ಮೇಲೆ ಹಲ್ಲೆಗೈದವರಿಗೆ ಶಿಕ್ಷೆಯಾಗಲಿ

**ಮಲ್ಲಮ್ಮ ನುಡಿ ವಾರ್ತೆ ಮಸ್ಕಿ:** ದೇವದುರ್ಗ ತಾಲೂಕಿನ ಕ್ಯಾದಿಗೇರಾ ಪಿಡಿಓ ಮೇಲೆ ಹಲ್ಲೆಮಾಡಿದ ಆರೋಪಿಗಳನ್ನು ಬಂಧಿಸಿ ಕಠಿಣ ಕ್ರಮ ಕೆಗೊಳ್ಳುವಂತೆ ಒತ್ತಾಯಿಸಿ ಶನಿವಾರ ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಗಳು ( ಬಿ ಗ್ರೇಡ ಉನ್ನತೀಕರಣ) ಸಂಘದ ಮಸ್ಕಿ ತಾಲೂಕು ವತಿಯಿಂದ ತಾ ಪಂ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು. ನಂತರ ಗ್ರಾಮ ಪಂಚಾಯಿತಿ ಪಿ ಡಿ ಓ ವಿಶ್ವನಾಥ ಮಾತನಾಡಿ, ಕರ್ನಾಟಕದಲ್ಲಿ ಪಿ ಡಿ ಓ ಮೇಲೆ ಹಲ್ಲೆಪ್ರಕರಣಗಳು ಹೆಚ್ಚುತ್ತಿದ್ದು, ಅಧಿಕಾರಿಗಳು ಆತ್ಮಸ್ಥೆರ್ಯ ಕಳೆದುಕೊಂಡು ಆತಂಕದಲ್ಲಿಯೇ ಕೆಲಸ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜಶೇಖರ ರಾಠೋಡ್ ಎಂಬುವರು ಗ್ರಾಮ ಪಂಚಾಯಿತಿ ಅಧ್ಯಕ್ಷರ ಪತಿ ಬಿಸಿ ಊಟ ಅಡುಗೆದಾರರ ನೇಮಕಾತಿಗೆ ಸಂಬಂಧಿಸಿದಂತೆ ತಮ್ಮ ಆಪ್ತರನ್ನು ನೇಮಕ ಮಾಡಿಕೊಳ್ಳುವಂತೆ ಬೆದರಿಕೆ ಹಾಕಿ, ಪಿಡಿಓ ನಿರಾಕರಿಸಿದಾಗ ಹಲ್ಲೆ ನಡೆಸಿದ್ದಾರೆ. ದೇವದುರ್ಗ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಹಲ್ಲೆಗೊಳಗಾದ ಪಿಡಿಓ ಅವರು ದೇವದುರ್ಗ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಸರ್ಕಾರದ ಮಹತ್ವದ ಯೋಜನೆಯಾದ ಬಿಸಿ ಊಟ ಯೋಜನೆಗೆ ಸಂಬಂಧಿಸಿದ ನೇಮಕಾತಿ ಪ್ರಕ್ರಿಯೆಯಲ್ಲಿ ರಾಜಕೀಯ ಹಸ್ತಕ್ಷೇಪವನ್ನು ವಿರೋಧಿಸಿದ ಪಿಡಿಓ ಅವರ ಮೇಲೆ ದೌರ್ಜನ್ಯ ನಡೆದಿರುವುದು ತೀವ್ರ ಖಂಡನೀಯ. ಪಿಡಿಓ ಅವರ ಕರ್ತವ್ಯ ನಿರ್ವಹಣೆಗೆ ಇದು ಅತ್ಯಂತ ಅಡ್ಡಿಪಡಿಸುವ ಮತ್ತು ಭಯ ಹುಟ್ಟಿಸುವ ಘಟನೆಯಾಗಿದೆ.ಅಧಿಕಾರಿಗಳಿಗೆ ಸೂಕ್ತ ರಕ್ಷಣೆ ನೀಡಬೇಕು ಅಲ್ಲದೆ ಹಲ್ಲೆಮಾಡಿರುವ ವ್ಯಕ್ತಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಪಿಡಿಓ ವಿಶ್ವನಾಥ್, ಬಸವಲಿಂಗಪ್ಪ, ಲಕ್ಷ್ಮಣ್, ಚಂದ್ರಶೇಖರ ದಿನ್ನಿ, ಮಲ್ಲಯ್ಯ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಬೀದರ್ ನಿಂದ ಬಾಲಾಜಿ ಜಬಾಡೆ ಆಯ್ಕೆ



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:** ತೆಲಂಗಾಣ ರಾಜ್ಯದ ಹೈದರಾಬಾದ್ ನಲ್ಲಿ ನೆಲೆಸಿರುವ ಕರ್ನಾಟಕದ ರಾಜ್ಯದ ಕನಕದಾಸ ಭಕ್ತರ ಬಳಗದಿಂದ ಕನಕದಾಸರ 538ನೇ ಜಯಂತಿ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಈ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯದ ಹಾಲುಮತ ಪೂಜ್ಯರಾದ ಸರೂರಿನ ಶ್ರೀ ಶ್ರೀ ಶಾಂತಮಯಿ ಮಹಾಸ್ವಾಮಿಗಳು ದಿವ್ಯ ಸಾನಿಧ್ಯವನ್ನು ವಹಿಸಲಿದ್ದಾರೆ. ಸುರೇಶ್ ಮಹರಾಜ್ ಹಾಗೂ ರಾಜ್ಯದ ರಾಜಕೀಯ ಮುಖಂಡರು ಮತ್ತು ತೆಲಂಗಾಣ ರಾಜ್ಯದ ಎಂಎಲ್‌ಸಿ ಎಗ್ಗೆ ಮಲ್ಲೇಶಮ ಹಾಗೂ ಶಾಸಕರು ಸಮಾಜದ ಅಧ್ಯಕ್ಷರು ಸಂಘಟನೆಯ ವಿವಿಧ ಪದಾಧಿಕಾರಿಗಳು ಆಗಮಿಸಲಿದ್ದಾರೆ ಹಾಗೆ ಕರ್ನಾಟಕದಿಂದ ಅಲ್ಲಿ ನಿಲ್ಲಿಸಿರುವ ಕನಕದಾಸರ ಭಕ್ತರ ಬಳಗವು ಪ್ರತಿ ವರ್ಷವೂ ಹೈದರಾಬಾದಿನಲ್ಲಿ ಸತತ 12ನೇ ವರ್ಷದಿಂದ ಕನಕದಾಸ ಜಯಂತಿಯನ್ನು ಆಚರಿಸಿಕೊಂಡು ಬರುತ್ತಿದ್ದಾರೆ. ಆದರೆ ಪ್ರತಿವರ್ಷ ವಿಭಿನ್ನ ಸಾಂಸ್ಕೃತಿಕ ಕಾರ್ಯಕ್ರಮ, ಡೊಳ್ಳು ಕುಣಿತ ,ಕನಕದಾಸರ ಕೀರ್ತನೆಗಳು ಕನಕದಾಸರ ಭಾವಚಿತ್ರದೊಂದಿಗೆ ಮೆರವಣಿಗೆ ಹಾಗೂ ವಿಶೇಷ ಉಪನ್ಯಾಸಗಳು, ಈ ವರ್ಷ ಕರ್ನಾಟಕದಿಂದ ಮುಖ್ಯ ಅತಿಥಿಯಾಗಿ ಬೀದರ್ ನಿಂದ ಬಾಲಾಜಿ ಜಬಾಡೆ ಆಯ್ಕೆಯಾಗಿರುತ್ತಾರೆ.

# ಉತ್ತರ ಕನ್ನಡ ಜಿಲ್ಲೆಯಲ್ಲಿ ರೈಲ್ವೆ ಇಲಾಖೆಯ ರೂ.21 ಸಾವಿರ ಕೋಟಿ ಮೊತ್ತದ ಕಾಮಗಾರಿಗಳು ಪ್ರಗತಿಯಲ್ಲಿ: ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ.

**ಮಲ್ಲಮ್ಮ ನುಡಿ ವಾರ್ತೆ ಕಾರವಾರ:** ಉತ್ತರ ಕನ್ನಡ ಜಿಲ್ಲೆಯಲ್ಲಿ ರೈಲ್ವೆ ಇಲಾಖೆ ವತಿಯಿಂದ ಸುಮಾರು ರೂ. 21 ಸಾವಿರಕ್ಕೂ ಕೋಟಿ ಗೂ ಅಧಿಕ ಮೊತ್ತದ ಕಾಮಗಾರಿಗಳು ವಿವಿಧ ಹಂತದಲ್ಲಿ ನಡೆಯುತ್ತಿವೆ ಎಂದು ಕೇಂದ್ರ ರೈಲ್ವೆ ಖಾತೆಯ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.

ಅವರು ಶನಿವಾರ ಕಾರವಾರ ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ ಮಾತನಾಡಿದರು. ಮಲೆನಾಡು ಮತ್ತು ಬಯಲುಸೀಮೆಯನ್ನು ಜೋಡಿಸುವ ಉದ್ದೇಶದಿಂದ ತಾಳಗುಪ್ಪ–ಶಿರಸಿ–ಹುಬ್ಬಳಿ 158 ಕಿ.ಮೀ ಉದ್ದದ ಹೊಸ ಮಾರ್ಗವು ರೈಲ್ವೆ ಮಂಡಳಿಯಲ್ಲಿ ಅನುಮೋದನೆಯಾಗಿದ್ದು, ಸಚಿವ ಸಂಪುಟದಲ್ಲಿ ಅನುಮೋದನೆಯಾಗಬೇಕಿದೆ. ಈ ಯೋಜನೆ ಮತ್ತು ತಾಳಗುಪ್ಪ ಹೊನ್ನಾವರ ಹೊಸ ಮಾರ್ಗಕ್ಕೆ ಒಟ್ಟು ಸುಮಾರು 21 ಸಾವಿರ ಕೋಟಿ ಖರ್ಚು ಮಾಡಲಾಗುತ್ತಿದೆ. ಉತ್ತರ ಕನ್ನಡ ಜಿಲ್ಲೆಯ ಭಟ್ಕಳ, ಮುರ್ಡೇಶ್ವರ, ಗೋಕರ್ಣ ಮತ್ತು ಹೊನ್ನಾವರ ರೈಲ್ವೆ ನಿಲ್ದಾಣಗಳ ಆಧುನೀಕರಣ ಕಾಮಗಾರಿ ಪ್ರಾರಂಭವಾಗಿದೆ ಎಂದರು. ಉತ್ತರ ಕನ್ನಡ ಜಿಲ್ಲೆಯಲ್ಲಿ ಹುಬ್ಬಳ್ಳಿ–ಅಂಕೋಲಾ ನಡುವಿನ 164 ಕಿ.ಮೀ ಉದ್ದದ ನೂತನ ಯೋಜನೆಯನ್ನು 16,500 ಕೋಟಿ ವೆಚ್ಚದಲ್ಲಿ ರೈಲ್ವೆ ಇಲಾಖೆ ವತಿಯಿಂದ ಮಾಡಲಾಗುತ್ತಿದೆ. ಈಗಾಗಲೇ ಸರ್ವೆ, ಡಿಪಿಆರ್, ಫಾರೆಸಟ್ ಕ್ಲಿಯರೆನ್ಸ್ ಕೂಡ ಮುಕ್ತಾಯಗೊಂಡಿದ್ದು, ವನ್ಯಜೀವಿ ಕ್ಲಿಯರೆನ್ಸ್ ಬಾಕಿ ಇದೆ. ಇನ್ನು 5–6 ತಿಂಗಳಿನೊಳಗೆ ಇದ–ಕ್ಕೆ ಪರಿಹಾರ ಸಿಗುವ ನಿರೀಕ್ಷೆ ಇದೆ. ಈ ಯೋಜನೆಯಿಂದ ಪಶ್ಚಿಮ ಘಟ್ಟಗಳಿಗೆ ಯಾವುದೇ ರೀತಿಯಲ್ಲಿ ಅನಾನುಕುಲವಾಗುವುದಿಲ್ಲ ಎಂದ ಅವರು, ಸುಮಾರು 1997–98 ರಲ್ಲಿ ಆರಂಭಿಸಿದ ಹುಬ್ಬಳ್ಳಿ–ಅಂಕೋಲಾ ರೈಲ್ವೆ ಯೋಜನೆ ಕಲ್ಲಘಟಗಿವರೆಗೆ ಮಾಡಲಾಗಿದ್ದು, ಕೆಲವು ಕಾರಣಗಳಿಂದ ನಿಂತುಹೋಗಿದ್ದು, ಈ ಯೋಜನೆಗೆ 2530 ಎಕರೆ ಜಾಗ ಬೇಕಿದೆ ಎಂದರು.




ಕೊಂಕಣ ರೈಲ್ವೆಯ ವಿಲೀನ ಪ್ರಕ್ರಿಯೆ ಚರ್ಚೆಯ ಹಂತದಲ್ಲಿದ್ದು, ಅವುಗಳ ಆಗುಹೋಗಗಳ ಬಗ್ಗೆ ಚರ್ಚಿಸಲಾಗುತ್ತಿದೆ. ರೈಲ್ವೆಯ ಬಹುತೇಕ ರೈಲು ನಿಲ್ದಾಣಗಳು ಆಧುನೀಕರಣಗೊಳ್ಳುತ್ತಿದ್ದು, ಕೊಂಕಣ ರೈಲ್ವೆ ನಿಲ್ದಾಣಗಳನ್ನು ಆಧುನೀಕರಣ ಮಾಡಲು ಕ್ರಮಕೈಗೊಳ್ಳಲಾಗಿದೆ. ದಾಂಡೇಲಿಯ ಅಂಬೇವಾಡಿಗೆ ಮುಂದಿನ ತಿಂಗಳಿನಿಂದ ರೈಲ್ವೆ ಸಂಚಾರ ಪ್ರಾರಂಭಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಪ್ರಾದೇಶಿಕ ರೈಲ್ವೆ ಮೆನೇಜರ್ ಆಶಾ ಶೆಟ್ಟಿ, ಮುಖ್ಯ ಇಂಜಿನಿಯರ್ ಪ್ರಕಾಶ್, ಹಿರಿಯ ಪ್ರಾದೇಶಿಕ ಸಂಚಾರ ವ್ಯವಸ್ಥಾಪಕ ದಿಲೀಪ್ ಡಿ ಭಟ್, ಹಿರಿಯ ಇಂಜಿನಿಯರ್ ಉದಯ ಭಾಸ್ಕರ್, ,ಮುಖ್ಯ ಇಂಜಿನಿಯರ್ ವಿಜಯ್ ಕುಮಾರ್, ಸಾರ್ವಜನಿಕ ಸಂಪರ್ಕಾಧಿಕಾರಿ ಸುಧಾ ಕೃಷ್ಣಮೂರ್ತಿ, ಹಿರಿಯ ಪ್ರಾದೇಶಿಕ ಆರ್ಥಿಕ ಸಲಹೆಗಾರ ಪ್ರದೀಪ್ ಬಾಳಿಗ ಮತ್ತಿತರರು ಇದ್ದರು.

ಚಿತ್ರ ಶಿರ್ಷಿಕೆ: ಕೇಂದ್ರ ರೈಲ್ವೆ ಖಾತೆ–ಯ ರಾಜ್ಯ ಸಚಿವ ವಿ. ಸೋಮಣ್ಣ ಅವರು ಶನಿವಾರ ಕಾರವಾರ ರೈಲ್ವೆ ನಿಲ್ದಾಣದಿಂದ ಮಡಗಾಂವ್ ವರೆಗೆ ರೈಲ್ವೆ ಕಾಮಗಾರಿಗಳ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ರೈಲ್ವೆ ಇಲಾಖೆಯ ಹಾಗೂ ಕೊಂಕಣ ರೈಲ್ವೆಯ ಹಿರಿಯ ಅಧಿಕಾರಿಗಳು ಇದ್ದರು.

# ಮಾದಾರ ಚೆನ್ನಯ್ಯನವರ ಜಯಂತಿ




**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:** ಶರಣರು ಸಮಾನತೆ ಹರಿಕಾರರಾಗಿ ಸಮಾಜದಲ್ಲಿ ವಚನಗಳ ಮೂಲಕ ಮೂಢನಂಬಿಕೆಗಳನ್ನು, ಅಂಧಕಾರವನ್ನು ಹೊಡೆದೋಡಿಸಲು ಪ್ರಯತ್ನಿಸಿದರು ಎಂದು ಪೂಜ್ಯ ಗುರುಬಸವ ಪಟ್ಟದ್ದೇವರು ಅಭಿಪ್ರಾಯಪಟ್ಟರು.

ಹಿರೇಮಠ ಸಂಸ್ಥಾನದಲ್ಲಿ ಪರಮಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರ ದಿವ್ಯಸಾನಿಧ್ಯದಲ್ಲಿ ಶರಣ ಮಾದಾರ ಚೆನ್ನಯ್ಯ ಜಯಂತಿ ಹಾಗೂ 493 ನೆಯ ಮಾಸಿಕ ಶಿವಾನುಭವಗೋಷ್ಠಿ ಸಾನಿಧ್ಯವಹಿಸಿ, ಮಾದಾರ ಚೆನ್ನಯ್ಯನವರು 12ನೇ ಶತಮಾನದ ಬಸವಣ್ಣನವರ ಸಮಕಾಲಿನ ಹಿರಿಯ ಶರಣರಾಗಿದ್ದರು. ಬಸವಣ್ಣನವರು ತಮ್ಮ ಅನೇಕ ವಚನಗಳಲ್ಲಿ ಚೆನ್ನಯ್ಯನವರನ್ನು ಅಪ್ಪ, ಬೊಪ್ಪ ಎಂದು ಸ್ಮರಿಸಿದ್ದಾರೆ. ಅಷ್ಟೇ ಅಲ್ಲದೆ ಗೋತ್ರನಾಮ ಕುಲಕ್ಕೆ ತಿಲಕ ಮಾದಾರ ಚೆನ್ನಯ್ಯ ಎಂದು ಅಭಿಮಾನದಿಂದ ಹೇಳಿದ್ದಾರೆ. ಮಾದಾರ ಚೆನ್ನಯ್ಯನವರು ಹಿರಿಯರಿದ್ದರು, ಬಸವಣ್ಣನವರನ್ನು ಗೌರವಿಸುತ್ತಿದ್ದರು. ಬಸವಕ್ರಾಂತಿಯಿಂದಲೇ ನಮಗೆ ಸ್ವಾತಂತ್ರ ಮತ್ತು ಸಮಾನತೆ ದೊರೆತಿದೆ ಎಂದು ಅವರು ನಂಬಿದರು. 12ನೇ ಶತಮಾನದಲ್ಲಿ ತುಳಿತಕ್ಕೊಳಾದ ಅನೇಕ ಸಮುದಾಯದ ಶರಣರಿಗೆ ಅನುಭವಮಂಟಪದಲ್ಲಿ ಪ್ರವೇಶ ನೀಡಿ ಸಮಾನತೆಯ ನೀಡಿದವರು ವಿಶ್ವಗುರು ಬಸವಣ್ಣನವರು. ಬಸವಣ್ಣನವರ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ.

ಅವುಗಳನ್ನು ಆಚರಣೆಯಲ್ಲಿ ತರುವ ಮೂಲಕ ನಾವು ಸಮಾನತೆಯ ಸಮಾಜ ನಿರ್ಮಾಣ ಮಾಡಬೇಕೆಂದು ಪೂಜ್ಯರು ಆಶೀರ್ವಚನ ನೀಡಿದರು.

ರಾಜಕುಮಾರ ಡಾವರಗಾಂವೆ ಅಧ್ಯಕ್ಷತೆವಹಿಸಿಕೊಂಡಿದ್ದರು. ಶಿವಾನಂದ ಕಡ್ಯಾಳೆ ಅವರು ತಮ್ಮ ಅನುಭಾವವನ್ನು ಹಂಚಿಕೊಂಡರು. ವಚನ ಪಠಣವನ್ನು ರಮೇಶ ಕಟ್ಟಿತುಗಾಂವ ನಡೆಸಿಕೊಟ್ಟರು. ಸಂಜುಕುಮಾರ ಲಂಜವಾಡೆ, ಗುಂಡಪ್ಪ ಕೋಟೆ, ರವಿ ಗೌಂಡೆ, ದತ್ತಾತ್ರಿ ಜ್ಯೋತೆ, ಅನೀಲ ಹಲೆಪುರ್ಗೆ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ರಾಜಕುಮಾರ ಭಟಾರೆ, ರಾಹುಲ ಮೇತ್ರೆ, ಮಧುಕರ ಟೇಲರ್, ರೋಹನ ಸಿಂಧೆ, ಸಚೀನ್ ಅಂಬೆಸಾಂಗವಿ, ಪ್ರಮೋದ ಸಿಂಧೆ ಮುಂತಾದ ಗಣ್ಯರು ಉಪಸ್ಥಿತರಿದ್ದರು. ದೀಪಕ ಠಮಕೆ ಅವರು ನಿರೂಪಣೆ ಮಾಡಿದರು. ಶಕುಂತಲಾ ಲಿಂ.ವೈಜಿನಾಥಪ್ಪ ಅಣದೂರೆ ಅವರಿಂದ ಭಕ್ತಿ ದಾಸೋಹ ನಡೆಯಿತು.

# ಎಲ್ ಜೆ ಪಿ ಪಕ್ಷಕ್ಕೆ ಕಾರ್ಯಕರ್ತರು ಸೇರ್ಪಡೆ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಲೋಕಜನಶಕ್ತಿ ಪಕ್ಷದ ಜಿಲ್ಲಾಧ್ಯಕ್ಷರಾದ ಅಲ್ಲಾಪಾಡು ಜಿ.ಗೋಪಾಲರೆಡ್ಡಿ ಅವರ ನೇತೃತ್ವದಲ್ಲಿ ಕಾರ್ಯಕರ್ತರು ಪಕ್ಷಕ್ಕೆ ಸೇರ್ಪಡೆಗೊಂಡರು.ಪಕ್ಷದ ಜಿಲ್ಲಾ ಕಾರ್ಯದರ್ಶಿಯಾಗಿ ಉಮಾಪತಿ ಹಾಗೂ ನಗರ ಘಟಕದ ಉಪಾಧ್ಯಕ್ಷರಾಗಿ ಕುಮಾರಸ್ವಾಮಿ ಅವರನ್ನು ಆಯ್ಕೆ ಮಾಡಲಾಗಿದೆ. ಮಾರೆಪ್ಪ ಮೇಸ್ತ್ರಿ ಹನುಮಂತ, ತಿಮ್ಮಪ್ಪ ತಾಯಪ್ಪ ಹಾಗೂ ಶ್ರೀನಿವಾಸ್ ಸೇರಿದಂತೆ ಅನೇಕ ಕಾರ್ಯಕರ್ತರು ಪಕ್ಷದ ತತ್ವ ಸಿದ್ಧಾಂತಗಳನ್ನು ಮೆಚ್ಚಿ ಪಕ್ಷಕ್ಕೆ ಸೇರ್ಪಡೆಯಾದರು. ನಂತರ ಜಿಲ್ಲಾಧ್ಯಕ್ಷರಾದ ಅಲ್ಲಾಪಾಡು ಜಿ.ಗೋಪಾಲರೆಡ್ಡಿ ಅವರು ಮಾತನಾಡಿ, ಮುಂಬರುವ ಸ್ಥಳೀಯ ಚುನಾವಣೆಯಲ್ಲಿ ಕಾರ್ಯಕರ್ತರು ಅಭ್ಯರ್ಥಿ ಗೆಲವುಗೆ ಶ್ರಮಿಸಬೇಕು. ಪಕ್ಷದ ಬಲವರ್ಧನೆಗೆ ಕಾರ್ಯಕರ್ತರು ಶ್ರಮಿಸಬೇಕು ಎಂದರು.ನೂರಾರು ಕಾರ್ಯಕರ್ತರು ನಮ್ಮ ಜೊತೆಯಲ್ಲಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಸಾಥ್ ನೀಡುತ್ತಿದ್ದಾರೆ. ನಿತ್ಯಲೂ ನಮ್ಮ ಜೊತೆಯಲ್ಲಿಯೇ ಇರ್ತಾರೆ. ತತ್ವ ಸಿದ್ಧಾಂತದ ಬದ್ಧರಾಗಿ ಪಕ್ಷ ಸಂಘಟನೆ ಶ್ರಮಿಸಬೇಕು ಎಂದರು. ಈ ಸಂದರ್ಭದಲ್ಲಿ ರಾಜ್ಯ ಪ್ರದಾನ ಕಾರ್ಯದರ್ಶಿ ಜಿ. ಎಲ್ ರಂಗಪ್ಪ, ಈರಣ್ಣ ದೊರೆ ನಗರ ಅಧ್ಯಕ್ಷರು ಅನೇಕರು ಉಪಸ್ಥಿತರಿದ್ದರು.

# ಮಸ್ಕಿ| ಸ್ವಾಭಿಮಾನ ಹಾಗೂ ಆತ್ಮವಿಶ್ವಾಸದ ಬದುಕಿಗಾಗಿ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನಗೊಂಡಿದೆ; ಶಾಸಕ ಆರ್ ಬಸನಗೌಡ ತುರ್ವಿಹಾಳ

**ಮಲ್ಲಮ್ಮ ನುಡಿ ವಾರ್ತೆ, ಮಸ್ಕಿ:** ಪಂಚ ಗ್ಯಾರಂಟಿ ಯೋಜನೆಗಳ ನೋಂದಣಿ, ಕುಂದುಕೊರತೆಗಳ ಪರಿಶೀಲನೆ ಸಭೆ ಮಸ್ಕಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಆಶ್ರಯದಲ್ಲಿ ತೋರಣದಿನ್ನಿ, ಮಲ್ಲದಗುಡ್ಡ, ಹಿರೆದಿನ್ನಿ ಈ 3 ಗ್ರಾಮ ಪಂಚಾಯಿತಿಗಳನ್ನು ಒಳಗೊಂಡು ಶುಕ್ರವಾರದಂದು ಮಲ್ಲದಗುಡ್ಡ ಗ್ರಾಮ ಪಂಚಾಯಿತಿಯ ಆವರಣದಲ್ಲಿ ಏರ್ಪಡಿಸಿದ್ದ ಗ್ಯಾರಂಟಿ ಯೋಜನೆಗಳ ನಡೆ ಹಳ್ಳಿಗಳ ಕಡೆ ಕಾರ್ಯಕ್ರಮಕ್ಕೆ ಶಾಸಕ ಆರ್ ಬಸನಗೌಡ ತುರ್ವಿಹಾಳ ಅವರು ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಸ್ವಾಭಿಮಾನ ಮತ್ತು ಆತ್ಮವಿಶ್ವಾಸದ ಬದುಕಿಗಾಗಿ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನಗೊಂಡಿದೆ. ಜನರ ಮೇಲಿನ ಕಾಳಜಿಯಿಂದ ಸರಕಾರದ ಯೋಜನೆಗಳು ತಳಮಟ್ಟದ ಜನರಿಗೆ ತಲುಪುತ್ತಿದೆಯೇ ಎಂಬುದನ್ನು ಅರಿಯಲು ಜಿಲ್ಲಾ ಮತ್ತು ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮಾಡಲಾಗಿದೆ. ಕಡು ಬಡವನ ಮನೆಯ ಫ್ಯೂಸನ್ನು ಲೈನ್ ಮೆನ್ ಗಳು ತೆಗೆದುಕೊಂಡು ಹೋಗುವುದನ್ನು ಗೃಹಜ್ಯೋತಿ ಯೋಜನೆ ತಂದಿದೆ ಎಂದು ಹೇಳಿದರು.ಕಾಸಿಲ್ಲದೆ ಪರಿತಪಿಸುತ್ತಿದ್ದು ಅಂತಹವರಿಗೆ ಯುವನಿಧಿ ಮೂಲಕ ಮಾಸಿಕ ಮೂರು ಸಾವಿರ ರೂಪಾಯಿ ನೀಡಲಾಗುತ್ತಿದೆ. ಮಹಿಳೆಯರನ್ನು ಕಂಡೊಡನೆ ಸರಕಾರಿ ಬಸ್ಸುಗಳು ನಿಲ್ಲಿಸುವ ಯಶಸ್ವಿಶಕ್ತಿ ಯೋಜನೆ ಸಹಿತ ಜನರು ಸ್ವಾಭಿಮಾನದಲ್ಲಿ ಬದುಕುವ ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯದಲ್ಲಿ ಜನಪ್ರಿಯಗೊಂಡಿವೆ. ಯಾವ ಪ್ರದೇಶದಲ್ಲಿ ಆರ್ಥಿಕ ಚಲನವಲನ ಆಗುತ್ತದೋ ಆ ಪ್ರದೇಶದ ಸಮಗ್ರ ಅಭಿವೃದ್ಧಿ ಸಾಧ್ಯ. ಪ್ರತೀ ಗ್ರಾಮಗಳಲ್ಲೂ ಗ್ಯಾರಂಟಿ ಫಲಾನುಭವಿಗಳ ಸ್ವಸಹಾಯ ಸಂಘಗಳನ್ನೂ ಮಾಡಲು ತೀರ್ಮಾನಿಸಲಾಗಿದೆ ಎಂದರು.ನಂತರ ಗ್ಯಾರಂಟಿ ಯೋಜನೆ ತಾಲೂಕು ಅಧ್ಯಕ್ಷ ಮೈಬೂಬ್ ಸಾಬ್ ಮುದ್ದಾಪುರ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಾರಿಗೆ ತಂದಿರುವುದು ಇಂದಿರಾ ಗಾಂಧಿ. ಈ ಇಲಾಖೆಯಡಿ ಮಹಿಳೆಯರ ಅಭಿವೃದ್ಧಿಗಾಗಿ ವಿವಿಧ ಕಾರ್ಯ ಚಟುವಟಿಕೆ ನಡೆಯುತ್ತಿದೆ. ದೇಶದಲ್ಲಿ ಇರುವ 30 ರಾಜ್ಯಗಳಲ್ಲಿ ಪಂಚ ಗ್ಯಾರಂಟಿ ನೀಡಿರುವುದು ಕರ್ನಾಟಕ ಸರ್ಕಾರ ಮಾತ್ರ. ಇಂತಹ ಯೋಜನೆಗಳನ್ನು ಈ ಹಿಂದೆ ಯಾವುದೇ ಸರ್ಕಾರ ನೀಡಿಲ್ಲ ಎಂದರು.ಈ ಸಂದರ್ಭದಲ್ಲಿ ಮೂರು ಗ್ರಾ.ಪಂಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ್ ಯಾದವ್, ತಹಸೀಲ್ದಾರ್ ಮಂಜುನಾಥ ಭೋಗಾವತಿ, ಸಹಾಯಕ ನಿರ್ದೇಶಕ ಸೋಮನಗೌಡ ಪಾಟೀಲ್, ಮಸ್ಕಿ ತಾಪಂ ವ್ಯವಸ್ಥಾಪಕ ಗಂಗಾಧರ ಮೂರ್ತಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಾದ ತಿಮ್ಮಪ್ಪ ನಾಯಕ, ಲಕ್ಷ್ಮಣ, ಬಸವಲಿಂಗಪ್ಪ ಹೊಸಗೌಡ್ರು, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಇದ್ದರು.



# ಡಾ. ಬಿ. ಆರ್ ಅಂಬೇಡ್ಕರ್ 69 ಪರಿನಿರ್ವಾಣ ದಿನ ಆಚರಣೆ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು,**

ಲೋಕ ಜನಶಕ್ತಿ ಪಕ್ಷದ ವತಿಯಿಂದ ಸಂವಿಧಾನ ಶಿಲ್ಪಿ ಡಾ. ಬಿ. ಆರ್ ಅಂಬೇಡ್ಕರ್ ರವರ 69ನೇ ಮಹಾಪರಿನಿರ್ವಾಣ ದಿನದ ಅಂಗವಾಗಿ ನಗರದ ಡಾ. ಬಿ. ಆರ್ ಅಂಬೇಡ್ಕರ್ ವೃತ್ತದಲ್ಲಿ ಇರುವ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು. ಅಂಬೇಡ್ಕರ್ ಪುತ್ಥಳಿಗೆಪುಷ್ಪ ನಮನ ಸಲ್ಲಿಸಿ ಪಕ್ಷದ ಜಿಲ್ಲಾಧ್ಯಕ್ಷರಾದ ಅಲ್ಲಾಪಾಡು ಜಿ.ಗೋಪಾಲರೆಡ್ಡಿ ಅವರು ಮಾತನಾಡಿ,

ಮಹಾಪರಿನಿರ್ವಾಣ ದಿವಸದಂದು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಸ್ಮರಿಸಲಾಗುತ್ತಿದೆ. ಅವರ ಮಾನವ ಘನತೆಯನ್ನು ಎತ್ತಿಹಿಡಿಯಲು ಮತ್ತು ಪ್ರಜಾಪ್ರಭುತ್ವ ಮೌಲ್ಯಗಳನ್ನು ಬಲಪಡಿಸಲು ಪೀಳಿಗೆಗೆ ಸ್ಫೂರ್ತಿ ನೀಡಿದರು. ಜಾತಿಯ ಕಾರಣಕ್ಕಾಗಿ ಹುಟ್ಟಿನಿಂದಲೇ ತಾವು ಎದುರಿಸಿದ ನೋವು, ಅವಮಾನ, ನಿಂದನೆಯನ್ನು ಸವಾಲಾಗಿ ಸ್ವೀಕರಿಸಿ, ಮುಂದೆ ತನ್ನಂತಹ ಕೋಟ್ಯಂತರ ಅವಕಾಶ ವಂಚಿತ ಜನರಿಗೆ ಸ್ವಾತಂತ್ರ್ಯ, ಸಮಾನತೆ, ಘನತೆಯ ಬದುಕನ್ನು ಕಲ್ಪಿಸಿದ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಬದುಕಿನ ಹಾದಿ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ. ಮಹಾನ್ ಮಾನವತಾವಾದಿ, ದಾರ್ಶನಿಕ, ಸಂವಿಧಾನ ಶಿಲ್ಪಿ ಬಾಬಾ ಸಾಹೇಬರ ಪರಿನಿರ್ವಾಣ ದಿನದಂದು ಆ ಮಹಾಚೇತನಕ್ಕೆ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪ್ರದಾನ ಕಾರ್ಯದರ್ಶಿ ಜಿ. ಎಲ್ ರಂಗಪ್ಪ,ಈರಣ್ಣ ದೊರೆ,ಉಮಾಪತಿ ಸೇರಿದಂತೆ ಉಪಸ್ಥಿತರಿದ್ದರು.

# ರಾಷ್ಟ್ರೀಯ ಮತದಾರರ ದಿನದ ಮಹತ್ವ ಕುರಿತು ಪ್ರಬಂಧ ಸ್ಪರ್ಧೆ.




**ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟೆ:**

ಪಟ್ಟಣದ ಎಸ್.ಕೆ.ಬಾಲಕಿಯರ ಪ್ರೌಢಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮತ್ತು ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಾರ್ಯಾಲಯ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ರಾಷ್ಟ್ರೀಯ ಮತದಾರ ದಿನಾಚರಣೆಯ ಮಹತ್ವ ಕುರಿತು ತಾಳಿಕೋಟೆ ತಾಲೂಕಿನ ಪ್ರೌಢಶಾಲಾ ಮಕ್ಕಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿತ್ತು. ಕ್ಷೇತ್ರ ಸಮನ್ವಯ ಅಧಿಕಾರಿ ಆರ್.ಬಿ.ದಮ್ಮೂರಮಠ ಅಧ್ಯಕ್ಷತೆಯಲ್ಲಿ ನಡೆದ ಉದ್ಘಾಟನಾ ಸಮಾರಂಭದ ವೇದಿಕೆಯಲ್ಲಿ ಬಿಆರ್ಪಿ ಕಾಶಿನಾಥ ಸಜ್ಜನ,ಸಿಆರ್ಪಿ ರಾಜಾಸಿಂಗ್ ವಿಜಾಪುರ ನಿರ್ಣಾಯಕರಾಗಿ ಲಿಂಗದಳ್ಳಿ ಸರಕಾರಿ ಪ್ರೌಢಶಾಲೆಯ ಕನ್ನಡ ವಿಷಯ ಶಿಕ್ಷಕ ಅಪ್ಪಾಸಾಹೇಬಗೌಡ ಮೂಲಿಮನಿ , ಬ.ಸಾಲವಾಡಗಿ ಸರಕಾರಿ ಪ್ರೌಢಶಾಲೆಯ ಶಿಕ್ಷಕ ಚಿಮ್ಮಲಗಿ ಹಾಗೂ ಎಸ್.ಕೆ.ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಡಾ.ಅನಿಲಕುಮಾರ ಇರಾಜ ಇದ್ದರು. ರಾಜಾಸಿಂಗ್ ವಿಜಾಪುರ ನಿರೂಪಿಸಿದರು, ಎಮ್.ಎಮ್. ಕಾಂಬಳೆ ಸ್ವಾಗತಿಸಿದರು.

# ಭಾಲ್ಕಿಯ ಬಿಜೆಪಿ ಕಚೇರಿಯಲ್ಲಿ 69ನೇ ಮಹಾಪರಿನಿರ್ವಾಣ ದಿನ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ :** ಇಲ್ಲಿಯ ಬಿಜೆಪಿ ಕಚೇರಿಯಲ್ಲಿ ಶನಿವಾರ ಡಾ.ಬಿ.ಆರ್. ಅಂಬೇಡ್ಕರ್ ಅವರ 69ನೇ ಮಹಾಪರಿನಿರ್ವಾಣ ದಿನ ಕಾರ್ಯಕ್ರಮ ನೆರವೇರಿತು. ಮಾಜಿ ಶಾಸಕ ಪ್ರಕಾಶ ಖಂಡ್ರೆ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವಿಸಿದರು.ಡಾ.ಬಿ.ಆರ್.ಅಂಬೇಡ್ಕರ್ ಅವರು ದೇಶಕ್ಕೆ ಕೊಡುಗೆಯಾಗಿ ನೀಡಿರುವ ಸಂವಿಧಾನ ವಿಶ್ವಕ್ಕೆ ಮಾದರಿಯಾಗಿದೆ. ಸಂವಿಧಾನದಲ್ಲಿ ಹಿಂದುಳಿದ ವರ್ಗ, ದಲಿತರಿಗೆ ಬಡಜನರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಮೀಸಲಾತಿ ಕಲ್ಪಿಸಿ ಕೊಟ್ಟಿರ್ದ್ದಾರೆ. ಅವರು ಈ ದೇಶದ ಪ್ರಧಾನಿ ಯಾಗಿದ್ದರೆ, ನಮ್ಮ ದೇಶ ಬಹಳಷ್ಟು ಅಭಿವೃದ್ಧಿಯಾಗುತಿತ್ತು, ಹಾಗೂ ಅವರು ಇನ್ನಷ್ಟು ವರ್ಷಗಳು ಬದುಕಿದ್ದರೆ ನಮ್ಮ ದೇಶದ ಬಹಳಷ್ಟು ಜನರ ಬಾಳು ಹಸನಾಗುತಿತ್ತು, ಇಂತಹ ಮಹಾನ್ ನಾಯಕನಿಗೆ ಭಕ್ತಿಯೊಂದಿಗೆ ನಮನ ಸಲ್ಲಿಸುತ್ತೇನೆ ಎಂದು ನುಡಿದರು.ಬಿಜೆಪಿ ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ, ಪ್ರಾಸ್ತಾವಿಕವಾಗಿ ಮಾತನಾಡಿದರು, ಎಲ್.ಎಂ.ಕಾಂಬಳೆ, ಸುರೇಶ ಹುಬ್ಳೀಕರ್, ಮಾತನಾಡಿದರು, ಈ ಸಂಧರ್ಭದಲ್ಲಿ ಮುಖಂಡರುಗಳಾದ ಗೋವಿಂದರಾವ ಬಿರಾದರ್, ಬಾಬುರಾವ ಧೂಪೆ, ಚನ್ನಬಸವ ಬಳತೆ, ಸಂಜೀವ ಸಿಂಧೆ, ಜಗನ್ನಾಥ್ ಬಿರಾದಾರ್, ವಿಜಯಕುಮಾರ ಕೋಳಿ, ಸಿದ್ದೋಧನ್ ಕಾಂಬಳೆ, ಸುಭಾಷ ಬಿರಾದರ್, ಸಂತೋಷ ಪಾಟೀಲ್, ಓಂಕಾರ ನೇಳಗಿ, ಪ್ರಕಾಶ ಕೇರೂರ, ರೇಷ್ಮಾ ತಮಾಸಿಂಗೆ, ಶಿವಕುಮಾರ ಮಲ್ಲಾಸುರೆ, ಮನ್ಮಥ ಸ್ವಾಮಿ, ಸೇರಿದಂತೆ ಗಲವರು ಇದ್ದರು. ಲಕ್ಷ್ಮಣ ಮುದಾಳೆ ಸ್ವಾಗತಿಸಿ, ನಿರೂಪಿಸಿದರು. ಡಾ.ಜಗದೀಶ ಭೂರೆ ವಂದಿಸಿದರು.




# ಪರೀಕ್ಷಾರ್ಥಿಗಳಿಗೆ ಶುಭ ಹಾರೈಸಿದ ಡಾ. ಮಿಲಿಂದ್ ಮುಳೆ



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:** ಪರೀಕ್ಷಾರ್ಥಿಗಳು ಆತ್ಮವಿಶ್ವಾಸದಿಂದ ಧೈರ್ಯವಾಗಿ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಎದುರಿಸಬೇಕೆಂದು ಸ್ಪರ್ಧಾ ಕಿರಣ ಕರಿಯರ್ ಅಕಾಡೆಮಿಯ ಸಂಸ್ಥಾಪಕ ನಿರ್ದೇಶಕರಾದ ಡಾ. ಮಿಲಿಂದ ಮುಳೆ ತಿಳಿಸಿದರು. ಮುಂದೆ ನಡೆಯುವ ಶಿಕ್ಷಕರ ನೇಮಕಾತಿಗೆ ಟಿಇಟಿ ಪರೀಕ್ಷೆ ಅತ್ಯಂತ ಅವಶ್ಯಕವಾಗಿರುವುದರಿಂದ ತೇರ್ಗಡೆಯಾಗುವುದು ಮುಖ್ಯವಾಗಿದೆ. ನಮ್ಮ ತರಬೇತಿ ಸಂಸ್ಥೆಯಲ್ಲಿ 35 ದಿನಗಳ ಕಾಲ ಉತ್ತಮವಾದ ತರಗತಿಗಳನ್ನು ಹಾಗೂ ಮಾದರಿ ಪರೀಕ್ಷೆಗಳನ್ನು ಏರ್ಪಡಿಸಲಾಗಿತ್ತು. ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕೆಂದು ಹೇಳಿದರು. ಅಭ್ಯರ್ಥಿಯು ಪರೀಕ್ಷಾ ಕೇಂದ್ರಕ್ಕೆ ಒಂದು ಗಂಟೆ ಮುಂಚಿತವಾಗಿ ಹಾಜರಾಗಬೇಕು ಪ್ರವೇಶ ಪತ್ರದ ಜೊತೆಗೆ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ತೆ–ಗೆದುಕೊಂಡು ಹೋಗಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿ, ಆತ್ಮಸ್ಥೈರ್ಯವನ್ನು ತುಂಬಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ವೀರೇಶ್, ದಯಾಸಾಗರ ಬಿಡವೆ, ಅಶೋಕ್ ಇನ್ನಿತರರು ಉಪಸ್ಥಿತರಿದ್ದರು.



# ಕಾಂಗ್ರೆಸ್ ನೀತಿಗೆ ವಿಶ್ವ ಹಿಂದು ಪರಿಷತ್ ತೀವ್ರ ಆಕ್ರೋಶ.

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ.: ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಸರಕಾರ ಬಂದಾಗಿನಿಂದ ಒಂದಲ್ಲ ಒಂದು ರೀತಿಯಲ್ಲಿ ಹಿಂದೂ ಸಮಾಜಕ್ಕೆ ತೀವ್ರ ರೀತಿಯ ಕಿರುಕುಳ ಕೊಡುತ್ತ ಬಂದಿದ್ದು ಅದರ ಮುಂದುವರಿದ ಭಾಗವಾಗಿ ಇದೇ ತಿಂಗಳ 8ನೇ ತಾರೀಕಿಗೆ ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಹಿಂದೂ ಸಮಾಜಕ್ಕೆ ಅತ್ಯಂತ ಪೂಜನೀಯವಾದ ಗೋ ವಂಶವನ್ನು ಹಿಂಸಾತ್ಮಕವಾಗಿ ಕಳ್ಳಸಾಗಾಟ ಮಾಡುವಾಗ ಪೊಲೀಸರು ವಶಪಡಿಸಿದ ಸಾಗಾಟ ವಾಹನಗಳನ್ನು ಸುಲಭದಲ್ಲಿ ಹಿಂತಿರುಗಿಸುವಂತೆ ಮಾಡಲು ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಹಾಗೂ ಸಂರಕ್ಷಣಾ ಕಾಯಿದೆ 2020ನ್ನು ಸಡಿಲುಗೊಳಿಸಿ ತಿದ್ದುಪಡಿ ತರಲು ಕ್ಯಾಬಿನೆಟ್ ಸಭೆಯಲ್ಲಿ ಪಾಸ್ ಮಾಡಲು ಹುನ್ನಾರ ನಡೆಸಿದೆ ಎಂದು ಮಾಧ್ಯಮಗಳ ವರದಿ ಮೂಲಕ ತಿಳಿದುಬಂದಿದ್ದು ಗೋವುಗಳಿಗೆ ಹಿಂಸೆ ಹೆಚ್ಚಾಗುವ ಸಾಧ್ಯತೆ ಇರುವ ಈ ತಿದ್ದುಪಡಿಯನ್ನು ವಿಶ್ವ ಹಿಂದು ಪರಿಷದ್ , ಹಿಂದು ಸಂಘಟನೆಗಳು ತೀವ್ರವಾಗಿ ಖಂಡಿಸುತ್ತದೆ ಎಂದು ವಿಶ್ವ ಹಿಂದೂ ಪರಿಷತ್ ಆಕ್ರೋಶವನ್ನು ವ್ಯಕ್ತಪಡಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ವಿಶ್ವ ಹಿಂದೂ ಪರಿಷತ್ ಪದಾಧಿಕಾರಿಗಳು, ಈ ತಿದ್ದುಪಡಿಯನ್ನು ತಕ್ಷಣ ಹಿಂದಕ್ಕೆ ಪಡೆಯ ಬೇಕು, ಮೇಲ್ಕಾಣಿಸಿದ ಕಾಯಿದೆ ಯ ಸೆಕ್ಷನ್ 8ರ ಪ್ರಕಾರ ಪ್ರಸ್ತುತ ಅಕ್ರಮ ಗೋಸಾಗಾಟದ ವಾಹನವನ್ನು ಪೊಲೀಸರು ವಶಪಡಿಸಿದಾಗ ವಾಹನದ ಮೌಲ್ಯದಷ್ಟು ಬ್ಯಾಂಕ್ ಗ್ಯಾರಂಟಿಯನ್ನು ಕೊಟ್ಟೇ ತಾತ್ಕಾಲಿಕವಾಗಿ ಹಿಂಪಡೆಯಲು ಅವಕಾಶವಿದೆ. ಅಂದರೆ ಈಗ ವಶಪಡಿಸಿದ ವಾಹನದ ಮಾರುಕಟ್ಟೆ ಮೌಲ್ಯವು ರೂಪಾಯಿ 5 ಲಕ್ಷ ಇದ್ದರೆ ರೂಪಾಯಿ 5 ಲಕ್ಷದ ಬ್ಯಾಂಕ್ ಗ್ಯಾರಂಟಿಯನ್ನು ಪ್ರಸ್ತುತಪಡಿಸಿ ವಾಹನವನ್ನು ತಾತ್ಕಾಲಿಕವಾಗಿ ಬಿಡುಗಡೆಗೊಳಿಸಲು ಅವಕಾಶವಿದೆ. ಪ್ರಕರಣದ ಅಪರಾಧ ಸಾಬೀತಾದಲ್ಲಿ ವಾಹನವನ್ನುವಾಪಸ್ ತಂದು ಸರಕಾರಕ್ಕೆಮುಟ್ಟುಗೋಲು ಹಾಕಬೇಕಾಗುತ್ತದೆ . ಇದಕ್ಕೆ ತಪ್ಪಿದಲ್ಲಿ ಬ್ಯಾಂಕ್ ಗ್ಯಾರಂಟಿಯ ಹಣವನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಲಾಗುತ್ತದೆ.

ಈಗ ಇರುವ ಕಾಯಿದೆ ಸಾಕಷ್ಟು ಪರಿಣಾಮಕಾರಿಯಾಗಿದ್ದು, ಬ್ಯಾಂಕ್ ಗ್ಯಾರಂಟಿ ತೆಗೆದು ಕೊಳ್ಳುವ ಶರತ್ತಿನಿಂದಾಗಿ ಸಾಕಷ್ಟು ಅಕ್ರಮ ಗೋ ಸಾಗಾಟ ಸ್ವಲ್ಪ ಮಟ್ಟಿಗೆ ಕಡಿಮೆಯಾಗಿತ್ತಿತ್ತು, ಆದರೆ, ಗೋ ಕಳ್ಳ ಸಾಗಣೆದಾರರಿಗೆ ಬ್ಯಾಂಕ್ ಗ್ಯಾರಂಟಿಯನ್ನು ಕೊಡಲು ಕಷ್ಟವಾಗುತ್ತದೆ ಎಂಬ ಅಸಂಭದ್ದ ನೆಪ ಒಡ್ಡಿ. ಅಂತಹ ಆರೋಪಿಗಳಿರುವ ಗೋ ಕಳ್ಳ ಸಾಗಣೆ ದಾರ ವಾಹನಕ್ಕೆ ಕಾಂಗ್ರೆಸ್ ಸರಕಾರವು ಈ ಸೆಕ್ಷನ್ನಲ್ಲಿ ಇರುವ ಬ್ಯಾಂಕ್ ಗ್ಯಾರಂಟಿಯ ಶರತ್ತನ್ನು ಹಿಂಪಡೆದು ಕೇವಲ ಲಟಿಜಜಟುಟಿ-ಲಣಥಿ ಛಿಂಟಿಜ ಕೊಟ್ಟರೆ ಸಾಕೆಂದು ತಿದ್ದುಪಡಿ ತರುತ್ತಿದೆ. ಇದರಿಂದ ಗೋವುಗಳ ಕಳ್ಳ ಸಾಗಣೆ ಹೆಚ್ಚುವ ಅಪಾಯವಿದೆ ಎಂದು ವಿಶ್ವ ಹಿಂದೂ ಪರಿಷತ್ ಪದಾಧಿಕಾರಿಗಳು ಆತಂಕವನ್ನು ವ್ಯಕ್ತಪಡಿಸಿದರು.

ಸರಕಾರಕ್ಕೆ ಗೋ ಕಳ್ಳ ಸಾಗಾಟಗಾರರ ಮೇಲೆ ಇಷ್ಟೊಂದು ಪ್ರೀತಿ ಯಾಕೆ ? ಇದು ಅಕ್ರಮ ಸಾಗಾಟಗಾರರಿಗೆ ಸರಕಾರವು "ಗೋಕಳ್ಳಸಾಗಣೇದಾರರೊಂದಿಗಿದೆ ನಾವಿದ್ದೇವೆ" ಎಂದು ಪರೋಕ್ಷವಾಗಿ ಸಂದೇಶ ಕೊಡುವ ಉದ್ದೇಶದಂತೆ ಕಾಣುತಿದ್ದು. ಇನ್ನಷ್ಟು ಹಿಂಸಾತ್ಮಕ ರೀತಿಯಲ್ಲಿ ಗೋಸಾಗಾಟ ಹೆಚ್ಚಾಗಲಿದ್ದು ಗೋವುಗಳಿಗೆ ಹಿಂಸೆ ಆಗುವುದನ್ನು ನೋಡಿದವರ ಧಾರ್ಮಿಕ ಭಾವನೆಗೆ ಧಕ್ಕೆ ಬಂದು ಆಕ್ರೋಶ ಹೆಚ್ಚಿಸಲಿದೆ . ಈ ತಿದ್ದುಪಡಿಯ ಮೂಲಕ ಜನರನ್ನು ಉದ್ವಿಘ್ನಗೊಳಿಸುವಂತೆ ಸರಕಾರವೇ ಪ್ರಚೋದನೆ ನೀಡಿದಂತಾಗಿದೆ. ಸರಕಾರದ ಈ ನಡೆ ಅಖಂಡ ಹಿಂದೂ ಸಮಾಜದ ಧಾರ್ಮಿಕ ಭಾವನೆಗೆ ಪ್ರಚೋದನೆ ನೀಡುತ್ತಿದೆ. ಈ ತಿದ್ದುಪಡಿಯನ್ನು ತಕ್ಷಣ ಹಿಂಪಡೆಯುವಂತೆ ಒತ್ತಾಯಿಸಿ ವಿವಿಧ ಹಿಂದೂ ಸಂಘಟನೆಗಳ ನೇತ್ರತ್ವದಲ್ಲಿ ಹಿಂದೂ ಸಮಾಜ ರಾಜ್ಯಾದ್ಯಂತ ಪ್ರತಿಭಟನೆ ಮಾಡಲಿದೆ ಎಂದು ವಿಶ್ವ ಹಿಂದೂ ಪರಿಷತ್ ಪದಾಧಿಕಾರಿಗಳಾದ, ವಿಷ್ಣುವರ್ಧನ್ ರೆಡ್ಡಿ, ಕೆ ಅಶೋಕ್, ವಿಜಯಲಕ್ಷ್ಮಿ ಹಿರೇಮಠ್, ಗೋವಿಂದ ನಾಯಕ, ಕೆ ಶ್ರೀರಾಮುಲು ಮತ್ತು ಶ್ರೀಕಾಂತ್ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ಮಹಾ ಪರಿನಿರ್ವಾಣ ದಿನ: ಜಿಲ್ಲಾಡಳಿತದಿಂದ ಗೌರವ ನಮನ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ವರ್ಷದ ಮಹಾ ಪರಿನಿರ್ವಾಣ ದಿನ ಅಂಗವಾಗಿ ನಗರದ ಕೌಲ್‌ಬಜಾರ್‌ನ 1ನೇ ಗೇಟ್ ಹತ್ತಿರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಗೌರವ ನಮನ ಸಲ್ಲಿಸಲಾಯಿತು.

ಈ ವೇಳೆ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಹಾಗೂ ಶಾಸಕರಾದ ರಾಘವೇಂದ್ರ ಹಿಟ್ನಾಳ್, ಡಾ.ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ-ಸಂಸ್ಥೆಗಳ ದಲಿತ ಮುಖಂಡರು, ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಇದ್ದರು.

# ಬಾಪೂಜಿನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಉಳಿಸಲು : ವಿದ್ಯಾರ್ಥಿಗಳ – ಪೋಷಕರ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ. : ಎಐಡಿಎಸ್ಓ ವಿದ್ಯಾರ್ಥಿ ಸಂಘಟನೆ ನೇತೃತ್ವದಲ್ಲಿ ಕೆಪಿಎಸ್ ಮ್ಯಾಗ್ನೆಟ್ ಶಾಲೆ ಹೆಸರಿನಲ್ಲಿ 40,000 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚಲು ಮುಂದಾಗಿರುವ ರಾಜ್ಯ ಸರ್ಕಾರದ ವಿರುದ್ಧ ಬಾಪೂಜಿನಗರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಉಳಿಸಬೇಕು ಎಂದು ಬಡಾವಣೆಯ ಪೋಷಕರು ಮತ್ತು ವಿದ್ಯಾರ್ಥಿಗಳೊಂದಿಗೆ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಎಐಡಿಎಸ್ಓ ಜಿಲ್ಲಾ ಉಪಾಧ್ಯಕ್ಷರು ಎಂ ಶಾಂತಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಯ ಅಂದ್ರಳ್ ಶಾಲೆಗೇ ಕಳುಹಿಸಲು ಜನರಿಗೆ ಸಮ್ಮತಿ ಇರುವುದಿಲ್ಲ. ಏಕೆಂದರೆ ಇಲ್ಲಿ ವಾಸಿಸುವ ಜನರೆಲ್ಲಾ ಬಡವರು, ಕುಲಿ ಕಾರ್ಮಿಕರಾಗಿರುತ್ತಾರೆ ತಮ್ಮ ಮಕ್ಕಳನ್ನು ಇಡೀ ದಿನ ಸರ್ಕಾರಿ ಶಾಲೆಗಳ ಮೇಲೆ ನಂಬಿಕೆಯಿಂದ ಶಿಕ್ಷಣ ಕಲಿಯಲು ಬಿಟ್ಟು ಹೋಗುತ್ತಾರೆ. ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ಹೋಗಬೇಕೆಂದರೆ ಒಂದು ಕಿಲೋ ಮೀಟರ್ ದೂರದಲ್ಲಿರುವ ಅಂದ್ರಲ್ ಸ್ಕೂಲ್ ಗೆ ಹೋಗಲು ಈ ಸಣ್ಣ ಮಕ್ಕಳಿಗೆ ಸಾಧ್ಯವಿಲ್ಲ.., ಆದ್ದರಿಂದ 250ಕ್ಕೂ ಹೆಚ್ಚು ಮಕ್ಕಳು ಇರುವ ಈ ಶಾಲೆಯ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ, ಈ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬಾಪೂಜಿನಗರ ಶಾಲೆಯನ್ನು ಯಾವುದೇ ಕಾರಣಕ್ಕೂ ಮುಚ್ಚಬಾರದು ಎಂದು ಶಾಲೆಯನ್ನು ಉಳಿಸಿ, ಬೆಳೆಸಲು ಎಐಡಿಎಸ್ಓ ಹಾಗೂ ಬಾಪೂಜಿನಗರ ಬಡಾವಣೆಯ ಪೋಷಕರು ಇಂದು ಶಾಲೆಯ ಮುಂದೆ ಪ್ರತಿಭಟನೆ ನಡೆಸಿ ಸರ್ಕಾರವನ್ನು ಆಗ್ರಹಿಸಿದರು. ಈ ಸಂದರ್ಭದಲ್ಲಿ ಎಐಡಿಎಸ್ಓ ಜಿಲ್ಲಾ ಕಾರ್ಯದರ್ಶಿಗಳು ಕಂಬಳಿ ಮಂಜುನಾಥ ಜಿಲ್ಲಾ ಸಮಿತಿ ಸದಸ್ಯರು ತಿಪ್ಪೇಸ್ವಾಮಿ ಮತ್ತು ಕಾಂತೇಶ್. ಹಾಗೂ ಬಾಪೂಜಿನಗರ ಬಡಾವಣೆಯ ಜನರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬೀದರ್ ಜಿಲ್ಲಾ ಸಂಘದ ಅಡಾಕ್ ಸಮಿತಿ ಅಧ್ಯಕ್ಷರಾಗಿ ಆನಂದ ದೇವಪ್ಪ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ ಬೀದರ್:

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕಕ್ಕೆ ಅಡಾಕ್ ಸಮಿತಿ ರಚಿಸಲಾಗಿದ್ದು, ಸಮಿತಿಯ ಮುಖ್ಯಸ್ಥರನ್ನಾಗಿ ಜನದನಿ ಪತ್ರಿಕೆಯ ಸಂಪಾದಕ ಅನಂದ ದೇವಪ್ಪ ಅವರನ್ನು ಅಧ್ಯಕ್ಷರಾಗಿ ಹಾಗೂ ಸಂಜೆವಾಣಿ ಪತ್ರಿಕೆಯ ಉಪ ಸಂಪಾದಕ ಶಿವಕುಮಾರ ಸ್ವಾಮಿ ಮತ್ತು ಕನ್ನಡಪ್ರಭ ಪತ್ರಿಕೆಯ ಸ್ಥಾನಿಕ ಸಂಪಾದಕರಾದ ಅಪ್ಪಾರಾವ ಸೌದಿ ಅವರನ್ನು ಸಮಿತಿಯ ಸದಸ್ಯರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.ಶನಿವಾರ ಬೀದರ್ ಪತ್ರಿಕಾ ಭವನದಲ್ಲಿ ಸಂಘದ ರಾಜ್ಯ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿನಡೆದ ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ಸದಸ್ಯರ ಅಭಿಪ್ರಾಯ ಪಡೆದ ಬಳಿಕ ಸರ್ವಾನುಮತದ ನಿರ್ಣಯವನ್ನುಸಭೆಯಲ್ಲಿ ಘೋಷಿಸಿದರು.

ಘೋಷಣೆಗೆ ಮೊದಲು ಹಾಜರಿದ್ದ ಸರ್ವ ಸದಸ್ಯರ ಅಭಿಪ್ರಾಯ ಸಂಗ್ರಹಿಸಲಾಯಿತು. ಹಿರಿಯ ಪತ್ರಕರ್ತ ಮಾಳಪ್ಪ ಅಡಸಾರೆ, ಬಾಬು ವಾಲಿ, ಮಲ್ಲಿಕಾರ್ಜುನ ಬಿರಾದಾರ, ಸಿದ್ರಾಮಯ್ಯ ಸ್ವಾಮಿ, ದೀಪಕ ವಾಲಿ, ಬಸವರಾಜ ಕಾಮಶೆಟ್ಟಿ, ನಾಗಶೆಟ್ಟಿ ಧರಂಪುರ, ಶಶಿಕಾಂತ ಶೆಂಬೆಳ್ಳಿ, ಪೃಥ್ವಿರಾಜ.ಎಸ್, ಸುನಿಲಕುಮಾರ ಕುಲಕರ್ಣಿ ಸೇರಿದಂತೆ ಬಹುತೇಕ ಎಲ್ಲ ಸದಸ್ಯರು ಆನಂದ ದೇವಪ್ಪ ಅವರನ್ನು ಅಡಾಕ್ ಸಮಿತಿಗೆ ಅಧ್ಯಕ್ಷರನ್ನಾಗಿಸಲು ಸಮ್ಮತಿ ಸೂಚಿಸಿದರು. ಸದಸ್ಯರನ್ನುದ್ದೇಶಿಸಿ ಮಾತನಾಡಿದ ರಾಜ್ಯಾಧ್ಯಕ್ಷ ತಗಡೂರು ಅವರು, ಆಕ್ಟೋಬರ್ ತಿಂಗಳಲ್ಲಿ ಸಂಘದ ರಾಜ್ಯ ಹಾಗೂ ಎಲ್ಲ ಜಿಲ್ಲೆಗಳ ಜಿಲ್ಲಾ ಸಂಘಕ್ಕೆ ಚುನಾವಣೆಗಳು ನಡೆದು ಹೊಸ ಪದಾಧಿಕಾರಿಗಳು ಆಯ್ಕೆಯಾದರು. ಆದರೆ ಬೀದರ್ ಜಿಲ್ಲಾ ಸಂಘದಲ್ಲಿ ಒಗ್ಗಟ್ಟು ಪ್ರದರ್ಶನದ ನೆಪದಲ್ಲಿ ನಾಮಪತ್ರ ಸಲ್ಲಿಸದ ಕಾರಣ ಚುನಾವಣೆ ನಡೆಯಲಿಲ್ಲ. ಚುನಾವಣೆ ನಡೆಯದೆ ಇದ್ದಾಗ ರಾಜ್ಯ ಸಂಘದ ಮುಂದೆ ಎರಡು ಆಯ್ಕೆಗಳು ಮಾತ್ರ. ಒಂದು ಅಡಾಕ್ ಸಮಿತಿ ರಚಿಸುವುದು. ಮತ್ತೊಂದು ಮರು ಚುನಾವಣೆ ಮಾಡುವುದು. ಇಲ್ಲಿ ಚುನಾವಣೆ ಬೇಡ, ಒಗ್ಗಟ್ಟಿನ ಮಂತ್ರ ಜಪಿಸಿ ಅಡಾಕ್ ಸಮಿತಿ ರಚಿಸಬೇಕೆಂಬ ತಮ್ಮೆಲ್ಲರ ಅಭಿಪ್ರಾಯದಂತೆ ಅಡಾಕ್ ಸಮಿತಿ ರಚಿಸಲಾಗಿದೆ ಎಂದರು.ಈ ಸಮಿತಿಯು ಭವಿಷ್ಯದಲ್ಲಿ ಒಳ್ಳೆ ಕಾರ್ಯ ಕೈಗೊಳ್ಳಲಿ, ಇಲ್ಲಿಯ ಪತ್ರಕರ್ತರ ಹಿತ ಕಾಯುವ ಕಾರ್ಯ ನಡೆಯಬೇಕೆಂದು ನಿರ್ದೇಶಿಸಿದರು.ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ ಲೋಕೇಶ ಮಾತನಾಡಿ, 1932ರಲ್ಲಿ ಡಿ.ವಿ ಗುಂಡಪ್ಪನವರು ಸ್ಥಾಪಿಸಿರುವ ಈ ಸಂಘಟನೆಗೆ ಈಗ 94ವರ್ಷಗಳು ಪೂರೈಸಿವೆ. ಶತಕದ ಅಂಚಿನಲ್ಲಿರುವ ಈ ಸಂಘಕ್ಕೆ 10ಸಾವಿರ ಪತ್ರಕರ್ತರು ಕೈ ಜೋಡಿಸಿದ್ದಾರೆ. 1.1ಕೋಟಿ ಠೇವಣಿ ಮಾಡಲಾಗಿದ್ದು, ಆರ್ಥಿಕ ಶಕ್ತಿಶಾಲಿ ಸಂಘವಾಗಿ ನಿಂತಿದೆ. ಖಾದ್ರಿ ಶಾಮಣ್ಣನಂತಹ ಅನೇಕ ರಾಜಕೀಯ ಮುತ್ಸದ್ದಿಗಳು, ಜನಪ್ರತಿನಿಧಿಗಳು, ಅಧಿಕಾರಿಗಳು, ಮಹಾತ್ಮರು, ದಾರ್ಶನಿಕರು ಈ ಸಂಘದ ಚುಕ್ಕಾಣಿ ಹಿಡಿದು ಮುನ್ನಡಿಸಿದ್ದಾರೆ. ಇಂಥ ಬೃಹತ್ ಸಂಘಕ್ಕೆ ತಾವೆಲ್ಲ ಸದಸ್ಯರಾಗಿ ಇಲ್ಲಿ ಸೇರಿರುವುದು ಹಾಗೆ ರಾಜ್ಯ ಸಂಘಕ್ಕೆ ಶತಾಯುಷಿ ಭೀಮಣ್ಣ ಖಂಡ್ರೆ ಅವರ ಹೆಸರಿನಲ್ಲಿ ದತ್ತಿ ನಿಧಿ ಸಮರ್ಪಿಸುತ್ತಿರುವ ಈಶ್ವರ ಖಂಡ್ರೆ ಅವರಿಗೆ ಕೃತಜ್ಞತೆ ಸಲ್ಲಿಸುತ್ತ, ಭಿಮಣ್ಣ ಖಂಡ್ರೆಯವರಿಗೆ ಭಗವಂತ ಇನ್ನು ಆಯುರಾರೋಗ್ಯ ಕೊಟ್ಟು ಕಾಪಾಡಲಿ ಎಂದು ಪ್ರಾರ್ಥಿಸುವುದಾಗಿ ಹೇಳಿದರು.

# ಹಿರೇ ಲೆಕ್ಕಿಹಾಳ ದಲ್ಲಿ ಡೆಂಗ್ಯೂ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಬಯ್ಯಾಪುರ ಆರೋಗ್ಯ ಕೇಂದ್ರ ವ್ಯಾಪ್ತಿಯ ಹಿರೇ ಲೆಕ್ಕಿಹಾಳ ಜಿಲ್ಲಾ ಸಮೀಕ್ಷಣ ಅಧಿಕಾರಿ ಡಾ: ಕೆ.ಗಣೇಶ್ ಅವರನೇತೃತ್ವದಲ್ಲಿ ಗ್ರಾಮದಲ್ಲಿ ಡೆಂಗ್ಯೂ ಜ್ವರ ಕುರಿತು ಜನರಿಗೆ ಮನೆ ಮನೆ ಭೇಟಿ ನೀಡಿ ಮಾಹಿತಿ ಆರೋಗ್ಯ ಶಿಕ್ಷಣ ನೀಡಲಾಯಿತು. ಹಾಗೂ ಲಾರ್ವಾ ಸಮೀಕ್ಷೆ ಹಾಗೂ ಜ್ವರವಿರವವರಿಗೆ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ವೈದ್ಯರು ಚಿಕಿತ್ಸೆ ನೀಡಿದರು. ಉಪ್ಪಾರ ನಂದಿಹಾಳ ಗ್ರಾಮ ಪಂಚಾಯತಿ ಸಿಬ್ಬಂದಿ ಒಳಾಂಗಣ ಫಾಗಿಂಗ್ ಕಾರ್ಯ ನಡೆಸಿದರು. ತಾಲೂಕು ಆರೋಗ್ಯ ಅಧಿಕಾರಿ ಡಾ: ಅಮರೇಶ ಪಾಟೀಲ. ಬಯ್ಯಾಪುರ ವೈದ್ಯಾಧಿಕಾರಿ ಡಾ: ರವಿಕಿರಣ. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ್. ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಜೋಶಿ. ಸಾಂಕ್ರಾಮಿಕ ರೋಗ ಮೇಲ್ವಿಚಾರಕ ಅಶೋಕ ಮಡ್ಡಿಕರ್. ಸಿ.ಹೆಚ್.ಒ. ಸಂಗಮೇಶ. ರವಿ. ಹಿರಿಯ ನಿರೀಕ್ಷಣಾಧಿಕಾರಿಗಳಾದ ಶರಣಬಸವ ವಿಶ್ವನಾಥ ಮತ್ತು ಆಶಾಕಾರ್ಯಕರ್ತರ ತಂಡ ಡೆಂಗ್ಯೂ ನಿಯಂತ್ರಣ ಕಾರ್ಯ ಚಟುವಟಿಕೆಯಲ್ಲಿ ಭಾಗವಹಿಸಿದ್ದರು.

# ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಕಡ್ಡಾಯವಾಗಿ ನಿಯಮ ಪಾಲನೆಗೆ ಕ್ರಮ. ನಿರ್ಲಕ್ಷಿಸಿದರೇ ಕ್ರಿಮಿನಲ್ ಪ್ರಕರಣ ದಾಖಲು ಶಶಿಧರ ಕೋಸಂಬೆ



ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ):

ಜಿಲ್ಲೆಯಲ್ಲಿ 5 ಸರ್ಕಾರಿ ಮತ್ತು 75 ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳು ಕಾರ್ಯನಿರ್ವಹಿಸುತ್ತಿವೆ. ಪಿಸಿ&ಪಿಎನ್‌ಡಿಟಿ 1994 ಕಾಯ್ದೆಯಡಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ನಿರ್ಲಕ್ಷಿಸಿದರೇ ಅಂತವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಸೆಂಟರ್ ಮುಚ್ಚಲು ಕ್ರಮ ವಹಿಸಲಾಗುವುದು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಹೇಳಿದರು.

ನಗರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಗಳು, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಏರ್ಪಡಿಸಿದ್ದ ಆರ್‌ಟಿಇ ಅನುಷ್ಠಾನದ ಕುರಿತು ಶಿಕ್ಷಣ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಶುಕ್ರವಾರ ಮಾತನಾಡಿದರು. ಮಕ್ಕಳ ಹಿತ ಮತ್ತು ಹಕ್ಕುಗಳ ರಕ್ಷಣೆಗಾಗಿ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಬೇಕಿದೆ. ರಾಜ್ಯದಲ್ಲಿ ಮಕ್ಕಳ ಸಹಾಯವಾಣಿಗೆ ವಿವಿಧ ಜಿಲ್ಲೆಗಳಿಂದ ದೂರುಗಳು ಹೆಚ್ಚಾಗಿ ಬರುತ್ತಿವೆ. ವಿಜಯನಗರ ಜಿಲ್ಲೆಯಿಂದ ಹೆಚ್ಚಾಗಿ ಆರೋಗ್ಯ ಮತ್ತು ಶಿಕ್ಷಣ ಸಂಬಂಧಿತ ದೂರುಗಳು ಹೆಚ್ಚಾಗಿವೆ. ರಾಜ್ಯದಲ್ಲೇ ಅಪೌಷ್ಠಿಕತೆಯಿಂದ ಬಳಲುತ್ತಿರುವವರ ಸಂಖ್ಯೆ ವಿಜಯನಗರ ಜಿಲ್ಲೆಯಲ್ಲಿ ಹೆಚ್ಚಿದೆ ಎಂಬ ಮಾಹಿತಿ ಇದೆ.

# ಕುರುಗೋಡು ಪುರಸಭೆ: ಬೀದಿ ನಾಯಿಗಳ ಉಪಟಳ ಕಡಿವಾಣಕ್ಕೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಕುರುಗೋಡು ಪುರಸಭೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳ ಮುಖ್ಯಸ್ಥರು ಸರ್ವೋಚ್ಚ ನ್ಯಾಯಾಲಯ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳು ವಾಸವಿದ್ದಲ್ಲಿ, ಪರಿಶೀಲಿಸಿ ಬೀದಿ ನಾಯಿಗಳ ಸಂಖ್ಯೆಯ ಮಾಹಿತಿಯನ್ನು ಕುರುಗೋಡು ಪುರಸಭೆ ಕಚೇರಿಗೆ ಸಲ್ಲಿಸಬೇಕು ಎಂದು ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರವೇಶ ನಿಯಂತ್ರಿಸಲು ಕ್ರಮವಹಿಸಬೇಕು. ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವ ಮೂಲಕ ಕುರುಗೋಡು ಪುರಸಭೆ ಕಚೇರಿಗೆ ಸಹಕರಿಸಬೇಕು.

ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ನಾಯಿಗಳು ವಾಸಮಾಡಲು ಅವಕಾಶ ಮಾಡಿಕೊಟ್ಟಲ್ಲಿ ಅವುಗಳನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದಲೇ ವಸೂಲು ಮಾಡಲಾಗುವುದು. ಆದೇಶ ಉಲ್ಲಂಘಿಸಿದಲ್ಲಿ ನ್ಯಾಯಾಲಯದ ಸೂಚನೆಯಂತೆ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮವಹಿಸಲಾಗುವುದು.

ಬೀದಿ ನಾಯಿಗಳನ್ನು ದತ್ತು ನೀಡುವ, ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದೆ. ದತ್ತು ಪಡೆಯಲು ಇಚ್ಛಿಸುವ ವ್ಯಕ್ತಿ, ಸಂಸ್ಥೆಗಳಿಗೆ ನಿಯಮಾನುಸಾರ ದತ್ತು ನೀಡಲು ಕ್ರಮ ವಹಿಸಲಾಗುತ್ತದೆ. ಇದಕ್ಕೆ ಸಂಬಂಧಿಸಿದಂತೆ ಕುರುಗೋಡು ಪುರಸಭೆ ಕಚೇರಿಗೆ ಸಂಪರ್ಕಿಸಬಹುದು.

ಬೀದಿ ನಾಯಿಗಳ ನಿಯಂತ್ರಣ ಮತ್ತು ಆಶ್ರಯ ತಾಣಕ್ಕೆ ಸಾಗಿಸುವ ಕುರಿತು ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 9731076778 ಗೆ ಕರೆ ಮಾಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ದಲಿತ ಸಂಘರ್ಷ ಸಮಿತಿಯ ವತಿಯಿಂದ ಬಾಬಾಸಾಹೇಬರ ಪುತ್ಥಳಿಗೆ ಪುಷ್ಪನಮನ.



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ: ಸಂವಿಧಾನ ಶಿಲ್ಪಿ *ಬಾಬಾಸಾಹೇಬ್ ಅಂಬೇಡ್ಕರ್ ಪರಿನಿಬ್ಬಾಣ* ಪ್ರಯುಕ್ತ ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡ್ರಿಗಿ ನಾಗರಾಜ ಅಂಬೇಡ್ಕರ್ ಭವನದ ಮುಂಭಾಗದಲ್ಲಿರುವ ಬಾಬಾಸಾಹೇಬರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕದಸಂಸ ರಾಜ್ಯ ಸಮಿತಿ ಸದಸ್ಯರಾದ ಪಿ ಜಗದೀಶ್ವರರೆಡ್ಡಿ, ಎಸ್ ವಿಘ್ನೇಶ್ ಜಿಲ್ಲಾ ಸಂಚಾಲಕರಾದ ಜಿ ಗೋವರ್ಧನ, ಜಿಲ್ಲಾ ಸಂಘಟನಾ ಸಂಚಾಲಕರಾದ ನಟರಾಜ, ಸಣ್ಣ ನಾಗರಾಜ, ಬಳ್ಳಾರಿ ನಗರ ಸಂಚಾಲಕರಾದ ಹೊನ್ನೇಶ್ ಬಿ ಗೋನಾಳ್, ಪದಾಧಿಕಾರಿಗಳಾದ ಗುರುದೇವ, ಶ್ರೀನಿವಾಸ್, ಚಂದ್ರಶೇಖರ್, ಅರುಣ್ ಕುಮಾರ್ ಮುಂಡ್ರಿಗಿ, ನಾಗರಾಜ್ ಹೆಗಡೆ ಪ್ರಹ್ಲಾದ್ ತೆಗ್ಗಿನಬೂದಿಹಾಳ್, ಮಹೇಂದ್ರ, ಧರ್ಮರಾಜ್ ಮುಂತಾದವರು ಉಪಸ್ಥಿತರಿದ್ದರು.

# ಮಕ್ಕಳಿಗೆ ಪಠ್ಯದ ಜೊತೆ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆ ಅಗತ್ಯ : ರಜಿನಿ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ :

ವಿದ್ಯಾರ್ಥಿಗಳಿಗೆ ಪಠ್ಯದ ಜೊತೆಗೆ ಕ್ರೀಡೆ ಮತ್ತು ಇತರೆ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಂಡಲ್ಲಿ ಅವರ ವ್ಯಕ್ತಿತ್ವ ವಿಕಸನಕ್ಕೆ ಅನುಕೂಲವಾಗಲಿದೆ ಎಂದು ನಾರಾಯಣ ಇ ಟೆಕ್ನೋ ಶಾಲೆಯ ಪ್ರಾಂಶುಪಾಲರಾದ ರಜಿನಿ ಅಭಿಪ್ರಾಯಪಟ್ಟರು.

ಅವರು ಇಂದು ನಗರದ ಕಮ್ಮ ಭವನದಲ್ಲಿ ಇಂದು ನಾರಾಯಣ ಇ-ಟೆಕ್ನೋ ಶಾಲೆಯ ವಾರ್ಷಿಕೋತ್ಸವದಲ್ಲಿ

ಪ್ರಾಸ್ತಾವಿಕ ಮಾತುಗಳನ್ನಾಡಿ, ಇಂದಿನ ಮಕ್ಕಳು ಅತಿ ಹೆಚ್ಚು ಅಂಕ ಗಳಿಸಬೇಕೆಂಬ ಪೋಷಕರ ಒತ್ತಡದಿಂದ ಮತ್ತು ಹೋಂವರ್ಕ್ ಹಾಗೂ ಶಾಲೆಯ ಪ್ರತಿಷ್ಠೆಯಿಂದ ಬಹಳ ಮಾನಸಿಕ ಮತ್ತು ದೈಹಿಕ ಒತ್ತಡವನ್ನು ಅನುಭವಿಸುತ್ತಿದ್ದಾರೆ ಇದರ ಹೊರತಾಗಿಯೂ ಸಹ ಮಕ್ಕಳಿಗೆ ಬೌದ್ಧಿಕ ಮತ್ತು ಮಾನಸಿಕ ಬೆಳವಣಿಗೆಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಯ ಅಗತ್ಯವಿದೆ, ಗೋ ಗ್ರೀನ್ ಹೆಸರಿನಲ್ಲಿ ಕಾರ್ಯಕ್ರಮ ನಡೆಸಿ ಸಸಿ ನೀಡುವುದು ಸಸಿಗಳನ್ನು ಪೋಷಿಸುವುದು ಸೇರಿದಂತೆ ಪರಿಸರ ಜಾಗೃತಿಯನ್ನು ನಮ್ಮ ಶಾಲೆಯ ವಿದ್ಯಾರ್ಥಿಗಳಲ್ಲಿ ಮೂಡಿಸಲಾಗುವುದು ಎಂದರು.

ಕಾರ್ಯಕ್ರಮವನ್ನು ಮಹಾನಗರ ಪಾಲಿಕೆ ಸದಸ್ಯರಾದ ಕೆ ಹನುಮಂತಪ್ಪ ಉದ್ಘಾಟಿಸಿ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳ ವೈವಿಧ್ಯಮಯವಾದ ನೃತ್ಯಗಳನ್ನು ಪ್ರದರ್ಶಿಸಿದರು. ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದು, ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದುಕೊಟ್ಟರು.

ಕಾರ್ಯಕ್ರಮಕ್ಕೆ ಆಗಮಿಸಿದ ಗಣ್ಯ ಅತಿಥಿಗಳನ್ನು ವೇದಿಕೆಯಲ್ಲಿ ಸನ್ಮಾನಿಸಲಾಯಿತು. ಶಾಲೆಯ ಶಿಕ್ಷಣ, ಶಿಸ್ತು ಮತ್ತು ವಿದ್ಯಾರ್ಥಿಗಳ ಸಾಧನೆ ಕುರಿತು ಅತಿಥಿಗಳು ಮಾತನಾಡಿ ಶ್ಲಾಘನೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಆರ್.ಐ, ಫೌಸ್ ಕಾಲೇಜು ಪ್ರಾಂಶುಪಾಲರಾದ ದೇವರಾಜ್, ಸಹ ಪ್ರಾಂಶುಪಾಲರಾದ

ರಾಮಕೃಷ್ಣ, ಮಹೇಶ್ ಅಕಾಡೆಮಿಕ್ ಡೀನ್, ಸುಷ್ಮಾ ಇ-ಚಾಂಪಿಯನ್ಸ್, ಉಪ ಪ್ರಾಂಶುಪಾಲರಾದ ಮೇಘನಾ, ಇ-ಚಾಂಪ್ಸ್ ಸಂಯೋಜಕಿ ಇಂದು ಪ್ರಿಯ, ಇ-ಮಕ್ಕಳ ಸಂಯೋಜಕ ವಸಂತ್ ಸೇರಿದಂತೆ ಶಿಕ್ಷಕರು, ಸಿಬ್ಬಂದಿ ಹಾಗೂ ಮಕ್ಕಳು ನೂರಾರು ಜನ ಪೋಷಕರು, ಪಾಲಕರು ಉಪಸ್ಥಿತರಿದ್ದರು.

**ಪುರಸಭಾ ಯೋಜನಾ ಪ್ರಾಧಿಕಾರ, ಪುರಸಭೆ ಕಾರ್ಯಾಲಯ, ಹುಮನಾಬಾದ, ಜಿ:ಬೀದರ**
**TOWN MUNCIPAL COUNCIL HUMNABAD DIST:BIDAR**
www.humanabadtown.gov.in Ph: 08483-271722Email id-ka.humanabad.tmc@gmail.com Pin:585330

ಸಂಖ್ಯೆ: ಪುಸಯೋಪ್ರಾ:ಹುಮನಾಬಾದ:ಸ್ಥಯೋ:ಮಯೋ:2025-26/544 ದಿನಾಂಕ: 04-12-2025

**-: ಪ್ರಕಟಣೆ :-**
**ನಮೂನೆ-VI ನಿಯಮ-32(ಎ)**

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 10 ರನ್ವಯ)**

ಹುಮನಾಬಾದ ಪುರಸಭೆಯ ಹುಮನಾಬಾದ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅಮೃತ 2.0 ಯೋಜನೆ ಅಡಿಯಲ್ಲಿ ಮಹಾಯೋಜನೆ (ಪರಿಷ್ಕೃತ-2) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 10ರ ಡಿಯಲ್ಲಿ ಮಹಾಯೋಜನೆಯನ್ನು ತಯಾರಿಸುವ ಉದ್ದೇಶವನ್ನು ಹೊಂದಿದೆ ಎಂದು ಈ ಮೂಲಕ ಸಾರ್ವಜನಿಕರ ಗಮನಕ್ಕೆ ತರಲಾಗಿದೆ. ಈ ಬಗ್ಗೆ ಸಾರ್ವಜನಿಕರ ಸಲಹೆಗಳನ್ನು ಹುಮನಾಬಾದ ಪುರಸಭಾ ಯೋಜನಾ ಪ್ರಾಧಿಕಾರ, ಪುರಸಭೆ ಹುಮನಾಬಾದ ಕಛೇರಿಗೆ ಈ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 60 ದಿನಗಳ ಒಳಗಾಗಿ ಖುದ್ದಾಗಿ ಅಥವಾ ನೊಂದಣಿ ಅಂಚೆ ಮೂಲಕ ನೀಡುವಂತೆ ಈ ಮೂಲಕ ಕೋರಲಾಗಿದೆ.

**ಸಹಿ/-ಸದಸ್ಯ ಕಾರ್ಯದರ್ಶಿ/ಮುಖ್ಯಾಧಿಕಾರಿಗಳು**
**ಪುರಸಭಾ ಯೋಜನಾ ಪ್ರಾಧಿಕಾರ**
**ಹುಮನಾಬಾದ**

**ಸಹಿ/- ಸಹಾಯಕ ಆಯುಕ್ತರು,**
**ಉಪ ವಿಭಾಗಾಧಿಕಾರಿಗಳು ಬಸವಕಲ್ಯಾಣ**
**ಹಾಗೂ ಅಧ್ಯಕ್ಷರು, ಪುರಸಭಾ ಯೋಜನಾ**
**ಪ್ರಾಧಿಕಾರ ಹುಮನಾಬಾದ**

ವಾ.ಸಾ.ಸಂ.ಇ/ಬೀದರ/251/ಕೆ.ಎಸ್.ಎಂ.ಸಿ.&ಎ/2025-26



ಶಹಾಪುರದಲ್ಲಿ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ವರದಿಗಾರರ ಸಭೆಯಿತು. ನಂದಿ ಇಂಟರ್ನ್ಯಾಷನಲ್ ಹೋಟೆಲ್ ನಲ್ಲಿ ಜಿಲ್ಲಾ ವರದಿಗಾರರು ಹಾಗೂ ತಾಲೂಕು ವರದಿಗಾರರು ಪತ್ರಕರ್ತರ ಸಮ್ಮಿಲನದಲ್ಲಿ ಪ್ರಧಾನ ಸಂಪಾದಕರು, ಎಂಡಿ ರಮೇಶ್ ರೆಡ್ಡಿಯವರು ಹಾಜರಿದ್ದರು.

## ಬದುಕನ್ನೇ ಅರ್ಪಿಸಿದ ಮಹಾನ್ ಚೇತನ ಬಾಬಾ ಸಾಹೇಬರು



**ಕೆಂಭಾವಿ:** ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ 69 ನೇ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಪಟ್ಟಣದ ಡಾ. ಅಂಬೇಡ್ಕರ್ ವೃತ್ತದಿಂದ ಮಹಾ ನಾಯಕ ಮೂರ್ತಿಯ ಬರೆಗೆ ಮೇಣದ ದೀಪದೊಂದಿಗೆ ಕಾಲನಡಿಗೆ ಜಾತ ಮಾಡಲಾಯಿತು.

ಈ ಸಂದರ್ಭದಲ್ಲಿ ದಲಿತ ಮುಖಂಡ ಬಸವಣ್ಣಪ್ಪ ಆರ್ ಮಾಳಳ್ಳಿಕರ್ ಮಾತನಾಡಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರು ಸಮಾನತೆ, ನ್ಯಾಯ ಹಾಗೂ ಮಾನವೀಯ ಮೌಲ್ಯಗಳಿಗಾಗಿ ತಮ್ಮ ಸಂಪೂರ್ಣ ಬದುಕನ್ನೇ ಅರ್ಪಿಸಿದ ಮಹಾನ್ ಚೇತನ, ಅವರ ಆದರ್ಶಗಳು ನಮ್ಮ ಬದುಕಿನೂದ್ದಕ್ಕೂ ಅಳವಡಿಸಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಶಿವಶರಣಪ್ಪ ಮಾಳಳ್ಳಿಕರ್, ಮಾದೇವಪ್ಪ ಶರಣಪ್ಪ ಬಸರಿಗಿಡ, ಅಯ್ಯಣ್ಣ ಮಾಳಳ್ಳಿಕರ್, ರಾಯಪ್ಪ ಬಸರಿಗೇಡ, ಮರೇಪ್ಪ ಕಟ್ಟಿಮನಿ, ಪರಶುರಾಮ ಮಾಳಳ್ಳಿಕರ್, ಲಕ್ಷ್ಮಣ್ ಬಾವಿಮನಿ, ಮಲ್ಲಿಕಾರ್ಜುನ ಕಟ್ಟಿಮನಿ, ಸಿದ್ದಾರ್ಥ ಮಾಳಳ್ಳಿಕರ್, ಹಣಮಂತ ಬೊಮ್ಮನಹಳ್ಳಿ, ಪ್ರಕಾಶ ಮಾಳಳ್ಳಿಕರ್, ಬಾಲರಾಜ ಬಸರಿಗಿಡ, ಮಲ್ಲಿಕಾರ್ಜುನ ಸೀನಪ್ಪ ಮನಿ, ಶಿವರಾಜ ಯಮನೂರ ಇತರರು ಭಾಗವಹಿಸಿದ್ದರು.



ಹುಣಸೂರು ತಾಲೂಕಿನ ಕೆಂಡಗಣ್ಣಸ್ವಾಮಿ ಗದ್ದಿಗೆ ಗ್ರಾಮದ ಶ್ರೀಭಗವದ್ಗೀತಾ ಮಂದಿರದಲ್ಲಿ ಶ್ರೀಮದ್ಭಗವದ್ಗೀತಾ ಪ್ರಚಾರ ಸಮಿತಿಯವರು ಆಯೋಜಿಸಿರುವ 38ನೇ ವರ್ಷದ ಶ್ರೀಭಗವದ್ಗೀತಾ ಜಯಂತೋತ್ಸವ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಭಾಗವಹಿಸಿ ಉದ್ದೇಶಿಸಿ ನಂತರ ಮಾತನಾಡಿದ್ದಾರ ನಂತರ ಸ್ಥಳೀಯರ ಗ್ರಾಮಸ್ಥರ ಹಾಗೂ ಮುಖಂಡರು ವತಿಯಿಂದ ಮಾಜಿ ಶಾಸಕ ಎಚ್ ಪಿ ಮಂಜುನಾಥ್ ರವರಿಗೆ ಸನ್ಮಾನಿಸಿ ಗೌರವಿಸಿದ್ದಾರೆ. ಈ ವೇಳೆ ತಹಸಿಲ್ದಾರ್ ಜೆ ಮಂಜುನಾಥ್, ಹುಣಸೂರು ಕಾಂಗ್ರೆಸ್ ಕಾರ್ಯಾಧ್ಯಕ್ಷ ಗದ್ದಿಗೆ ದೇವರಾಜ್ ಅಕ್ರಮ ಸಕ್ರಮ ಸಮಿತಿ ಸದಸ್ಯ ಗುಣಶೇಖರ್ ಸೇರಿದಂತೆ ಸಮಿತಿಯ ಸದಸ್ಯರು, ಗ್ರಾಮಸ್ಥರು, ಅಭಿಮಾನಿಗಳು ಭಾಗಿಯಾಗಿದ್ದರು.



ಬೀದರ್‌ನಲ್ಲಿ ನಡೆದ ಜಿಲ್ಲಾ ವರದಿಗಾರರ ಸಭೆಯಲ್ಲಿ ಪತ್ರಿಕೆಯ ವರದಿಗಾರರು, ಪ್ರಧಾನ ಸಂಪಾದಕರು, ವ್ಯವಸ್ಥಾಪಕ ನಿರ್ದೇಶಕರಾದ ರಮೇಶ್ ರೆಡ್ಡಿಯವರು ಹಾಜರಿದ್ದರು.

# ಮಧ್ಯಸ್ಥಿಕೆ ವಿಧಾನದಿಂದ ಬಾಕಿ ಪ್ರಕರಣ ಇತ್ಯರ್ಥ ಸಾಧ್ಯ

• ಮಲ್ಲಮ್ಮ ನುಡಿ ಕಾರವಾರ

ನ್ಯಾಯಾಲಯಗಳಲ್ಲಿ ಬಾಕಿ ಇರುವ 21 ಲಕ್ಷಕ್ಕೂ ಅಧಿಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ರಾಜಿ ಮತ್ತು ಮಧ್ಯಸ್ಥಿಕೆ ವಿಧಾನಗಳಿಂದ ಸಾಧ್ಯವಿದೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಭಾನುವಾರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆ, ಜಿಲ್ಲಾ ವಕೀಲರ ಸಂಘ ಕಾರವಾರ ಇವರ ಸಹಯೋಗದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರವಾರ ಕಚೇರಿಯ ಎ.ಡಿ.ಆರ್ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಪ್ರಸ್ತುತ ರಾಜ್ಯದ ಜಿಲ್ಲಾ ನ್ಯಾಯಲಯಗಳಲ್ಲಿ 21 ಲಕ್ಷಕ್ಕೂ ಹೆಚ್ಚು ಪ್ರಕರಣಗಳು ಬಾಕಿ ಇದ್ದು, ನಮ್ಮಲ್ಲಿರುವ ಸೀಮಿತ ಸಂಪನ್ಮೂಲಗಳನ್ನು ಗಮನಿಸಿದರೆ, ಈ ಬಾಕಿಯನ್ನು ಪರಿಹರಿಸಲು ನಾವು ವಿಭಿನ್ನವಾಗಿ ಕೆಲಸ ಮಾಡಬೇಕು ಅಥವಾ ಬೇರೆ ಬೇರೆ ಕೆಲಸಗಳನ್ನು ಮಾಡಬೇಕು. ಈ ನಿಟ್ಟಿನಲ್ಲಿ ಮಧ್ಯಸ್ಥಿಕೆ ಮತ್ತು ರಾಜಿ ವಿಧಾನಗಳಿಂದ ಹೆಚ್ಚಿನ ವಿವಾದ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸಾಧ್ಯವಿದೆ ಎಂದರು.



ಇತರೇ ತೀರ್ಪು ಪ್ರಕ್ರಿಯೆಯಲ್ಲಿ, ಒಬ್ಬ ವ್ಯಕ್ತಿ ಅಥವಾ ದಾವೆದಾರರು ಮೇಲುಗೈ ಸಾಧಿಸುತ್ತಾರೆ ಆದರೆ ಮಧ್ಯಸ್ಥಿಕೆಯಲ್ಲಿ, ವ್ಯಕ್ತಿ ಮೇಲುಗೈ ಸಾಧಿಸುವುದಿಲ್ಲ ಬದಲಾಗಿ ಪರಿಣಾಮಕಾರಿಯಾಗಿ, ವಿವಾದಗಳು ಬಗೆಹರಿಯಲಿವೆ ಮತ್ತು ಇದು ವ್ಯಕ್ತಿಗಳಲ್ಲಿ ಸಾಮರಸ್ಯ ಮತ್ತು ಶಾಂತಿಯನ್ನು ಬೆಳೆಸುತ್ತದೆ ಹಾಗೂ ನ್ಯಾಯಯುತ ಪರಿಹಾರವನ್ನು ಒದಗಿಸಲಿದೆ ಎಂದರು.

ಇಂದು ಉದ್ಘಾಟಿಸಿರುವ ಎ.ಡಿ.ಆರ್. ಕಟ್ಟಡವು ಮಧ್ಯಸ್ಥಿಕೆ ಮತ್ತು ಸಮಾಲೋಚನೆ ಕೊಠಡಿಗಳು, ರಾಜಿ ಸಭಾಂಗಣಗಳು, ಕುಟುಂಬ ಮತ್ತು ವಾಣಿಜ್ಯ ವಿವಾದ ಪರಿಹಾರಕ್ಕಾಗಿ ಸ್ಥಳಾವಕಾಶ, ಲೋಕ್ ಅದಾಲತ್ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲು ಮೂಲಸೌಕರ್ಯಗಳನ್ನು ಹೊಂದಿದ್ದು, ದಾವೆ–ಪೂರ್ವ ಮತ್ತು ವ್ಯಾಜ್ಯದ ನಂತರದ ಮಧ್ಯಸ್ಥಿಕೆ ಎರಡನ್ನೂ ಪರಿಣಾಮಕಾರಿಯಾಗಿ ನಿಭಾಯಿಸಲು ಅನುವು ಮಾಡಿಕೊಡುತ್ತದೆ. ಮಹಿಳೆಯರು, ಹಿರಿಯ ನಾಗರಿಕರು, ವಿಕಲಚೇತನರು ಮತ್ತು ದುರ್ಬಲ ಹಿನ್ನೆಲೆಯ ವ್ಯಕ್ತಿಗಳಿಗೆ ಪ್ರವೇಶಿಸಲು ಮತ್ತು ಸ್ನೇಹಪರವಾಗಿ ವಿನ್ಯಾಸಗೊಳಿಸಲಾಗಿದೆ. ತರಬೇತಿ ಪಡೆದ ಮಧ್ಯವರ್ತಿಗಳು, ಕಾನೂನು ನೆರವು ಸಲಹೆಗಾರರು– ಸಲಹೆಗಾರರು ಮತ್ತು ನಿರ್ವಾಹಕರು ತಮ್ಮ ಕರ್ತವ್ಯಗಳನ್ನು ನಿರ್ವಹಿಸಲು ಅನುಕೂಲವಾಗಿದೆ ಎಂದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯ ನಿರ್ವಾಹಕ ಅಧ್ಯಕ್ಷರಾದ ನ್ಯಾಯಮೂರ್ತಿ ಅನು ಶಿವರಾಮನ್ ಮಾತನಾಡಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಹಲವು ವರ್ಷಗಳಿಂದ ನ್ಯಾಯವನ್ನು ನ್ಯಾಯಾಲಯದ ಕೋಣೆಗಳಿಗೆ ಸೀಮಿತವಾಗಿಸದೇ ಸಾಮಾನ್ಯ ನಾಗರಿಕರ ಬದುಕನ್ನು ತಲುಪಲು ಶ್ರಮಿಸುತ್ತಿದೆ.

ಉತ್ತರ ಕನ್ನಡದ ಆಐಖಂ ಜನತೆ ಮತ್ತು ನ್ಯಾಯ ವಿತರಣಾ ವ್ಯವಸ್ಥೆಯ ನಡುವಿನ ಸೇತುವೆಯಾಗಿದೆ. ಈ ಹೊಸ ಕಟ್ಟಡದಲ್ಲಿ ಮಧ್ಯಸ್ಥಿಕೆ, ಸಮಾಲೋಚನೆ ಮತ್ತು ರಾಜೀ ಚರ್ಚೆಗಳ ಮೂಲಕ ಪ್ರಕರಣ ಇತ್ಯರ್ಥಪಡಿಸಲು ಸಾಧ್ಯವಾಗಲಿದೆ ಎಂದರು.

ಉಚ್ಚನ್ಯಾಯಾಲಯದ ನ್ಯಾಯಾಧೀಶರು ಹಾಗೂ ಉತ್ತರ ಕನ್ನಡ ಜಿಲ್ಲೆಯ ಆಡಳಿತಾತ್ಮಕ ನ್ಯಾಯ ಮೂರ್ತಿ ಪ್ರದೀಪ ಸಿಂಗ್ ಯರೂರ್ ಮಾತನಾಡಿ, ವಕೀಲರು, ಮಧ್ಯವರ್ತಿಗಳು, ನ್ಯಾಯಾಧೀಶರು ಒಟ್ಟಾಗಿ, ಪ್ರತಿಯೊಂದು ವಿವಾದದ ವಿಚಾರಣೆಯನ್ನು ದೀರ್ಘಕಾಲ ನಡೆಸಬಾರದು ಎಂಬ ಕಲ್ಪನೆಯನ್ನು ಸಾಮೂಹಿಕವಾಗಿ ಅಳವಡಿಸಿಕೊಳ್ಳಬೇಕು.

ಕಾರ್ಯಕ್ರಮದಲ್ಲಿ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಮತ್ತು ಹೈಕೋರ್ಟ್ ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷ ಎಸ್.ಜಿ ಪಂಡಿತ್, ಪ್ರಭಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಾಯಣ್ಣ ಬಿ.ಎಲ್ , ಕರ್ನಾಟಕ ಹೈಕೋರ್ಟ್ನ ರಿಜಿಸ್ಟ್ರಿ ಜನರಲ್ ಕೆ.ಎಸ್ ಭರತ್ ಕುಮಾರ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸಂತೋಷ್ ವಿ ಭಾಗ್ವತ್, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹೆಚ್. ಶಶಿಧರ ಶೆಟ್ಟಿ, ಹಿರಿಯ ಸಿವಿಲ್ ನ್ಯಾಯಾದೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ, ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ದಿಲೀಷ್ ಶಶಿ ಮತ್ತಿತರರು ಇದ್ದರು.

## ರೋಗಿಗಳಿಗೆ ಹಣ್ಣು ಹಂಪಲು ವಿತರಣೆ

• ಮಲ್ಲಮ್ಮ ನುಡಿ ಬೀದರ

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ 69ನೇ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಇಂಡಿಯನ್ ನ್ಯಾಷನಲ್ ಭೀಮ ಆರ್ಮಿ ಮತ್ತು ಜಿಲ್ಲಾ ಘಟಕದ ವತಿಯಿಂದ ಬೀದರ ಬ್ರೀಮ್ಸ್ ಆಸ್ಪತ್ರೆಯಲ್ಲಿ ಬಡ ರೋಗಿಗಳು ಹಾಗೂ ನಿರ್ಗತಿ–ಕರಿಗೆ ಹಣ್ಣು–ಹಂಪಲು ವಿತರಣೆ ಕಾರ್ಯಕ್ರಮ ಆಯೋಜಿಸಲಾಯಿತು.

ಸಾಮಾಜಿಕ ಬದ್ಧತೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ಕೈಗೊಂಡ ಈ ಮಾನವೀಯ ಸೇವಾ ಕಾರ್ಯದ ಮೂಲಕ ಅಂಬೇಡ್ಕರ್ ಅವರ ಪರಿನಿರ್ವಾಣ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸಂಸ್ಥಾಪಕ ಅಧ್ಯಕ್ಷ ದೀಲಿಪಕುಮಾರ ವರ್ಮಾ ಅವರು ಮಾತನಾಡಿ, "ಇಡೀ ಪ್ರಪಂಚದ 193 ರಾಷ್ಟಗಳು ತಮ್ಮ ರಾಷ್ಟಧ್ವಜವನ್ನು ಕೆಳಗಿಳಿಸಿ ಗೌರವ ನಮನ ಸಲ್ಲಿಸಿದ ಕೀರ್ತಿ ಡಾ. ಬಿ.ಆರ್. ಅಂಬೇಡ್ಕರ್ ಅವರದ್ದೇ. ರಷ್ಯಾದ ಅಧ್ಯಕ್ಷರ ಹೇಳಿಕೆಯಂತೆ 'ವಿಶ್ವದಲ್ಲಿ ಕ್ಷಣಕ್ಷಣಗೂ ಗೌರವಕ್ಕೆ ಪಾತ್ರರಾಗುತ್ತಿರುವ ವ್ಯಕ್ತಿ ಇದ್ದರೆ ಅದು ಅಂಬೇಡ್ಕರ್'" ಎಂದು ತಿಳಿಸಿದ್ದಾರೆ.



ಅವರು ಮುಂದುವರೆಸಿ, ಅಂಬೇಡ್ಕರ್ ರವರು ಸಮಾನತೆ, ಭಾತೃತ್ವ ಮತ್ತು ಸಹೋದರತೆ ಆಧಾರದ ಮೇಲೆ ಭಾರತದ ಸಂವಿಧಾನವನ್ನು ರೂಪಿಸಿದ ಮಹಾನ್ ವ್ಯಕ್ತಿತ್ವ. ಅವರ ಪರಿನಿರ್ವಾಣ ದಿನ ದೇಶಕ್ಕೆ ತುಂಬಲಾರದ ನಷ್ಟ ಎಂದು ಕಳಕಳಿಯಿಂದ ನುಡಿದರು.

ಕಾರ್ಯಕ್ರಮದಲ್ಲಿ ಇಂಡಿಯನ್ ನ್ಯಾಷನಲ್ ಭೀಮ ಆರ್ಮಿಯ ಉಪಾಧ್ಯಕ್ಷ ಅಶೋಕ ಭಾವಿದೊಡ್ಡಿ, ಪ್ರಮುಖರು ಪ್ರಕಾಶ ರಾವಣ, ರಾಘವೇಂದ್ರ ಮೀನಕೇರಾ, ಸಂಗಮೇಶ ಭಾವಿದೊಡ್ಡಿ, ಯಾದುಲ್ ವಲ್ಲಾಪೂರೆ, ಜಗನ್ನಾಥ ಹೊನ್ನಾ, ಗೌತಮ ದೊಡ್ಡಿ, ರಮೇಶ ಮಾನೆ, ಉತ್ತಮ ಕೆಂಪೆ ಸೇರಿದಂತೆ ಅನೇಕ ಸದಸ್ಯರು ಉಪಸ್ಥಿತರಿದ್ದರು.

## ವಸತಿ ನಿಲಯಕ್ಕೆ 10 ಲಕ್ಷ ಅನುದಾನ

• ಮಲ್ಲಮ್ಮ ನುಡಿ ರಾಯಚೂರು

ನಗರದ ಜಿಲ್ಲಾ ಯಾದವ ಸಮಾಜದಲ್ಲಿ ಎರಡು ತರಗತಿ ಕೋಣೆಗಳು ಹಾಗೂ ವಸತಿ ನಿಲಯ ಕಟ್ಟಡ ನಿರ್ಮಾಣಕ್ಕೆ ವಿಧಾನ ಪರಿಷತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ವಿಧಾನ ಪರಿಷತ್ ಸದಸ್ಯರಾದ ಎ. ವಸಂತಕುಮಾರ ಅವರು ಸುಮಾರು ₹80 ಲಕ್ಷ ಅನುದಾನದಲ್ಲಿ ಭೂಮಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಎ. ವಸಂತಕುಮಾರ ಅವರು, ಜಿಲ್ಲೆಯಲ್ಲಿ ಯಾದವ ಸಮಾಜ ಶೈಕ್ಷಣಿಕವಾಗಿ ಹಿಂದುಳಿದಿರುವ ಹಿನ್ನೆಲೆಯಲ್ಲಿ ಸಮಾಜದ ಮಕ್ಕಳ ಶೈಕ್ಷಣಿಕ ಭವಿಷ್ಯವನ್ನು ಗಮನದಲ್ಲಿಟ್ಟು ಸಮಾಜದಿಂದ ನಡೆಸಲಾಗುತ್ತಿರುವ ಪ್ರೌಢಶಾಲೆಯನ್ನು ಮೇಲ್ದರ್ಜೆಗೆ ಏರಿಸುವ ಉದ್ದೇಶದಿಂದ ₹30 ಲಕ್ಷ ಅನುದಾನದಲ್ಲಿ ಎರಡು ತರಗತಿ ಕೋಣೆಗಳನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು. ಜೊತೆಗೆ ಯಾದವ ಸಮಾಜದ ವಸತಿ ನಿಲಯ ಕಟ್ಟಡ ನಿರ್ಮಾಣಕ್ಕೆ ₹50 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ ಎಂದರು. ಮುಂದಿನ ದಿನಗಳಲ್ಲಿ ಸಮಾಜದ ಶಿಕ್ಷಣಾಭಿವೃದ್ಧಿಗೆ ಇನ್ನಷ್ಟು ಅನುದಾನ ನೀಡುವುದಾಗಿ ಭರವಸೆ ನೀಡಿದರು.



ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ನಗರಸಭೆ ಅಧ್ಯಕ್ಷ ಎ. ಮಾರೆಪ್ಪ ಅವರು, ಸಮಾಜದ ಬೆಳವಣಿಗೆಯಲ್ಲಿ ಎ. ವಸಂತಕುಮಾರ ಅವರ ಪಾತ್ರ ಮಾದರಿ ಜನಪ್ರತಿನಿಧಿಯ ಪ್ರತೀಕವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಯಾದವ ಸಮಾಜದ ಜಿಲ್ಲಾ ಅಧ್ಯಕ್ಷ ಕೆ. ಹನುಮಂತಪ್ಪ ಅವರು ಮಾತನಾಡಿ, ಕಳೆದ ಮೂರು ದಶಕಗಳಿಂದ ಸರ್ಕಾರದಿಂದ ಯಾವುದೇ ರೀತಿಯ ಅನುದಾನ ಲಭ್ಯವಾಗಿರಲಿಲ್ಲ. ಇಂತಹ ಸಂದರ್ಭದಲ್ಲಿ ₹80 ಲಕ್ಷ ಅನುದಾನ ನೀಡಿದ ಎ. ವಸಂತಕುಮಾರ ಅವರ ಸಹಕಾರ ಸಮಾಜಕ್ಕೆ ಗೌರವದ ವಿಷಯವಾಗಿದ್ದು, ಅವರ ನೆರವನ್ನು ಸಮಾಜ ಎಂದಿಗೂ ಮರೆಯುವುದಿಲ್ಲ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎ. ಮಾರೆಪ್ಪ ವಕೀಲರು, ತಮ್ಮಪ್ಪ ಮರ್ಚೆಟಾಳ, ದಾನಪ್ಪ ಯಾದವ, ವೆಂಕಟರೆಡ್ಡಿ ಯಾದವ, ಶಿವಕುಮಾರ ಯಾದವ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಮಧುಗಿರಿ ಕಾರಾಗೃಹದಲ್ಲಿ ಮಿಂಚಿದ ಕವಿಗೋಷ್ಠಿ

• ಮಲ್ಲಮ್ಮ ನುಡಿ ಬೆಂಗಳೂರು

ಪ್ರಬುದ್ಧ ಪ್ರಬಲ ಸದ್ಗುಣಗಳಿಂದ ಕೂಡಿದ ಕವಿಗೋಷ್ಠಿಯಾಗಿದ್ದು ಹಲವಾರು ಆಯಾಮಗಳಲ್ಲಿ ವಿವಿಧ ಯುವಕವಿಗಳಲ್ಲಿ ಭರವಸೆ ಮೂಡಿಸಿರುವ ಜ್ಞಾನದ ಸಂಕೇತ ಇದಾಗಿದೆ ಎಂದು ಡಾ.ಸಂಗನಬಸಪ್ಪ ಬಿರಾದಾರ ಹೇಳಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಕನ್ನಡ ಸಾಹಿತ್ಯ ಪರಿಷತ್ತುನಿಂದ ವಿಶೇಷವಾದ ವಿನೂತನವಾದ ಮತ್ತು ಕರ್ನಾಟಕದಲ್ಲಿ ಇತಿಹಾಸ ಸೃಷ್ಟಿಸುವ ಕಾರಾಗೃಹದಲ್ಲಿ ಕವಿಗೋಷ್ಠಿ ಎಂಬ ಕಾರ್ಯಕ್ರಮವನ್ನು ಮಧುಗಿರಿ ತಾಲ್ಲೋಕಿನ ಕಾರಾಗೃಹದಲ್ಲಿ ಆಯೋಜಿಸಲಾಗಿತ್ತು.

ಜೈಲಿನಲ್ಲಿರುವ ವಿಚಾರಧೀನ ಖೈದಿಗಳ ಮನ ಪರ್ವತನೆಯ ಕಾರ್ಯಕ್ರಮವು ಇದಾಗಿದ್ದು ಗಣ್ಯ ಮಾನ್ಯರು, ಸರ್ಕಾರಿ ಅಧಿಕಾರಿಗಳು ಹಾಗೂ ಸಾಹಿತಿಗಳ ಸಮ್ಮುಖದಲ್ಲಿ ಹಲವಾರು ವಿವರಗಳಿಂದ ವಿವರಣೆಯನ್ನು ಕೊಟ್ಟು ಕಾರ್ಯಕ್ರಮದ ದೈನಂದಿನ ಪತ್ರಿಕೆಯಲ್ಲಿ ಸ್ಥಳೀಯ ಸುದ್ದಿ ಮಾಧ್ಯಮಗಳಲ್ಲಿ ಟಿವಿ ಚಾನಲ್ ಗಳಲ್ಲಿ ಪ್ರಸಾರಗೊಳ್ಳುತ್ತಿದೆ.ಎಂದರು.




ಈ ಕಾರ್ಯಕ್ರಮಕ್ಕೆ ಜೈಲಿನ ಅಧಿಕ್ಷಕರಾದ ಬಸವರಾಜು ರಾಮಾಪುರಿ, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರು, ಸಮಾಜ ಸೇವಕರು, ಸಂಗನಬಸಪ್ಪ ಬಿರಾದಾರ ಹಾಗೂ ಯುವ ಮುಖಂಡ ಸಮಾಜ ಸೇವಕ ಭರತ್ ಗುಂಡಪ್ಪ, ಉಜ್ವಲ ಅಕಾಡೆಮಿಯ ಮಂಜುನಾಥ್, ಲೋಕಪಾಲ ಶಾಲೆಯ ವಿಷಕಂತಯ್ಯ, ಹಾಗೂ ಸಿಡದರಗಲ್ಲು ರಂಗನಾಥ್ , ಗಾಯಕ ಶೇಖರ್ ಪತ್ರಕರ್ತರಾದ ಪ್ರಶಾಂತ್ ಗೌಡ, ನಂದೀಶ್ ರವರು ಭಾಗವಹಿಸಿದ್ದರು.

ಬೆಂಗಳೂರಿನ ದಾಸರಹಳ್ಳಿ ಕ್ಷೇತ್ರದ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಲ್ ಕಾಳೇನಹಳ್ಳಿ ಮೇಷ್ಟು ನಿರೂಪಣೆ ಮಾಡಿ ಕವಿಗಳು ಮತ್ತು 59 ವಿಚಾರಣಾಧೀನ ಖೈದಿಗಳ ಮುಖದಲ್ಲಿ ಮಂದಹಾಸ ಮನೆ ಮಾಡಿದ್ದು ಇಂಥ ಒಂದು ಸುಂದರ ಕಾರ್ಯಕ್ರಮ ನಡೆಸಲು ಸಹಕರಿಸಿದ ಪ್ರತಿಯೊಬ್ಬರಿಗೂ ಹೃದಯಪೂರ್ವಕವಾದಂತ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

## ಸತತ 11 ನೇ ಬಾರಿ ಸಾರಿಗೆಗೆ ಪ್ರಶಸ್ತಿ



• ಮಲ್ಲಮ್ಮ ನುಡಿ ರಾಜಭವನ, ಬೆಂಗಳೂರು

ಸಶಸ್ತ್ರಪಡೆಗಳ ಧ್ವಜ ದಿನಾಚರಣೆಯ ಸಮಾರಂಭದಲ್ಲಿ ರಾಜ್ಯದ ಸರ್ಕಾರಿ ಸಂಸ್ಥೆಗಳ ಪೈಕಿ ಹೆಚ್ಚು ಸಶಸ್ತ್ರ ಪಡೆಗಳ ಧ್ವಜ ನಿಧಿ ಸಂಗ್ರಹಣಾ ಮಾಡಿರುವ ( ನಿಗದಿಗೊಳಿಸಿರುವುದಕ್ಕಿಂತ ಹೆಚ್ಚು) ಸಂಸ್ಥೆಯ ಪ್ರಶಸ್ತಿಯು ಕೆ ಎಸ್ ಆರ್ ಟಿ ಸಿ ಗೆ ಸತತ 11 ನೇ ಬಾರಿ ಲಭಿಸಿರುತ್ತದೆ. ಈ ಪ್ರಶಸ್ತಿಯನ್ನು ಡಾ. ಜಿ. ಪರಮೇಶ್ವರ, ಮಾನ್ಯ ಗೃಹ ಸಚಿವರು ಕರ್ನಾಟಕ ಸರ್ಕಾರ ರವರು, ಕೆ ಎಸ್ ಆರ್ ಟಿ ಸಿ ಯ ನಿರ್ದೇಶಕರು (ಸಿಬ್ಬಂದಿ ಮತ್ತು ಜಾಗೃತ) ರಾದ ಡಾ. ನಂದಿನಿದೇವಿ ಕೆ. ಭಾಆಸೇ., ರವರಿಗೆ ಪ್ರದಾನ ಮಾಡಿದರು.

ಶ್ರೀ ಕೆ.ವಿ. ಶರತ ಚಂದ್ರ, ಭಾ.ಪೊ.ಸೇ., ಪ್ರಧಾನ ಕಾರ್ಯದರ್ಶಿಗಳು, ಗೃಹ ಇಲಾಖೆ, ಫ್ಲೈಟ್ ಲೆಫ್ಟಿನೆಂಟ್ ಎಮ್. ಎಸ್. ಲೋಲಾಕ್ಷ (ನಿವೃತ್ತ), ನಿರ್ದೇಶಕರು (ಪ್ರ), ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ರವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕಾಶಿ ಜಗದ್ಗುರು ಭವ್ಯ ಉತ್ಸವ ಡಿ. 15ಕ್ಕೆ

### ವೀರಭದ್ರೇಶ್ವರ ಜಾತ್ರೆಯ ಸಚಿವ ಈಶ್ವರ ಖಂಡ್ರೆಯಿಂದ ಭಿತ್ತಿ ಪತ್ರ ಲೋಕಾರ್ಪಣೆ

• ಮಲ್ಲಮ್ಮ ನುಡಿ ಬೀದರ್

ತಾಲ್ಲೂಕಿನ ಕಮಠಾಣದಲ್ಲಿ ಡಿ. 14 ರಿಂದ 16 ರ ವರೆಗೆ ನಡೆಯಲಿರುವ ಶರಭಾವತಾರ ವೀರಭದ್ರೇಶ್ವರ ಜಾತ್ರಾ ಮಹೋತ್ಸವದ ಭಿತ್ತಿ ಪತ್ರವನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ನಗರದಲ್ಲಿ ಶನಿವಾರ ಬಿಡುಗಡೆ ಮಾಡಿದರು.

ಕಾಶಿ ಜಗದ್ಗುರು ಡಾ. ಚಂದ್ರಶೇಖರ ಶಿವಾಚರ್ಯರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲಿರುವುದು ಸಂತಸದ ಸಂಗತಿ. ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಜಾತ್ರೆಯಲ್ಲಿ ಪಾಲ್ಗೊಂಡು ವೀರಭದ್ರೇಶ್ವರ ಹಾಗೂ ಕಾಶಿ ಜಗದ್ಗುರುಗಳ ರ್‍ಯನಾಶರ್‍ವಾದ ಪಡೆಯಬೇಕು ಎಂದು ಅವರು ಹೇಳಿದರು.

ಡಿ.14 ರಿಂದ ಮೂರು ದಿನ ಶರಭಾವತಾರ ವೀರಭದ್ರೇಶ್ವರ ಜಾತ್ರೆ ಜರುಗಲಿದೆ. ಡಿ. 15 ರಂದು ಕಾಶಿ ಜಗದ್ಗುರುಗಳ ಭವ್ಯ ಉತ್ಸವ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿಯ ಪ್ರಮುಖರು ತಿಳಿಸಿದರು. ಡಿ.14 ರಂದು ಜಾತ್ರೆ ಉದ್ಘಾಟನೆ, ದೀಪೋತ್ಸವ, ಪಲ್ಲಕ್ಕಿ ಉತ್ಸವ, 15 ರಂದು ರಥೋತ್ಸವ, 16 ರಂದು ಜಂಗಿ ಕುಸ್ತಿ ಹಾಗೂ ಇತರ ಕರ್‍ಯಕ್ರಮಗಳು ಜರುಗಲಿವೆ ಎಂದು ಹೇಳಿದರು.



ಬೇಮಳಖೇಡ ಆಶ್ರಮದ ಡಾ. ರಾಜಶೇಖರ ಶಿವಾಚರ್ಯ, ಕೇಂದ್ರ ರ್‍ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ, ನಾರಂಜಾ ಸಹಕಾರ ಸಕ್ಕರೆ ಕರ್‍ಖಾನೆಯ ನರ್‍ದೇಶಕ ಕುಶಾಲರಾವ್ ಯಾಬಾ, ಮುಖಂಡರಾದ ಸಂತೋಷ್ ಪಾಟೀಲ ಅಯಾಸಪುರ, ಗೋಕುಲಕಸಿಂಗ್ ರಾಜಪೂತ್, ಸುನೀಲ್ ಕಾಶೆಂಪುರ, ಮಲ್ಲಿಕರ್‍ಜುನ ಔರಾದೆ, ಮಹೇಶ ಪಾಟೀಲ, ಮಾಣಿಕ ಯಾಬಾ, ಕಂಟೆಪ್ಪ ಭಂಗೂರೆ, ರಾಜಕುಮಾರ ಪಾಟೀಲ, ಬಸವರಾಜ ಹೂಗಾರ ಮತ್ತಿತರರು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)